ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ



ಸ್ವಾತಂತ್ರ್ಯ - ಸಮಾನತೆ - ಭ್ರಾತೃತ್ವ




29,85,921 ಜನರು | 59,71,842 ಕೈಗಳು | 2,500 ಕಿ. ಮೀ. | 1 ಉದ್ದೇಶ

ಪ್ರಜಾಪ್ರಭುತ್ವವನ್ನು ಬೆಂಬಲಿಸುವ ಏಕೈಕ ಧ್ಯೇಯದೊಂದಿಗೆ 2,500 ಕಿ. ಮೀ. ಉದ್ದದ ಮಾನವ ಸರಪಳಿ ರಚಿಸಿದ

# ಕರ್ನಾಟಕ ಜನತೆಗೆ ಧನ್ಯವಾದ

ಅಂದ ಹಾಗೆ ಇದು

# ಹೊಸ ವಿಶ್ವದಾಖಲೆ!



ಮಾನವ ಸರಪಳಿ ರೂಪಿಸುವ ಮೊದಲು, ಸನ್ಮಾನ್ಯ ವಿಧಾನ ಪರಿಷತ್ ಸಭಾಪತಿಗಳಾದ ಶ್ರೀ ಬಸವರಾಜ ಹೊರಟ್ಟಿ, ಸನ್ಮಾನ್ಯ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ, ಮಾನ್ಯ ಸಮಾಜ ಕಲ್ಯಾಣ ಸಚಿವರಾದ ಡಾ. ಹೆಚ್.ಸಿ. ಮಹದೇವಪ್ಪ ಜೊತೆಗೆ ರಾಯಭಾರಿಗಳಾದ ಪದ್ಮಶ್ರೀ ಹರೇಕಳ ಹಾಜಬ್ಬ ಮತ್ತು ಸಚಿವ ಸಂಪುಟದ ಸಹೋದ್ಯೋಗಿಗಳು ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನವಾದ ಸೆಪ್ಟೆಂಬರ್ 15, 2024 ರಂದು ವಿಧಾನಸೌಧದ ಭವ್ಯ ಮೆಟ್ಟಿಲುಗಳ ಮೇಲೆ ಸಹಸ್ರಾರು ಜನರೊಂದಿಗೆ ಸಂವಿಧಾನ ಪೀಠಿಕೆ ವಾಚನ.

ಸಮಾಜ ಕಲ್ಯಾಣ ಇಲಾಖೆ | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ | ನಗರಾಭಿವೃದ್ಧಿ ಇಲಾಖೆ | ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ | ಉನ್ನತ ಶಿಕ್ಷಣ ಇಲಾಖೆ | ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ | ಕನ್ನಡ ಮತ್ತು ಸಂಸ್ಕೃತಿ ಇಲಾಖೆ | # ಸಂವಿಧಾನ_ಮರುಪಡೆಯುವ | ರೋಟರಿ ಇಂಟರ್‌ನ್ಯಾಷನಲ್ | ಕೆನರಾ ಬ್ಯಾಂಕ್ | ಸಿವಿಲ್ ಸೊಸೈಟಿ / ಎನ್‌ಜಿಒ ಗಳು ಮತ್ತು ಪ್ರತ್ಯಕ್ಷವಾಗಿ ಹಾಗೂ ಪರೋಕ್ಷವಾಗಿ ಸಹಕಾರ ನೀಡಿದ ಎಲ್ಲರಿಗೂ ಧನ್ಯವಾದಗಳು

ಸಂವಿಧಾನವನ್ನು ಪಾಲಿಸುವುದು, ಅದರ ಆಶಯಗಳನ್ನು ಗೌರವಿಸುವುದು, ರಾಷ್ಟ್ರಧ್ವಜ ಮತ್ತು ರಾಷ್ಟ್ರಗೀತೆಯನ್ನು ಗೌರವಿಸುವುದು.
-ಪ್ರತಿಯೊಬ್ಬ ಭಾರತೀಯರ ಸಂವಿಧಾನಬದ್ಧ ಮೂಲಭೂತಕರ್ತವ್ಯ

Canara Bank | LIDKAR | MSIL | #RECLAIM CONSTITUTION

ConstitutionGok
https://www.democracydaykarnataka.in
9482 300 400



## ಜಲ ಸಂಪನ್ಮೂಲ ಇಲಾಖೆ
## ಕರ್ನಾಟಕ ನೀರಾವರಿ ನಿಗಮ ನಿಯಮಿತ



ಶ್ರೀ ಸಿದ್ದರಾಮಯ್ಯ
ಸನ್ಮಾನ್ಯ ಮುಖ್ಯಮಂತ್ರಿಗಳು



ಶ್ರೀ ಡಿ.ಕೆ. ಶಿವಕುಮಾರ್
ಮಾನ್ಯ ಉಪಮುಖ್ಯಮಂತ್ರಿಗಳು



# ತುಂಗಭದ್ರಾ ಜಲಾಶಯ

ಭರ್ತಿಯಾಗಿರುವ ಸಮೃದ್ಧಿಯ ಸಂಕೇತದ ಶುಭ ಸಂದರ್ಭದಲ್ಲಿ
ಸನ್ಮಾನ್ಯ ಮುಖ್ಯಮಂತ್ರಿಗಳಾದ **ಶ್ರೀ ಸಿದ್ದರಾಮಯ್ಯ** ರವರು
ಹಾಗೂ ಮಾನ್ಯ ಉಪಮುಖ್ಯಮಂತ್ರಿಗಳಾದ **ಶ್ರೀ ಡಿ.ಕೆ. ಶಿವಕುಮಾರ್** ರವರಿಂದ

**ಪೂಜೆ, ಬಾಗಿನ ಸಮರ್ಪಣೆ** ಹಾಗೂ

ಅಣೆಕಟ್ಟೆಯ ಮುರಿದು ಹೋದ ಕ್ರೆಸ್ಟ್ ಗೇಟ್-19 ಅನ್ನು ಕೇವಲ ಒಂದೇ ವಾರದೊಳಗೆ ನಿರ್ಮಿಸಿ, ಅಳವಡಿಸಿದ ನಿಗಮದ ಅಧಿಕಾರಿಗಳು, ತಂತ್ರಜ್ಞರು, ಸಿಬ್ಬಂದಿಗಳು ಹಾಗೂ ಗೇಟ್ ನಿರ್ಮಾಣ ಸಂಸ್ಥೆಯ ಪ್ರತಿನಿಧಿಗಳಿಗೆ

**ಅಭಿನಂದನಾ ಕಾರ್ಯಕ್ರಮ**

ದಿನಾಂಕ : 22.09.2024, ಭಾನುವಾರ,
ಬೆಳಿಗ್ಗೆ 11.00 ಗಂಟೆಗೆ
ಸ್ಥಳ : ತುಂಗಭದ್ರಾ ಜಲಾಶಯದ ಬಳಿ,
ಮುನಿರಾಬಾದ್ ತಾಲ್ಲೂಕು, ಕೊಪ್ಪಳ ಜಿಲ್ಲೆ.

### ಘನ ಉಪಸ್ಥಿತಿ

**ಶ್ರೀ ಬಿ.ಝಡ್. ಜಮೀರ್ ಅಹ್ಮದ್ ಖಾನ್**
ಮಾನ್ಯ ಸಚಿವರು, ವಸತಿ ಹಾಗೂ ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ
ವಿಜಯನಗರ ಜಿಲ್ಲಾ ಉಸ್ತುವಾರಿ ಸಚಿವರು

**ಶ್ರೀ ಶಿವರಾಜ್ ಎಸ್. ತಂಗಡಗಿ**
ಮಾನ್ಯ ಸಚಿವರು, ಕನ್ನಡ ಮತ್ತು ಸಂಸ್ಕೃತಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರು

**ಶ್ರೀ ಎನ್.ಎಸ್. ಬೋಸರಾಜು**
ಮಾನ್ಯ ಸಚಿವರು, ಸಣ್ಣ ನೀರಾವರಿ ಹಾಗೂ ವಿಜ್ಞಾನ, ತಂತ್ರಜ್ಞಾನ ಇಲಾಖೆ

**ಶ್ರೀ ಈ. ತುಕಾರಾಂ**
ಮಾನ್ಯ ಸಂಸದರು,
ಬಳ್ಳಾರಿ ಲೋಕಸಭಾ ಕ್ಷೇತ್ರ

**ಶ್ರೀ ಹೆಚ್. ಆರ್. ಗವಿಯಪ್ಪ**
ಮಾನ್ಯ ಶಾಸಕರು,
ವಿಜಯನಗರ (ಹೊಸಪೇಟೆ) ವಿಧಾನಸಭಾ ಕ್ಷೇತ್ರ

**ಶ್ರೀ ಕೆ. ರಾಜಶೇಖರ ಹಿಟ್ನಾಳ್**
ಮಾನ್ಯ ಸಂಸದರು
ಕೊಪ್ಪಳ ಲೋಕಸಭಾ ಕ್ಷೇತ್ರ

**ಶ್ರೀ ಕೆ. ರಾಘವೇಂದ್ರ ಹಿಟ್ನಾಳ್**
ಮಾನ್ಯ ಶಾಸಕರು,
ಕೊಪ್ಪಳ ವಿಧಾನಸಭಾ ಕ್ಷೇತ್ರ

**ಮುಖ್ಯ ಅತಿಥಿಗಳು**
ಮಾನ್ಯ ಲೋಕಸಭಾ ಮತ್ತು ರಾಜ್ಯಸಭಾ ಸದಸ್ಯರುಗಳು, ವಿಧಾನಸಭಾ ಮತ್ತು ವಿಧಾನ ಪರಿಷತ್ ಸದಸ್ಯರುಗಳು, ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರುಗಳು, ನಿಗಮ ಮಂಡಳಿ ಅಧ್ಯಕ್ಷರುಗಳು ಹಾಗೂ ಎಲ್ಲಾ ಚುನಾಯಿತ ಜನಪ್ರತಿನಿಧಿಗಳು

**ಸಮಸ್ತ ನಾಗರಿಕರು, ರೈತ ಬಾಂಧವರು ಬನ್ನಿ, ಪಾಲ್ಗೊಳ್ಳಿ**

ಶ್ರೀ ಗೌರವ್ ಗುಪ್ತ, ಭಾ.ಆ.ಸೇ
ಅಪರ ಮುಖ್ಯ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ

ಶ್ರೀ ಕೃಷ್ಣಮೂರ್ತಿ ಬಿ. ಕುಲಕರ್ಣಿ, ಕೆ.ಇ.ಎಸ್.
ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ

ಶ್ರೀ ರಾಜೇಶ್ ಅಮ್ಮಿನಭಾವಿ, ಕೆ.ಇ.ಎಸ್.
ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ

ನಾಡಿನ ನೈಸರ್ಗಿಕ ಪರಿಸರವನ್ನೊಳಗೊಂಡ ಅರಣ್ಯಗಳು, ಸರೋವರಗಳು, ನದಿಗಳು ಹಾಗೂ ವನ್ಯ ಜೀವಿಗಳನ್ನು ಸಂರಕ್ಷಿಸುವುದು ಹಾಗೂ ಉತ್ತಮಗೊಳಿಸುವುದು ಪ್ರತಿಯೊಬ್ಬ ನಾಗರೀಕನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ

## ನಿತ್ಯ ಪಂಚಾಂಗ 22.09.2024 ಭಾನುವಾರ



ಶ್ರೀ ಕ್ರೋಧಿ ನಾಮ ಸಂವತ್ಸರ,
ಉತ್ತರಾಯಣ–ವಸಂತ ಋತು,
ಚಾಂದ್ರಮಾನ, ಭಾದ್ರಪದ ಬಹುಳ

ಪಂಚಮಿ, ಭರಣಿ ನಕ್ಷತ್ರ, (ಕೃತ್ತಿಕ)
ವಿಶ್ವಕರ್ಮ ಪೂಜೆ, ರೋಸ್ ಡೇ,
(ಕ್ಯಾನ್ಸರ್ ರೋಗಿಗಳ ಯೋಗಕ್ಷೇಮ)
ಮಹಾಭರಣಿ ಶ್ರಾದ್ಧ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 –12.00 | 1.30 – 3.00 |
| ಮಂಗಳ | 3.00 – 4.30 | 9.00 –10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 –12.00 |
| ಗುರು | 1.30 – 3.00 | 6.00 – 7.30 | 9.00 –10.30 |
| ಶುಕ್ರ | 10.30 –12.00 | 3.00 – 4.30 | 7.30 – 9.00 |
| ಶನಿ | 9.00 –10.30 | 1.30 – 3.00 | 6.00 – 7.30 |

# ಪತ್ರಕರ್ತನ ಕುಟುಂಬಕ್ಕೆ 2 ಲಕ್ಷ ರೂ. ಪರಿಹಾರ ಮಂಜೂರು ಮಾಡಿದ ಸಿಎಂ



**ಬೆಂಗಳೂರು, ಸೆ.21:** ಹಾಸನ ಜಿಲ್ಲೆ ಚನ್ನರಾಯಪಟ್ಟಣದ ಹಿರಿಯ ಪತ್ರಕರ್ತ ಟಿ.ಜಿ.ಹೇಮಕುಮಾರ್ ಅವರ ನಿಧನದಿಂದ ಸಂಕಷ್ಟದಲ್ಲಿರುವ ಈ ಕುಟುಂಬಕ್ಕೆ ನೆರವು ನೀಡುವಂತೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಮನವಿ ಮೇರೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, 2 ಲಕ್ಷ ರೂ ಪರಿಹಾರ ಮಂಜೂರು ಮಾಡಿದ್ದಾರೆ. ಜ್ಞಾನ ದೀಪ, ಜನಮಿತ್ರ, ಹಾಸನಮಿತ್ರ, ನಾಡಸಹ್ಯಾದ್ರಿ ಸೇರಿದಂತೆ ಹಲವು ಮಾಧ್ಯಮದಲ್ಲಿ ಕೆಲಸ ಮಾಡಿದ್ದ ಹೇಮಕುಮಾರ್ ಅವರಿಗೆ ಪತ್ನಿ ಮತ್ತು ಮಗಳಿದ್ದಾರೆ.

ಅಪ್ಪನ ಸಾವಿನ ಬಳಿಕ ಕುಟುಂಬ ನಿರ್ವಹಣೆಗಾಗಿ ಅದೇ ವೃತ್ತಿಯನ್ನು (ಪತ್ರಿಕೆ ಹಾಕುವುದು ಸೇರಿ) ಪುತ್ರಿ ವಿದ್ಯಾ ಮುಂದುವರಿಸಿದ್ದಾರೆ. ಕುಟುಂಬ ತೀವ್ರ ಸಂಕಷ್ಟದಲ್ಲಿರುವ ಬಗ್ಗೆ ಮುಖ್ಯಮಂತ್ರಿ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಗಮನಕ್ಕೆ ತಂದಿದ್ದ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಈ ಬಗ್ಗೆ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿ, ಪರಿಹಾರ ಕೋರಿದ್ದರು.

ಕೆಯುಡಬ್ಲ್ಯೂಜೆ ಸಲ್ಲಿಸಿದ ಕೋರಿಕೆಯ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 2 ಲಕ್ಷ ಪರಿಹಾರ ಮಂಜೂರು ಮಾಡಿದ್ದಾರೆ.

ಪರಿಹಾರ ಮಂಜೂರು ಮಾಡಿದ ಸಿಎಂ ಸಿದ್ದರಾಮಯ್ಯ ಅವರಿಗೆ, ಈ ನಿಟ್ಟಿನಲ್ಲಿ ಸಹಕಾರ ನೀಡಿದ ಕೆ.ವಿ.ಪ್ರಭಾಕರ್ ಅವರಿಗೆ ಕೆಯುಡಬ್ಲ್ಯೂಜೆ ಕೃತಜ್ಞತೆ ಸಲ್ಲಿಸಿದೆ.



ಮೈಸೂರಿನ ಜೆಎಸ್ಎಸ್ ಸಂಸ್ಥೆಯ ಜೆಸಿಇ ಕಾಲೇಜು ಆವರಣದಲ್ಲಿ ಶನಿವಾರ ನಡೆದ ಪೂಜ್ಯ ಜಗದ್ಗುರು ಡಾ.ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳ 109ನೇ ಜನ್ಮದಿನೋತ್ಸವವನ್ನು ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ.ಸಿ.ಸೋಮಶೇಖರ್ ಅವರು ಉದ್ಘಾಟಿಸಿದರು. ಸಮಾರಂಭದಲ್ಲಿ ಹಿರಿಯ ಅಧಿಕಾರಿ ಡಾ. ಶಿವರಾಜ್, ಉಪಕುಲಪತಿ ಡಾ.ಸಂತೋಷ್ ಕುಮಾರ್ ಇನ್ನಿತರ ಗಣ್ಯರು ಭಾಗವಹಿಸಿದ್ದರು

# ನಿವೃತ್ತರ ಪರಿಷ್ಕೃತ ಹೊಸ ಮಾಸಿಕ ಪಿಂಚಣಿ ವಿಳಂಬವಾಗದಂತೆ ದೊರಕಿಸಿಕೊಡಲು ರಾಜ್ಯ ನೌಕರರ ಸಂಘಕ್ಕೆ ಆಗ್ರಹ



ಬೆಂಗಳೂರು, ಸೆ.21: ಏಳನೇ ವೇತನ ಆಯೋಗದ ಅನುಸಾರ ದಿ.1–7–2024 ರಿಂದ 31–7–2024 ರ ಅವಧಿಯಲ್ಲಿ ಸೇವಾ ನಿವೃತ್ತಿ ಹೊಂದಿದ ನೌಕರರು ಹೊಸ ಮಾಸಿಕ ಪಿಂಚಣಿ ಪಡೆದುಕೊಳ್ಳುವಲ್ಲಿ ಎ.ಜಿ.ಕಚೇರಿ, ಖಜಾನೆ ಕಚೇರಿ ಹಾಗೂ ವೇತನ ಸೆಳೆಯುವ ಅಧಿಕಾರಿಗಳನ್ನು ಖುದ್ದಾಗಿ ಭೇಟಿಯಾಗಿ ಮಾಹಿತಿ ಸಂಗ್ರಹಿಸಲಾಗಿ, ದ್ವಂದ್ವ ವಿಭಿನ್ನ ಗೊಂದಲಮಯ ಮಾಹಿತಿ ಹೇಳುತ್ತಿದ್ದಾರೆ. ಅಲ್ಲದೆ ಹೊಸ ಮಾಸಿಕ ಪಿಂಚಣಿ ಪಡೆಯುವವರು ನಲವತ್ತು ಸಾವಿರದಷ್ಟಿದ್ದು ಈ ಬದಲಾದ ಆರ್ಥಿಕ ಸೌಲಭ್ಯ ದೊರಕಿಸಲು ನಾಲ್ಕರಿಂದ ಆರು ತಿಂಗಳು ಆಗಬಹುದೆಂದು ಹೇಳಲಾಗುತ್ತಿದೆ.

ಈ ಹಿನ್ನೆಲೆಯಲ್ಲಿ ಸರ್ಕಾರದಿಂದ ಆರ್ಥಿಕ ಇಲಾಖೆಯಿಂದ ಎ.ಜಿ.ಕಚೇರಿಯಿಂದ ಏಕರೂಪದ ಆದೇಶವನ್ನು ವೇತನ ಸೆಳೆಯುವ ಸರ್ವ ಹಂತದ ಅಧಿಕಾರಿಗಳವರಿಗೆ ಒಂದು ತುರ್ತು ಆದೇಶ ಹೊರಡಿಸುವಲ್ಲಿ ಪ್ರಥಮಾದ್ಯತೆಯಲ್ಲಿ ತುರ್ತಾಗಿ ಅನುಕೂಲಿಸಬೇಕೆಂದು ರಾಜ್ಯದ ಸಮಸ್ತ ನಿವೃತ್ತ ನೌಕರರ ವತಿಯಿಂದ ಕರ್ನಾಟಕ ನಿವೃತ್ತ ನೌಕರರ ವೇದಿಕೆಯ ಸಂಸ್ಥಾಪಕ ರಾಜ್ಯ ಮಹಾ ಪ್ರಧಾನ ಸಂಚಾಲಕ ಎಮ್.ಪಿ.ಎಮ್.ಷಣ್ಮುಖಯ್ಯ ಹಾಗೂ ರಾಜ್ಯ ಸಂಸ್ಥಾಪಕ ಸಂಚಾಲಕ ಅಶೋಕ.ಎಮ್.ಸಜ್ಜನ ಅವರು ರಾಜ್ಯದ ಸಮಸ್ತ ನಿವೃತ್ತ ನೌಕರರ ವತಿಯಿಂದ ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷ ಸಿ.ಎಸ್.ಷಡಕ್ಷರಿ ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ನಿವೃತ್ತ ನೌಕರರ ಸಂಘದ ರಾಜ್ಯಾಧ್ಯಕ್ಷ ಡಾ.ಎಲ್.ಭೈರಪ್ಪ ಅವರಿಗೆ ಪತ್ರ ಬರೆದು ಆಗ್ರಹಿಸಿದ್ದಾರೆ

## ತಿರುಪತಿ ಲಡ್ಡುವಿನಲ್ಲಿ ಮಾಂಸ ಮಿಶ್ರಣ; ಧಾರ್ಮಿಕ ಭಾವನೆಗೆ ಧಕ್ಕೆ

# ಆಹಾರ ಕಲಬೆರಕೆಯಡಿ ಕಠಿಣ ಶಿಕ್ಷೆ: ಪ್ರಲ್ಹಾದ್ ಜೋಶಿ



**ಹುಬ್ಬಳ್ಳಿ, ಸೆ.21:** ತಿರುಪತಿ ಲಡ್ಡುನಲ್ಲಿ ಮಾಂಸ ಇತ್ಯಾದಿ ವಸ್ತುಗಳು ಪತ್ತೆಯಾಗಿರುವುದನ್ನು ಲ್ಯಾಬ್ ವರದಿ ವಿವರಿಸಿದ್ದು, ಆಂಧ್ರಪ್ರದೇಶ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಅವರು ಕೂಡ ಹೇಳಿದ್ದರಲ್ಲಿ ಸತ್ಯ ಇದೆ. ಹಾಗಾಗಿ ಧಾರ್ಮಿಕ ಭಾವನೆಗಳಿಗೆ ಧಕ್ಕೆ ಮತ್ತು ಆಹಾರ ಕಲಬೆರಕೆಯಡಿ ತಪ್ಪು ಮಾಡಿದವರಿಗೆ ಕಠಿಣ ಶಿಕ್ಷೆ ಆಗಬೇಕು ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಆಗ್ರಹಿಸಿದರು.

ನಗರದಲ್ಲಿ ಶನಿವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೊದಲು ತಿರುಮಲ ತಿರುಪತಿ ದೇವಸ್ಥಾನಕ್ಕೆ ಸರಬರಾಜಾಗುತ್ತಿದ್ದ ನಂದಿನಿ ತುಪ್ಪ ಬಂದ್ ಮಾಡಿಸಿದ ನಂತರ ಈ ತರಹ ಕಳಪೆ ವಸ್ತುಗಳನ್ನು ಖರೀದಿ ಮಾಡಿ ಲಡ್ಡು ತಯಾರಿಸಲಾಗಿದೆ. ಹಿಂದಿನ ಆಂಧ್ರಪ್ರದೇಶ ಸರ್ಕಾರ ಹಾಗೂ ಕಾಂಗ್ರೆಸ್‌ನವರ ಹಿಂದು ವಿರೋಧಿ ನೀತಿಯಿಂದ ಈರೀತಿ ಆಗುತ್ತಿದೆ. ಈ ಕುರಿತು ವಿವರವಾದ ಸಮಗ್ರ ತನಿಖೆ ಆಗಬೇಕೆಂದರು. ದೇಶ ವಿರೋಧಿ ಚಟುವಟಿಕೆಯಲ್ಲಿ ತೊಡಗಿದವರು ಈ ರೀತಿ ಮಾಡುತ್ತಿದ್ದಾರೆ ಎಂಬುದು ಮೇಲ್ನೋಟಕ್ಕೆ ಕಂಡುಬರುತ್ತಿದೆ. ಇದನ್ನು ನಾವು ತಾರ್ಕಿಕ ಅಂತ್ಯಕ್ಕೆ ತೆಗೆದುಕೊಂಡು ಹೋಗುತ್ತೇವೆ. ಪ್ರಸಾದ ವಿತರಣೆಯಲ್ಲಿ ಆಯಾ ಸರ್ಕಾರಗಳು ಮೂಗು ತೂರಿಸದೇ ದೇವಸ್ಥಾನ ಆಡಳಿತ ಮಂಡಳಿಯವರು ನಿರ್ಧಾರ ಮಾಡಬೇಕು ಮತ್ತು ಪರಿಶೀಲಿಸಬೇಕು. ದೇಶದ ನಂಬಿಕೆ, ಸಂಸ್ಕೃತಿ, ಶ್ರದ್ಧೆ ಪ್ರಶ್ನೆ ಹಾಳು ಮಾಡಬಾರದು ಎಂದರು. ಮೋಹಬತ್ ಕಾ ದುಖಾನ್ ಎನ್ನುವ ಕಾಂಗ್ರೆಸ್ನ ರಾಹುಲ್ ಗಾಂಧಿ, ರಾಜ್ಯದಲ್ಲಿಯೂ ದ್ವೇಷದ ರಾಜಕಾರಣ ಮಾಡಲು ಹಚ್ಚಿದ್ದಾರೆ. ಸಂವಿಧಾನ ವಿರೋಧಿ ನಡುವಳಿಕೆ ಮುಂದುವರಿಸಿದ್ದಾರೆ. ಸಿಖ್ ಸಹೋದರರನ್ನು ಅಪಮಾನ ಮಾಡಿದ್ದಾರೆ. ವಿದೇಶದ ನೆಲದಲ್ಲಿ ಬಹುಸಂಸ್ಕೃತಿಯ ನಾಡಾದ ನಮ್ಮ ದೇಶದ ಮಾನವನ್ನು ಹರಾಜು ಮಾಡಿದ್ದಾರೆ ಎಂದು ತಿವಿದರು.

ಗಣೇಶನ ಮೆರವಣಿಗೆ ಮಾಡಿದವರ ಮೇಲೆ ಎಫ್ಐಆರ್ ಹಾಕಲಾಗುತ್ತಿದೆ. ನೋಡಲು ಹೋದ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ಪ್ರತಿಪಕ್ಷ ನಾಯಕ ಆರ್. ಅಶೋಕ ಅವರ ಮೇಲೂ ಎಫ್ಐಆರ್ ದಾಖಲಾಗಿದೆ. ಮಸೀದಿ ಬಂದರೆ ಗಣೇಶ ಹಾಡು ಬಂದ್ ಮಾಡಬೇಕಂತೆ, ಹಾಗಾದರೆ ಗಣೇಶ ಹೋದರೆ ಮುಸ್ಲಿಮರು ನಮಾಜ್ ಬಂದ್ ಮಾಡುತ್ತಾರೆಯೇ? ಎಂದು ಸಚಿವರು ಪ್ರಶ್ನಿಸಿದ ಅವರು, ರಾಜ್ಯ ಸರ್ಕಾರ ತುಷ್ಟೀಕರಣ ಹಾಗೂ ದ್ವೇಷದ ರಾಜಕಾರಣ ಮಾಡುತ್ತಿದೆ ಎಂದು ದೂರಿದರು. ಮುನಿರತ್ನ ಮೇಲೆ ಆರೋಪಗಳಿದ್ದರೆ ಸರಿಯಾಗಿ ತನಿಖೆ ಮಾಡಬೇಕು. ಯಾರೇ ತಪ್ಪು ಮಾಡಿದ್ದರೂ ಶಿಕ್ಷೆ ಆಗಲಿದೆ. ಆದರೆ, ಅದರು 2020ರ ಪ್ರಕರಣ ಈಗ ಮುನ್ನೆಲೆಗೆ ಬಂದಿದ್ದು ಏಕೆ? ಇಷ್ಟು ದಿನಗಳ ವರೆಗೇನು ಕತ್ತೆ ಕಾಯ್ದರೆ? ಇದು ರಾಜ್ಯ ಸರ್ಕಾರದ ಗೊಡ್ಡು ಬೆದರಿಕೆಗಳು. ಇದಕ್ಕೆಲ್ಲ ನಾವು ಹೆದರುವುದಿಲ್ಲ ಎಂದರು. ಹುಬ್ಬಳ್ಳಿಯಲ್ಲಿ ಸ್ಮಶಾನ ಭೂಮಿಯಲ್ಲಿ ಇಂದಿರಾ ಕ್ಯಾಂಟೀನ್ ನಿರ್ಮಾಣದ ಬಗ್ಗೆ ಮಾತನಾಡಿದ ಅವರು, ಅದು ಸ್ಮಶಾನ ಭೂಮಿ ಆಗಿದ್ದರೆ ಇಂದಿರಾ ಕ್ಯಾಂಟಿನ್ ಬೇರೆ ಕಡೆ ಮಾಡಬೇಕು. ಸೌಹಾರ್ದತಯುವಾಗಿ ಶಾಸಕರು ಹಾಗೂ ಮಹಾನಗರ ಪಾಲಿಕೆ ಅಧಿಕಾರಿಗಳು ಇದನ್ನು ಬಗೆಹರಿಸಬೇಕು ಎಂದು ಸಲಹೆ ಇತ್ತ ಸಚಿವರು, ರಾಜ್ಯ ಸರ್ಕಾರ ದಿವಾಳಿಯಾಗಿದೆ. ಹಾಗಾಗಿ ಪಾಲಿಕೆ ಸಿಬ್ಬಂದಿಗೆ ಪಗಾರ ಕೊಡಲು ಆಗುತ್ತಿಲ್ಲ. ಡಿ ದರ್ಜೆ ಮತ್ತು ಬಡವರಿಗೆ ಸಂಬಳ ಕೊಡಲು ಹಿಂದೇಟು ಹಾಕುತ್ತಿದೆ ಎಂದು ದೂರಿದರು.

### ಪವಿತ್ರ ಕ್ಷೇತ್ರಗಳ ಪ್ರಸಾದ ಪರೀಕ್ಷಿಸಬೇಕು

ತಿರುಪತಿ ಲಡ್ಡು ಪ್ರಕರಣದ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲ ಪವಿತ್ರ ಕ್ಷೇತ್ರಗಳಲ್ಲಿ ನೀಡುವ ಪ್ರಸಾದವನ್ನೂ ಪರೀಕ್ಷೆಗೆ ಒಳಪಡಿಸಲು ರಾಜ್ಯ ಸರ್ಕಾರ ಮುಂದಾಗಬೇಕು. ಆಂಧ್ರಪ್ರದೇಶದಲ್ಲಿ ಜಗಮೋಹನ್ ರೆಡ್ಡಿ ಸಿಎಂ ಆಗಿದ್ದಾಗ ತಿರುಪತಿಯಲ್ಲಿ ಪ್ರಸಾದಕ್ಕೆ ಜಾನುವಾರು ಕೊಬ್ಬು, ಮೀನು ಎಣ್ಣೆ ಬಳಸಿ ಹಿಂದೂ ವಿರೋಧಿ ಕ್ರಮಗಳಿಗೆ ಬೆಂಬಲವಾಗಿ ನಿಂತಿದ್ದರು. ಜಗನ್ ಮೋಹನ ರೆಡ್ಡಿ ಅವರು ಹಿಂದೂಯೇತರರನ್ನು ತಿರುಪತಿಯ ಟ್ರಸ್ಟ್ ಸದಸ್ಯರನ್ನಾಗಿ ನೇಮಕ ಮಾಡಿದ್ದರು. ಹಿಂದೂ ಧಾರ್ಮಿಕ ಟ್ರಸ್ಟ್‌ಗಳಿಗೆ ಹಿಂದೂಯೇತರರನ್ನು ಸದಸ್ಯರನ್ನಾಗಿ ನೇಮಕ ಮಾಡಬಾರದು. ತಮಿಳುನಾಡಿನಲ್ಲೂ ಸ್ಟಾಲಿನ್ ಅವರು ಮತ್ತು ಪಶ್ಚಿಮ ಬಂಗಾಲದಲ್ಲಿ ಮಮತಾ ದೀದೀ ಅವರೂ ಇದೇ ರೀತಿ ಹಿಂದೂ ದೇವಾಲಯ ಟ್ರಸ್ಟ್‌ಗಳಿಗೆ ಹಿಂದೂಯೇತರರನ್ನು ನೇಮಿಸುವ ಮೂಲಕ ಸಾಮಾಜಿಕ ಸ್ವಾಸ್ಥ್ಯಹಾಳು ಮಾಡುತ್ತಿದ್ದಾರೆ.

–ಪ್ರಲ್ಹಾದ ಜೋಶಿ, ಕೇಂದ್ರ ಸಚಿವರು.

# ಡಿನೋಟಿಫಿಕೇಷನ್ ಪ್ರಕರಣ ವಿಚಾರಣೆಗೆ ಬಿಎಸ್‌ವೈ ಹಾಜರು



**ಬೆಂಗಳೂರು, ಸೆ.21:** ಮಾಜಿ ಸಿಎಂ ಬಿ.ಎಸ್. ಯಡಿಯೂರಪ್ಪ ವಿರುದ್ಧದ ಡಿನೋಟಿಫಿಕೇಷನ್ ಹಗರಣ ಆರೋಪ ಸಂಬಂಧ ಲೋಕಾಯುಕ್ತ ಸಮನ್ಸ್ ಜಾರಿಗೊಳಿಸಿದ್ದ ಹಿನ್ನೆಲೆ ಇಂದು ಲೋಕಾಯುಕ್ತ ಕಚೇರಿಗೆ ಭೇಟಿ ನೀಡಿದ ಬಿಎಸ್‌ವೈ ವಿಚಾರಣೆಗೆ ಹಾಜರಾದರು. ವಿಚಾರಣೆಗೆ ಹಾಜರಾಗುವಂತೆ ಬಿಎಸ್‌ವೈ ಅವರಿಗೆ ಲೋಕಾಯುಕ್ತ ಸಮನ್ಸ್ ನೋಟಿಸ್ ನೀಡಿದ್ದರಿಂದ ಸಸತ 2 ಗಂಟೆಗಳ ಕಾಲ ಅವರನ್ನು ವಿಚಾರಣೆಗೆ ಒಳಪಡಿಸಲಾಯಿತು. ವಿಚಾರಣೆ ವೇಳೆ ಲೋಕಾಯುಕ್ತ ಪೊಲೀಸರು ಯಡಿಯೂರಪ್ಪ ಅವರಿಂದ ಪ್ರಕರಣ ಕುರಿತಂತೆ ಹಲವು ಹೇಳಿಕೆಗಳನ್ನು ಪಡೆದುಕೊಂಡಿದ್ದಾರೆ ಎಂದು ತಿಳಿದುಬಂದಿದೆ. ಎಚ್.ಡಿ.ಕುಮಾರಸ್ವಾಮಿ ಹಾಗೂ ಬಿಎಸ್‌ವೈ ಈ ಇಬ್ಬರೂ ನಾಯಕರು ಜಂಟಿಯಾಗಿ ಡಿನೋಟಿಫಿಕೇಷನ್ ಹಗರಣದಲ್ಲಿ ಭಾಗಿಯಾಗಿದ್ದಾರೆಂಬ ಆರೋಪವಿತ್ತು. ಪ್ರಕರಣದಲ್ಲಿ ಯಡಿಯೂರಪ್ಪ ಅವರನ್ನು A1 ಆರೋಪಿಯನ್ನಾಗಿ ಮಾಡಲಾಗಿದೆ.

# ಸರ್ಕಾರದ ಸೌಲಭ್ಯ ಬಳಸಿಕೊಳ್ಳಿ, ರೇಷ್ಮೆ ಬೆಳೆಗಾರರು ಉದ್ಯಮಿಗಳಾಗಿ ಸಂಸದ ಕಡಾಡಿ ಕರೆ




**ಬೆಂಗಳೂರು, ಸೆ.21:** ಭಾರತವು ಪ್ರಪಂಚದಲ್ಲೇ ರೇಷ್ಮೆ ಬೆಳೆ ಬೆಳೆಯುವಲ್ಲಿ ಎರಡನೇ ಸ್ಥಾನದಲ್ಲಿದ್ದು, ಇತ್ತೀಚಿನ ದಿನಗಳಲ್ಲಿ ರೇಷ್ಮೆ ಉಡುಪುಗಳಷ್ಟೇ ಅಲ್ಲದೆ, ವಿವಿಧ ಉತ್ಪನ್ನಗಳ ತಯಾರಿಕೆಯಲ್ಲಿ ಹೆಸರುವಾಸಿಯಾಗಿದೆ. ರೇಷ್ಮೆ ಉದ್ಯಮಕ್ಕೂ ರೈತರಿಗೆ ನೀಡುವಂತೆ ಉದ್ಯಮಿಗಳಿಗೂ ಸರ್ಕಾರದ ಬೆಂಬಲ ಸೌಲಭ್ಯ ದೊರೆಯುತ್ತಿದೆ. ಭಾರತದಲ್ಲಿ ತಯಾರಾಗುವ ರೇಷ್ಮೆ ಉಡುಪು ಹಾಗು ಅದರ ಉಪ ಉತ್ಪನ್ನಗಳಿಗೆ ಭಾರೀ ಬೇಡಿಕೆ ಉಂಟಾಗಿದ್ದು, ಯುವ ಬೆಳೆಗಾರರು ಮತ್ತುದ್ಯಮಿಗಳು ಈ ಅವಕಾಶಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಸಂಸದ ಈರಣ್ಣ ಕಡಾಡಿ ತಿಳಿಸಿದರು.

ಅತ್ಯಾಧುನಿಕ ತಂತ್ರಜ್ಞಾನ ಬಳಸಿದಲ್ಲಿ ಭಾರತ ಮೊದಲ ಸ್ಥಾನ:

ರೇಷ್ಮೆ ಉತ್ಪಾದನೆಯಲ್ಲಿ ಚೀನ 52 ಮೆಟ್ರಿಕ್ ಟನ್ ಉತ್ಪಾದನೆಯಲ್ಲಿ ಮಾಡುವ ಮೊದಲ ಸ್ಥಾನದಲ್ಲಿದ್ದರೆ ಭಾರತ 39 ಮೆಟ್ರಿಕ್ ಟನ್ ಉತ್ಪಾದನೆಯ ಮೂಲಕ ಎರಡನೇ ಸ್ಥಾನದಲ್ಲಿದೆ. ಚೀನ ಬಳಸುವಂತೆ ಭಾರತದಲ್ಲು ರೇಷ್ಮೇ ಕೃಷಿ ಮತ್ತು ಅದರ ಉತ್ಪನ್ನ ಗಳ ತಯಾರಿಕೆಯಲ್ಲಿ ಅತ್ಯಾಧುನಿಕ ತಂತ್ರಜ್ಞಾನವನ್ನು ಅಳವಡಿಕೊಂಡಲ್ಲಿ ಮೊದಲ ಸ್ಥಾನದಲ್ಲಿ ನಾವಿರಲಿದ್ದೇವೆ ಎಂದು ಸೆಂಟ್ರಲ್ ಸಿಲ್ಕ್ ಬೋರ್ಡ್‌ನ ಪ್ರಾದೇಶಿಕ ಸಹಾಯಕ ಕಾರ್ಯದರ್ಶಿ ಪ್ರಜಕ್ತಾ ಎಲ್. ವರ್ಮಾ ತಿಳಿಸಿದರು.

ನಗರದ ಜಿಕೆವಿಕೆಯ ಸಮ್ಮೇಳನ ಸಭಾಂಗಣದಲ್ಲಿ ನಡೆದ ಕೇಂದ್ರ ರೇಷ್ಮೆ ಮಂಡಳಿಯ ಸೇರಿ–ಪಾಲುದಾರರ ಸಭೆಯನ್ನು ಉದ್ಘಾಟಿಸಿ ಅವರು ಈ ವಿಚಾರಗಳನ್ನು ಪ್ರಸ್ತಾಪಿಸಿದರು. ಈ ಸಂದರ್ಭದಲ್ಲಿ ಪ್ರಜಕ್ತಾ ಎಲ್. ವರ್ಮಾ, ಜಂಟಿ ಕಾರ್ಯದರ್ಶಿ, ಬಟ್ಟೆ ಸಚಿವಾಲಯ, ಭಾರತ ಸರ್ಕಾರ, ಪಿ.ಶಿವಕುಮಾರ್, ಸದಸ್ಯ ಕಾರ್ಯದರ್ಶಿ, ಸೆಂಟ್ರಲ್ ಸಿಲ್ಕ್ ಬೋರ್ಡ್, ರಚನಾ ಶಾ, ಕಾರ್ಯದರ್ಶಿ, ಬಟ್ಟೆ ಸಚಿವಾಲಯ, ನವದೆಹಲಿ, ಎ. ಜಿ. ಲಕ್ಷ್ಮೀನಾರಾಯಣ ವಾಲ್ಮೀಕಿ, ಸಂಸದ, ಅನಂತಪುರ ಕ್ಷೇತ್ರ, ಹಾಗೂ ಇತರ ಗಣ್ಯರು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ರೇಷ್ಮೆ ಉಪ ಉತ್ಪನ್ನಗಳ ಪ್ರದರ್ಶನ ಸಹ ಆಯೋಜಿಸಲಾಗಿತ್ತು, ಇದರಿಂದ ರೇಷ್ಮೆ ಉದ್ಯಮದ ತಾಂತ್ರಿಕ ಸಾಧನೆಗಳು ಮತ್ತು ಭವಿಷ್ಯದ ವಿಸ್ತರಣೆಯ ಕುರಿತಾದ ಅರಿವು ಮೂಡಿಸಲಾಯಿತು.

# ಪಡಿತರ ಚೀಟಿ ವ್ಯವಸ್ಥೆ ಅನರ್ಹರನ್ನು ಗುರುತಿಸಲು ಕ್ರಮ



**ಬೆಂಗಳೂರು, ಸೆ.21–** ಪಡಿತರ ಚೀಟಿ ವ್ಯವಸ್ಥೆಯಲ್ಲಿ ಅನರ್ಹರನ್ನು ಗುರುತಿಸಲಾಗುತ್ತಿದೆ. ಹೊಸದಾಗಿ ಅರ್ಜಿ ಸಲ್ಲಿಸುವ ಅರ್ಹರನ್ನು ಪರಿಶೀಲಿಸಲಾಗುತ್ತಿದೆ. ಈ ಕಾರ್ಯಕ್ಕೆ ಸುಮಾರು ಒಂದು ತಿಂಗಳ ಕಾಲಾವಕಾಶ ಹಿಡಿಯಲಿದ್ದು, ಬಳಿಕ ಹೊಸ ಪಡಿತರ ಚೀಟಿ ನೀಡುವಂತೆ ಕ್ರಮ ಕೈಗೊಳ್ಳಲಾಗುವುದು ಎಂದು ಆಹಾರ ಮತ್ತು ನಾಗರಿಕ ಪೂರೈಕೆ ಸಚಿವ ಕೆ.ಎಚ್.ಮುನಿಯಪ್ಪ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಡಿತರ ಚೀಟಿಗಳನ್ನು ಸಮೀಕ್ಷೆಗೆ ಒಳಪಡಿಸಲಾಗುತ್ತದೆ. ಬಳಿಕ ಅಂತಿಮವಾಗಿ ಅರ್ಹರನ್ನು ಉಳಿಸಿಕೊಳ್ಳಲಾಗುವುದು. ಈ ನಡುವೆ ಹೊಸದಾಗಿ ಮತ್ತಷ್ಟು ಜನ ಬಿಪಿಎಲ್ ಕಾರ್ಡ್ ಕೇಳುತ್ತಿದ್ದಾರೆ. ಇನ್ನೊಂದು ತಿಂಗಳಲ್ಲಿ ಇದನ್ನು ಪೂರ್ಣಗೊಳಿಸಿ ನಂತರ ಅನ್ನಭಾಗ್ಯ ಯೋಜನೆಯಡಿ ಆಹಾರ ಕಿಟ್ ನೀಡುವ ಬಗ್ಗೆ ಪರಿಶೀಲನೆ ನಡೆಸಲಾಗುವುದು ಎಂದರು. ತಿರುಪತಿ ತಿಮ್ಮಪ್ಪನ ಸನ್ನಿಧಾನದಲ್ಲಿ ನೀಡಲಾಗುವ ಪ್ರಸಾದದ ಲಡ್ಡು ತಯಾರಿಕೆಗೆ ಪ್ರಾಣಿಗಳ ಕೊಬ್ಬು ಬಳಕೆಯಾಗಿದೆ ಎಂಬುದು ಆಘಾತಕಾರಿ. ಇದು ನಡೆಯಬಾರದಿತ್ತು. ಜನರ ಭಾವನಾತ್ಮಕವಾದ ವಿಚಾರದಲ್ಲಿ ಈ ರೀತಿಯ ನಡವಳಿಕೆಗಳು ಸರಿಯಲ್ಲ ಎಂದು ಹೇಳಿದರು. ಆಂಧ್ರಪ್ರದೇಶದ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಅವರು ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದರು.ತಿರುಪತಿ ತಿಮ್ಮಪ್ಪನ ಸನ್ನಿಧಾನದಲ್ಲಿ ಲಡ್ಡು ತಯಾರಿಕೆಗೆ ಅಗತ್ಯದಷ್ಟು ತುಪ್ಪ ಪೂರೈಸಲು ನಮ್ಮಲ್ಲಿ ಸಾಕಷ್ಟು ದಾಸ್ತಾನಿದೆ. ಪರಸ್ಪರ ಒಪ್ಪಂದದೊಂದಿಗೆ ತುಪ್ಪ ಪೂರೈಕೆಯಾಗುತ್ತಿದ್ದು, ವಿವಾದದಿಂದ ಯಾವುದೇ ಧಕ್ಕೆ ಆಗುವುದಿಲ್ಲ ಎಂದು ತಿಳಿಸಿದರು. ರಾಜ್ಯಸರ್ಕಾರ ಯಾವುದೇ ದ್ವೇಷದ ರಾಜಕಾರಣ ಮಾಡುತ್ತಿಲ್ಲ. ವಿರೋಧಪಕ್ಷಗಳ ಟೀಕೆಗಳು ಆಧಾರರಹಿತ ಎಂದರು.

# ದಸರಾ: ಯುವ ಸಂಭ್ರಮದ ಪೋಸ್ಟರ್ ಬಿಡುಗಡೆ



**ಮೈಸೂರು, ಸೆ.21–** ವಿಶ್ವ ವಿಖ್ಯಾತ ಮೈಸೂರು ದಸರಾ ಮಹೋತ್ಸವ 2024 ಸಿದ್ಧತಾ ಕಾರ್ಯಗಳು ಭರದಿಂದ ಸಾಗಿದ್ದು ಇಂದು ಯುವ ಸಂಭ್ರಮದ ಪೋಸ್ಟರ್ ಬಿಡುಗಡೆ, ದಸರಾ ವೆಬ್‌ಸೈಟ್‌ಗೆ ಚಾಲನೆ ನೀಡಲಾಯಿತು. ಮೈಸೂರು ಜಿಲ್ಲಾ ಉಸ್ತುವಾರಿ ಸಚಿವರು ಆಗಿರುವ ಸಮಾಜ ಕಲ್ಯಾಣ ಇಲಾಖೆ ಸಚಿವ ಡಾ.ಎಚ್.ಸಿ. ಮಹಾದೇವಪ್ಪ, ಪೋಸ್ಟರ್ ಹಾಗೂ ದಸರಾ ವೆಬ್ ಸೈಟ್ ಬಿಡುಗಡೆಗೊಳಿಸಿದರು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳಾದ ಜಿ.ಲಕ್ಷ್ಮೀಕಾಂತ ರೆಡ್ಡಿ, ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್, ಜಿಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೆ. ಎಂ.ಗಾಯತ್ರಿ, ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ವಿಷ್ಣುವರ್ಧನ್, ಅಪರ ಜಿಲ್ಲಾಧಿಕಾರಿ ಡಾ. ಪಿ.ಶಿವರಾಜು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ಟಿ.ಕೆ.ಹರೀಶ್ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಪಾಲ್ಗೊಂಡಿದ್ದರು.

**ಮಾವುತರಿಗೆ ಔತಣ:**

ಮೈಸೂರು ದಸರಾ ಅಂಗವಾಗಿ ಮಾವುತರು, ಕಾವಾಡಿಗಳಿಗೆ ಜಿಲ್ಲಾಡಳಿತದ ವತಿಯಿಂದ ಅರಮನೆ ಆವರಣದಲ್ಲಿ ಉಪಹಾರ ವ್ಯವಸ್ಥೆ ಮಾಡಲಾಗಿತ್ತು. ಜಿಲ್ಲಾ ಉಸ್ತುವಾರಿ ಸಚಿವರಾದ ಡಾ ಎಚ್.ಸಿ.ಮಹದೇವಪ್ಪ ಅವರು ಮಾವುತರಿಗೆ ಉಪಹಾರ ಬಡಿಸಿದರು. ಬಳಿಕ ಆನೆಗಳ ಪಾಲನೆ, ಪೋಷಣೆ ಮಾಡುತ್ತಿರುವ ಕಾವಾಡಿಗರು ಹಾಗೂ ಮಾವುತರ ಕಾರ್ಯವನ್ನು ಪ್ರಶಂಸಿಸಿ ಯೋಗಕ್ಷೇಮ ವಿಚಾರಿಸಿದರು. ಮಾವುತರು ಹಾಗೂ ಕಾವಾಡಿಗರ ಮಕ್ಕಳಿಗೆ ತಾತ್ಕಾಲಿಕವಾಗಿ ತೆರೆದಿರುವ ಶಾಲೆಗೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಾವುತ ಮತ್ತು ಕಾವಾಡಿಗರ ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮ ವೀಕ್ಷಿಸಿದರು.

# ಸಾರ್ವಜನಿಕರು-ಜನಪ್ರತಿನಿಧಿಗಳ ಭೇಟಿಗೆ ಸಮಯ ನಿಗದಿ

**ಬೆಂಗಳೂರು, ಸೆ.21:** ಇನ್ಮುಂದೆ ಸಾರ್ವಜನಿಕರನ್ನು ಭೇಟಿ ಮಾಡಲು, ಅವರ ಕುಂದುಕೊರತೆಯನ್ನು ನಿವಾರಿಸುವುದು ಕಡ್ಡಾಯವಾಗಿದೆ. ಈ ಸಮಯಲ್ಲಿ ಯಾವುದೇ ಸಭೆಗಳನ್ನು ನಡೆಸದಂತೆ ರಾಜ್ಯ ಸರ್ಕಾರ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಖಡಕ್ ಆದೇಶ ಹೊರಡಿಸಿದ್ದಾರೆ. ಈ ಸಂಬಂಧ ಸುತ್ತೋಲೆ ಹೊರಡಿಸಿರುವಂತ ಅವರು, ಜನಸ್ಪಂದನ ಕಾರ್ಯಕ್ರಮದಲ್ಲಿ ಅಪಾರ ಸಂಖ್ಯೆಯಲ್ಲಿ ನಾಗರೀಕರು ಅವರ ಅಹವಾಲುಗಳೊಂದಿಗೆ ಬರುತ್ತಿರುವುದರಿಂದ ಹಿರಿಯ ಅಧಿಕಾರಿಗಳು ಎಲ್ಲಾ ಹಂತಗಳಲ್ಲಿ ಅರ್ಜಿದಾರರಿಗೆ ನಿಯಮಿತವಾಗಿ ಆಲಿಸಿದರೆ ಮಾತ್ರ ಕುಂದುಕೊರತೆಗಳನ್ನು ಗಣನೀಯವಾಗಿ ಕಡಿಮೆ ಮಾಡಲು ಸಾಧ್ಯವಾಗುವುದು ಎಂದಿದ್ದಾರೆ. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯ ದರ್ಶಿಗಳು/ಕಾರ್ಯದರ್ಶಿಗಳು ಹಾಗೂ ಇತರ ಕ್ಷೇತ್ರ ಅಧಿಕಾರಿಗಳು ಮಧ್ಯಾಹ್ನ 3.30 ಘಂಟೆಯಿಂದ 5.30 ಘಂಟೆಯವರೆಗೆ ಸಾರ್ವಜನಿಕರು ಹಾಗೂ ಜನಪ್ರತಿನಿಧಿಗಳನ್ನು ಭೇಟಿ ಮಾಡಲು ಸಮಯವನ್ನು ಕಲ್ಪಿಸುವ ಬಗ್ಗೆ ನಿರ್ದೇಶನ ನೀಡಲಾಗಿದೆ.

ಆದಾಗ್ಯೂ, ಈ ಸಮಯದಲ್ಲಿ ಸಾರ್ವಜನಿಕರಿಗೆ ಸಮಯಾವಕಾಶ ಕಲ್ಪಿಸದ ಇಲಾಖೆಗಳ ಸಭೆಗಳನ್ನು/ ಕಛೇರಿಯ ಹೊರಗೆ ಹೋಗುವ ಪ್ರಕರಣಗಳನ್ನು ಗಮನಿಸಲಾಗಿದೆ ಎಂದು ಶಾಲಿನಿ ರಜನೀಶ್ ಹೇಳಿದ್ದಾರೆ.

# ಇನ್ನು ಮುಂದೆ ವೈದ್ಯರ ಚೀಟಿ ಇಲ್ಲದೆ ಅಂಗಡಿಗಳಿಂದ ಔಷಧಿ ಪಡೆಯುವಂತಿಲ್ಲ

**ಬೆಂಗಳೂರು, ಸೆ.21:** ವೈದ್ಯರ ಚೀಟಿ ಇಲ್ಲದೇ ಮಾತ್ರೆ ಕೊಡುವ ಮೆಡಿಕಲ್ ಸ್ಟೋರ್ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಎಚ್ಚರಿಕೆ ನೀಡಿದ್ದಾರೆ. ರಾಜ್ಯದಲ್ಲಿ ಮಾದಕ ವಸ್ತುಗಳ ಹಾವಳಿಯನ್ನು ಬೇರು ಸಮೇತ ಕಿತ್ತುಹಾಕಲು ಪಣತೊಟ್ಟಿರುವ ನಮ್ಮ ಸರ್ಕಾರ ಈಗಾಗಲೇ ಕಾರ್ಯಪ್ರವೃತ್ತವಾಗಿದೆ.ಕೊಪ್ಪಳ ಜಿಲ್ಲೆಯ ಗಂಗಾವತಿಯಲ್ಲಿ ಔಷಧಿಗಳ ದುರ್ಬಳಕೆಯನ್ನು ತಡೆಗಟ್ಟಲು ವಿಶೇಷ ಅಭಿಯಾನ ನಡೆಸಲಾಗಿದೆ.ಮೆಡಿಕಲ್ ಸ್ಟೋರ್‌ಗಳಲ್ಲಿ ವೈದ್ಯರ ಚೀಟಿ ಇಲ್ಲದೆ ಮಾತ್ರೆಗಳನ್ನು ಕೊಡುತ್ತಿದ್ದಾರೆ, ಸಿಂಥೆಟಿಕ್ ಡ್ರಗ್ಸ್ ಸಿಗುತ್ತಿದೆ ಎಂಬ ಮಾಹಿತಿ ಮೇರೆಗೆ ಅಂಗಡಿಗಳ ಮೇಲೆ ದಿಢೀರ್ ದಾಳಿ ನಡೆಸಿ, ಪರಿಶೀಲನೆ ನಡೆಸಲಾಗಿದೆ. ನಿಯಮ ಉಲ್ಲಂಘಿಸಿರುವ ಅಂಗಡಿಗಳ ಮೇಲೆ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು. ಸಮಾಜಕ್ಕೆ ದೊಡ್ಡ ಪಿಡುಗಾಗಿರುವ ಮಾದಕ ವಸ್ತುಗಳ ನಿರ್ಮೂಲನೆಗೆ ದಿಟ್ಟ ಹೆಜ್ಜೆಯಿಟ್ಟಿರುವ ನಮ್ಮ ಸರ್ಕಾರಕ್ಕೆ ಸಾರ್ವಜನಿಕರ ಸಹಕಾರ ಅತ್ಯಗತ್ಯ. ನಮ್ಮ ಪ್ರಯತ್ನಕ್ಕೆ ನೀವು ಕೈಜೋಡಿಸಿ, ಒಗ್ಗಟ್ಟಾಗಿ ಡ್ರಗ್ಸ್ ಮುಕ್ತ ಕರ್ನಾಟಕ ನಿರ್ಮಿಸೋಣ ಎಂದು ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ.




Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 82 | ನವದೆಹಲಿ | ಬೆಲೆ ₹ 10 | ಸೆಪ್ಟೆಂಬರ್ 22, 2024, ಭಾನುವಾರ

## ಒಳಪುಟಗಳಲ್ಲಿ

ಸಿಎಂ ಸಿದ್ದರಾಮಯ್ಯಗೆ ಇದೀಗ ಮತ್ತೊಂದು ಅಗ್ನಿ ಪರೀಕ್ಷೆ -ಪು.5

ಟಿಎಸ್‌ಆರ್ -ಮೊಹರೆ ಹಣಮಂತರಾಯ ಪತ್ರಿಕೋದ್ಯಮ ಪ್ರಶಸ್ತಿ ಪ್ರಕಟ - ಪು.6

# ದೆಹಲಿ ಮುಖ್ಯಮಂತ್ರಿಯಾಗಿ ಆತಿಶಿ ಪ್ರಮಾಣವಚನ: ಮೂರನೇ ಮಹಿಳಾ ಸಿಎಂ



**ನವದೆಹಲಿ, ಸೆ.21:** ಆಮ್ ಆದ್ಮಿ ಪಕ್ಷದ ನಾಯಕಿ ಆತಿಶಿ ದೆಹಲಿಯ 8ನೇ ಮುಖ್ಯಮಂತ್ರಿಯಾಗಿ ಶನಿವಾರ ರಾಜ್ ನಿವಾಸದಲ್ಲಿ ಪ್ರಮಾಣ ವಚನ ಸ್ವೀಕರಿಸಿದರು. ಮದ್ಯ ನೀತಿ ಪ್ರಕರಣದಲ್ಲಿ ಜಾಮೀನಿನ ಮೇಲೆ ಬಿಡುಗಡೆಯಾದ ಬಳಿಕ ಅರವಿಂದ್ ಕೇಜ್ರಿವಾಲ್ ರಾಜೀನಾಮೆ ನೀಡಿದ ಹಿನ್ನಲೆ ಆತಿಶಿ ನೂತನ ಮುಖ್ಯಮಂತ್ರಿಯಾಗಿದ್ದಾರೆ.

ಆತಿಶಿಯವರ ಹೊಸ ಮಂತ್ರಿ ಮಂಡಲದಲ್ಲಿ ಗೋಪಾಲ್ ರೈ, ಕೈಲಾಶ್ ಗಹ್ಲೋಟ್, ಸೌರಭ್ ಭಾರದ್ವಾಜ್, ಇಮ್ರಾನ್ ಹುಸೇನ್ ಮತ್ತು ಸುಲ್ತಾನ್ಪುರ ಮಜ್ರಾದಿಂದ ಮೊದಲ ಬಾರಿಗೆ ಶಾಸಕರಾದ ಮುಖೇಶ್ ಅಹ್ಲಾವತ್ ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿದರು. ಮುಖೇಶ್ ಅಹ್ಲಾವತ್ ಮೊದಲ ಬಾರಿಗೆ ಸಚಿವರಾದರೆ ಬಾಕಿ ನಾಲ್ವರು ನಾಯಕರು ಹಿಂದಿನ ಅವಧಿಯಲ್ಲಿ ಸಚಿವರಾಗಿದ್ದರು.

ಅರವಿಂದ್ ಕೇಜ್ರಿವಾಲ್ ತಿಹಾರ್ ಜೈಲಿನಲ್ಲಿದ್ದಾಗ ಆಕ್ಸ್‌ಫರ್ಡ್ ಶಿಕ್ಷಣ ಪಡೆದ ಎಎಪಿ ನಾಯಕಿ ಆತಿಶಿ ಪಕ್ಷ ಮತ್ತು ಸರ್ಕಾರದ ಪ್ರಮುಖ ಮುಖವಾಗಿ ಹೊರಹೊಮ್ಮಿದರು. ಅವರು ಹೊರಹೋಗುವ ಕೇಜ್ರಿವಾಲ್ ಸರ್ಕಾರದಲ್ಲಿ ಹಣಕಾಸು, ಕಂದಾಯ, ಕಂದಾಯ, ಕಥಾಳ, ವಿದ್ಯುತ್ ಮತ್ತು ಶಿಕ್ಷಣ ಸೇರಿದಂತೆ 13 ಖಾತೆಗಳನ್ನು ಹೊಂದಿದ್ದರು. ಕಲ್ಕಾಜಿಯಿಂದ ಶಾಸಕರಾಗಿರುವ ಆತಿಶಿ ಅವರು ಭಾರತದಲ್ಲಿ ಮುಖ್ಯಮಂತ್ರಿ ಹುದ್ದೆಯನ್ನು ಅಲಂಕರಿಸಿದ 17 ನೇ ಮಹಿಳೆ ಮತ್ತು ದೆಹಲಿಯ ಮೂರನೇ ಮಹಿಳಾ ಮುಖ್ಯಮಂತ್ರಿಯಾಗಿದ್ದಾರೆ. 43 ವರ್ಷದ ಅವರು ದೆಹಲಿಯ ಅತ್ಯಂತ ಕಿರಿಯ ಮಹಿಳಾ ಮುಖ್ಯಮಂತ್ರಿಯೂಯಾಗಿದ್ದಾರೆ.

ಅಬಕಾರಿ ನೀತಿ ಪ್ರಕರಣದಲ್ಲಿ ಐದು ತಿಂಗಳಿಗೂ ಹೆಚ್ಚು ಕಾಲ ಜೈಲುವಾಸ ಅನುಭವಿಸಿದ ನಂತರ ಕೇಜ್ರಿವಾಲ್ ಸೆ. 13 ರಂದು ತಿಹಾರ್ ಜೈಲಿನಿಂದ ಜಾಮೀನು ಪಡೆದು ಹೊರ ಬಂದರು. ಸೆ. 17 ರಂದು ಅಚ್ಚರಿಯ ಪ್ರಕಟಣೆಯಲ್ಲಿ, ಅವರು ತಮ್ಮ ರಾಜೀನಾಮೆಯನ್ನು ಘೋಷಿಸಿದರು, ವಿಧಾನಸಭಾ ಚುನಾವಣೆಯಲ್ಲಿ ಜನರಿಂದ ಪ್ರಾಮಾಣಿಕತೆಯ ಪ್ರಮಾಣಪತ್ರ ಪಡೆದ ನಂತರವೇ ನಾನು ಹುದ್ದೆಗೆ ಮರಳುತ್ತೇನೆ ಎಂದು ಹೇಳಿದರು. ಎಎಪಿಯ ಶಾಸಕಾಂಗ ಪಕ್ಷವು ತರುವಾಯ ಆತಿಶಿ ಅವರನ್ನು ಹೊಸ ಮುಖ್ಯಮಂತ್ರಿಯಾಗಿ ಆಯ್ಕೆ ಮಾಡಿತು, ಈ ಪ್ರಸ್ತಾಪವನ್ನು ಕೇಜ್ರಿವಾಲ್ ಮುಂದಿಟ್ಟರು. ಮುಂದಿನ ವರ್ಷ ಫೆಬ್ರವರಿಯಲ್ಲಿ ದೆಹಲಿಯಲ್ಲಿ ವಿಧಾನಸಭಾ ಚುನಾವಣೆ ನಡೆಯಲಿರುವ ಕಾರಣ ಆತಿಶಿ ಸರ್ಕಾರದ ಅಧಿಕಾರಾವಧಿಯು ಸಂಕ್ಷಿಪ್ತವಾಗಿರುತ್ತದೆ.

## ವಾಯುಪಡೆ ಮುಖ್ಯಸ್ಥರಾಗಿ ಏರ್ ಮಾರ್ಷಲ್ ಅಮರ್ ಪ್ರೀತ್ ಸಿಂಗ್ ನೇಮಕ



**ನವದೆಹಲಿ, ಸೆ.21:** ಪ್ರಸ್ತುತ ವಾಯುಪಡೆಯ ಉಪ ಮುಖ್ಯಸ್ಥರಾಗಿ ಸೇವೆ ಸಲ್ಲಿಸುತ್ತಿರುವ ಏರ್ ಮಾರ್ಷಲ್ ಅಮರ್ ಪ್ರೀತ್‌ಸಿಂಗ್ ಅವರನ್ನು ವಾಯುಪಡೆಯ ಮುಂದಿನ ಮುಖ್ಯಸ್ಥರನ್ನಾಗಿ ಸರ್ಕಾರ ನೇಮಿಸಿದೆ. ಅಮರ್ ಪ್ರೀತ್ ಸಿಂಗ್ ಅವರು ಸೆಪ್ಟೆಂಬರ್ 30 ರಂದು ಏರ್ ಚೀಫ್ ಮಾರ್ಷಲ್ ಹುದ್ದೆಯನ್ನು ವಹಿಸಿಕೊಳ್ಳಲಿದ್ದಾರೆ. ಏರ್ ಮಾರ್ಷಲ್ ಅಮರ್ ಪ್ರೀತ್ ಸಿಂಗ್ ಅವರು ಫೆ.1, 2023 ರಂದು ಭಾರತೀಯ ವಾಯುಪಡೆಯ 47ನೇ ಉಪ ಮುಖ್ಯಸ್ಥರಾಗಿ ಅಧಿಕಾರ ವಹಿಸಿಕೊಂಡರು. 1984 ರಲ್ಲಿ ಭಾರತೀಯ ವಾಯುಪಡೆಗೆ ಅವರು ನೇಮಕವಾಗಿದ್ದರು. ಸಿಂಗ್ ಅವರನ್ನು ಡಿಸೆಂಬರ್ 21, 1984 ರಂದು ಐಎಎಫ್ನ ಫೈಟರ್ ಸ್ಟ್ರೀಮ್ಗೆ ನಿಯೋಜಿಸಲಾಯಿತು. ಪ್ರತಿಷ್ಠಿತ ಸೆಂಟ್ರಲ್ ಏರ್ ಕಮಾಂಡ್ನ (ಸಿಎಸಿ) ಕಮಾಂಡ್ ತೆಗೆದುಕೊಳ್ಳುವ ಮೊದಲು ಅವರು ಈಸ್ಟರ್ನ್ ಏರ್ ಕಮಾಂಡ್ನಲ್ಲಿ ಹಿರಿಯ ವಾಯು ಸಿಬ್ಬಂದಿ ಅಧಿಕಾರಿಯಾಗಿ ಸೇವೆ ಸಲ್ಲಿಸಿದರು.

ನ್ಯಾಷನಲ್ ಡಿಫೆನ್ಸ್ ಅಕಾಡೆಮಿ, ವೆಲ್ಲಿಂಗ್ಟನ್ನಲ್ಲಿರುವ ಡಿಫೆನ್ಸ್ ಸರ್ವಿಸಸ್ ಸ್ಟಾಫ್ ಕಾಲೇಜ್ ಮತ್ತು ನ್ಯಾಷನಲ್ ಡಿಫೆನ್ಸ್ ಕಾಲೇಜ್ನ ಹಳೆಯ ವಿದ್ಯಾರ್ಥಿಯಾಗಿರುವ ಸಿಂಗ್, ಮಿಗ್–27 ಸ್ಕ್ವಾಡ್ರನ್ನ ಫ್ಲೈಟ್ ಕಮಾಂಡರ್ ಮತ್ತು ಕಮಾಂಡಿಂಗ್ ಆಫೀಸರ್ ಮತ್ತು ಏರ್ ಬೇಸ್ನ ಏರ್ ಆಫೀಸರ್ ಕಮಾಂಡಿಂಗ್ ಸೇರಿದಂತೆ ಪ್ರಮುಖ ಹುದ್ದೆಗಳನ್ನು ನಿರ್ವಹಿಸಿದ್ದಾರೆ. ಅವರ ವೃತ್ತಿಜೀವನದ ಅವಧಿಯಲ್ಲಿ, ಅವರು 2019 ರಲ್ಲಿ ಅತಿ ವಿಶಿಷ್ಟ ಸೇವಾ ಪದಕ ಮತ್ತು 2023 ರಲ್ಲಿ ಪರಮ ವಿಶಿಷ್ಟ ಸೇವಾ ಪದಕವನ್ನು ಪಡೆದಿದ್ದಾರೆ.



ಮೈಸೂರು ಜಿಲ್ಲಾ ಪತ್ರಕರ್ತರ ಸಂಘ (ಎಂಡಿಜೆಎ) ಶನಿವಾರ ಮೈಸೂರಿನಲ್ಲಿ ಆಯೋಜಿಸಿದ್ದ ಪತ್ರಿಕಾ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹಿರಿಯ ಪತ್ರಕರ್ತರನ್ನು ಸನ್ಮಾನಿಸಿದರು.

## ಸುಳ್ಳು ಸುದ್ದಿಯಿಂದ ಸಮಾಜಕ್ಕೆ ಅಪಾಯ: ಸಿಎಂ

### ದೂರದರ್ಶನ ವಾಹಿನಿಯ ಜಿಲ್ಲಾ ಸುದ್ದಿ ಪ್ರತಿನಿಧಿ ಜಿ.ಜಯಂತ್‌ಗೆ ಅತ್ಯುತ್ತಮ ವರದಿಗೆ ಪ್ರಶಸ್ತಿ

**ಮೈಸೂರು, ಸೆ.21:** ಸುಳ್ಳು ಸುದ್ದಿಗಳಿಂದ ಪ್ರಜಾಪ್ರಭುತ್ವಕ್ಕೆ ಮಾರಕವಾಗಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಇಂದು ಮೈಸೂರಿನ ರಾಣಿ ಬಹದ್ದೂರ್ ಸಭಾಂಗಣದಲ್ಲಿ ಮೈಸೂರು ಜಿಲ್ಲಾ ಪತ್ರಕರ್ತರು ಏರ್ಪಡಿಸಿದ್ದ ಹಾಗೂ ಪ್ರಶಸ್ತಿ ಪುರಸ್ಕೃತ ಸಮಾರಂಭವನ್ನು ಉದ್ಘಾಟಿಸಿ ನಂತರ ಮಾತನಾಡಿದ ಅವರು, ಇತ್ತೀಚಿನ ದಿನಗಳಲ್ಲಿ ಸುಳ್ಳು ಸುದ್ದಿಗೆ ಹೆಚ್ಚಿನ ಪ್ರಮುಖ್ಯತೆ ದೊರೆಯುವಂತಾಗಿದೆ, ವಿಶ್ವಾಸರ್ಹ ಸುದ್ದಿಗಳು ಕಡಿಮೆಯಾಗುತ್ತಿದ್ದು, ಸುಳ್ಳು ಸುದ್ದಿಯಿಂದ ಅತೀ ಹೆಚ್ಚು ಬೆಳವಣಿಗೆಗಳು ನಡೆಯುತ್ತಿದೆ, ಇದಕ್ಕೆ ಕಡಿವಾಣ ಹಾಕಲು ಸರ್ಕಾರದ ಕಾನೂನಿನಿಂದ ಮಾತ್ರ ಸಾಧ್ಯವಿಲ್ಲ, ಪತ್ರಕರ್ತರು ಒಳಗೊಂಡಂತೆ ಸಮಾಜದಲ್ಲಿ ಪ್ರತಿಯೊಬ್ಬರೂ ಇದಕ್ಕೆ ಕಡಿವಾಣ ಹಾಕಿದರೆ ಮಾತ್ರ ಸುಳ್ಳು ಸುದ್ದಿ ತಡೆಯಲು ಸಾಧ್ಯ. ಸಂವಿಧಾನದ ಮೂರು ಅಂಗಗಳಿಗೆ ಅಪಾಯ ಬಂದರೆ ಸಮಾಜಕ್ಕೆ ಅಪಾಯ ಬಂದಂತೆ. ವಾಕ್ ಸ್ವಾತಂತ್ರ್ಯ ಆಚರಿಸುವ ಪತ್ರಿಕಾ ರಂಗಕ್ಕೆ ಯಾವ ನಿರ್ಬಂಧಗಳೂ ಇರಬಾರದು ಎನ್ನುವುದನ್ನು ಪಂಡಿತ್ ನೆಹರೂ ಅವರೂ ಬಹಳ ಒತ್ತಿ ಹೇಳಿದ್ದರು ಎಂದು ವಿವರಿಸಿದರು.

ಸುಳ್ಳು ಸುದ್ದಿಗಳ ಅನಾಹುತಗಳಿಗೆ ಉದಾಹರಣೆ ನೀಡಿದ ಮುಖ್ಯಮಂತ್ರಿಗಳಯ, "ನಾನು ಸದನದಲ್ಲಿ ಮಾತನಾಡುವಾಗ ಹಿಂದಿನ ಮುಖ್ಯಮಂತ್ರಿ ಯಡಿಯೂರಪ್ಪ ಅವರು ಆಡಿದ ಮಾತನ್ನು ನಾನು ಉದಾಹರಿಸಿದ್ದೆ. ಸಾಲ ಮನ್ನಾ ಮಾಡೋದಕ್ಕೆ ನಮ್ಮ ಬಳಿ ಪ್ರಿಂಟಿಂಗ್ ಮೆಷಿನ್ ಇದೆಯಾ" ಎಂದು ಯಡಿಯೂರಪ್ಪ ಅವರು ಸದನದಲ್ಲೇ ಹೇಳಿದ್ದರು. ಈ ಮಾತನ್ನು ನಾನು ಉದಾಹರಿಸಿದ್ದೆ. ಆದರೆ ಸಾಮಾಜಿಕ ಜಾಲ ತಾಣಗಳಲ್ಲಿ ನಾನೇ ಆ ಮಾತು ಹೇಳಿದ್ದಾಗಿ ನಕಲಿ ಸುದ್ದಿ ಸೃಷ್ಟಿಸಿ, ಅದಕ್ಕೆ ಗ್ಯಾರಂಟಿ ಯೋಜನೆಗಳನ್ನು ಬೆರೆಸಿ ತಪ್ಪು ಸಂದೇಶ ಹರಡಿದರು. ಇದರಿಂದ ನಷ್ಟ ಆಗಿದ್ದು ಸಮಾಜಕ್ಕೇ ಹೊರತು ನನಗಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಫೇಕ್ ನ್ಯೂಸ್ ಸೃಷ್ಟಿಕರ್ತರಿಗೆ ಕಠಿಣ ಶಿಕ್ಷೆ ಕೊಡಿಸುವ ನಿಟ್ಟಿನಲ್ಲಿ ನಾವು ಕಾನೂನು ಮಾಡಿದ್ದೇವೆ. ಆದರೆ ಕೇವಲ ಕಾನೂನಿನಿಂದ ಮಾತ್ರ ಫೇಕ್ ನ್ಯೂಸ್ ತಡೆಯಲು ಸಾಧ್ಯವಿಲ್ಲ. ಇಡೀ ಸಮಾಜ ಇದರ ವಿರುದ್ಧ ಧ್ವನಿ ಎತ್ತಿದರೆ ಮಾತ್ರ ಸಾಧ್ಯ ಎಂದರು. ಇದೆ ವೇಳೆ ದೂರದರ್ಶನ ವಾಹಿನಿಯ ಮೈಸೂರು ಜಿಲ್ಲೆಯಲ್ಲಿ ಹಲವಾರು ವರ್ಷಗಳಿಂದ ಜಿಲ್ಲಾ ಸುದ್ದಿ ಪ್ರತಿನಿಧಿಯಾಗಿ ಸೇವೆ ಸಲ್ಲಿಸುತ್ತಿರುವ ಜಿ ಜಯಂತ್ ರವರಿಗೆ 2024ರ ವಿದ್ಯುನ್ಮಾನ ವಿಭಾಗದಲ್ಲಿ ಅತ್ಯುತಮ ವರದಿಗಾರಿಕೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ನವರು ಅತ್ಯುತ್ತಮ ಪ್ರಶಸ್ತಿ ನೀಡಿ ಸನ್ಮಾನಿಸಿ ಗೌರವಸಿದರು.

ಇದೆ ವೇಳೆ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಸಿ.ಮಹದೇವಪ್ಪ, ಮುಖ್ಯಮಂತ್ರಿಗಳ ಮಾಧ್ಯಮಸಲಹೆಗಾರ ಕೆ.ವಿ.ಪ್ರಭಾಕರ್, ಪ್ರಜಾವಾಣಿ ಪತ್ರಿಕೆ ಸಂಪಾದಕ ರವೀಂದ್ರ ಭಟ್, ಗ್ಯಾರಂಟಿ ಅನುಷ್ಠಾನ ಸಮಿತಿಯ ಪುಷ್ಪಾ ಅಮರನಾಥ್, ಶಾಸಕರಾದ ರವಿಶಂಕರ್, ತನ್ವೀರ್ ಸೇಠ್, ನ್ಯೂಸ್ ಫಸ್ಟ್ ಸಿಇಒ ರವಿಕುಮಾರ್ ಉಪಸ್ಥಿತರಿದ್ದರು. ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ದೀಪಕ್, ಕಾರ್ಯದರ್ಶಿ ರವಿ ಪಾಂಡವಪುರ ಸೇರಿ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಶಾಸಕ ಮುನಿರತ್ನಗೆ 14 ದಿನ ನ್ಯಾಯಾಂಗ ಬಂಧನಕ್ಕೆ



**ಬೆಂಗಳೂರು, ಸೆ.21:** ಅತ್ಯಾಚಾರ ಹಾಗೂ HIV ಸೋಂಕಿತ ಮಹಿಳೆಯನ್ನು ಹನಿಟ್ರ್ಯಾಪ್‌ಗೆ ಬಳಸಿಕೊಂಡ ಆರೋಪದ ಮೇಲೆ ಕಗ್ಗಲೀಪುರ ಪೊಲೀಸರ ವಶದಲ್ಲಿರುವ ರಾಜರಾಜೇಶ್ವರಿನಗರ ಕ್ಷೇತ್ರದ ಬಿಜೆಪಿ ಶಾಸಕ ಮುನಿರತ್ನಗೆ ಕೋರ್ಟ್ 14 ದಿನಗಳ ಕಾಲ ನ್ಯಾಯಾಂಗ ಬಂಧನ ವಿಧಿಸಿದೆ. ಗುತ್ತಿಗೆದಾರನಿಗೆ ಬೆದರಿಕೆ ಹಾಕಿದ ಮತ್ತು ಜಾತಿ ನಿಂದನೆ ಪ್ರಕರಣದಲ್ಲಿ ನ್ಯಾಯಾಂಗ ಬಂಧನಕ್ಕೊಳಗಾಗಿ ಜೈಲು ಪಾಲಾಗಿದ್ದ ಅವರು ಗುರುವಾರವಷ್ಟೇ ಜಾಮೀನಿನ ಮೇಲೆ ಬಿಡುಗಡೆಯಾಗಿದ್ದರು. ಇದರ ಬೆನ್ನಲ್ಲೇ ಅತ್ಯಾಚಾರ ಪ್ರಕರಣದಲ್ಲಿ ಅವರನ್ನು ಬಂಧಿಸಲಾಗಿತ್ತು. ಮುನಿರತ್ನರನ್ನು ಪೊಲೀಸರು ಶನಿವಾರ ಕೋರ್ಟ್‌ಗೆ ಹಾಜರುಪಡಿಸಿದ್ದು, ಅಕ್ಟೋಬರ್ 5ರ ವರೆಗೆ ನ್ಯಾಯಾಂಗ ಬಂಧನ ವಿಧಿಸಿ ಕೋರ್ಟ್ ಆದೇಶಿಸಿದೆ. ಮುನಿರತ್ನ ಬಂಧನದ ಬೆನ್ನಲ್ಲೇ ಅವರ ವಿರುದ್ಧ ಸಾಲು ಸಾಲು ಆರೋಪಗಳು ಕೇಳಿ ಬರುತ್ತಿದ್ದು, ರಾಜ್ಯ ರಾಜಕಾರಣದಲ್ಲಿ ಹೊಸ ಚರ್ಚೆಗೆ ನಾಂದಿ ಹಾಡಿದೆ.

ಬಿಜೆಪಿ ಶಾಸಕ ಮುನಿರತ್ನ ಅವರ ವಿರುದ್ಧ ದಾಖಲಾಗಿರುವ ಅತ್ಯಾಚಾರ ಪ್ರಕರಣದ ತನಿಖೆ ನಡೆಸಲು ವಿಶೇಷ ತನಿಖಾ ತಂಡ ರಚಿಸಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ. ಹಿರಿಯ ಐಪಿಎಸ್ ಅಧಿಕಾರಿ ಬಿ.ಕೆ ಸಿಂಗ್ ನೇತೃತ್ವದಲ್ಲಿ ವಿಶೇಷ ತನಿಖಾ ತಂಡ ರಚಿಸಿ ಆದೇಶ ಹೊರಡಿಸಿದೆ.ಈ ಮೊದಲು 2009 ರಿಂದಲೂ ಮುನಿರತ್ನ ವಿರುದ್ಧ ಹಲವು ಸ್ವರೂಪದ ಪ್ರಕರಣಗಳು ವಿವಿಧ ಹಂತದಲ್ಲಿವೆ. ಬಿಬಿಎಂಪಿಯ ಕಡತಗಳನ್ನು ತಮ ಮನೆಯಲ್ಲಿ ಇಟ್ಟುಕೊಂಡಿರುವುದು, ಕಾಮಗಾರಿಗಳಲ್ಲಿ ನೂರಾರು ಕೋಟಿ ರೂ. ಅಕ್ರಮ ಸೇರಿದಂತೆ ಹಲವು ದೂರುಗಳಿವೆ.

## ಬಿಜೆಪಿ ಶಾಸಕರ ವಿರುದ್ಧ ಡಿಸಿಎಂ ಡಿಕೆಶಿ ವಾಕ್ಸಮರ



**ಬೆಂಗಳೂರು, ಸೆ.21:** ಬಿಜೆಪಿ ಶಾಸಕ ಮುನಿರತ್ನ ಅವರು ಆರ್. ಅಶೋಕ್ ಅವರ ವಿರುದ್ಧ ನಡೆಸಿದ ಷಡ್ಯಂತ್ರ ಕೇಳಿ ನನಗೆ ದಿಗ್ಭ್ರಮೆಯಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಮುನಿರತ್ನ ಅವರ ಏಡ್ಸ್ ಟ್ರ್ಯಾಪ್ ಜಾಲದ ಬಗ್ಗೆ ಪ್ರತಿಕ್ರಿಯಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇಡೀ ಪ್ರಪಂಚ, ದೇಶ ಎಲ್ಲೂ ಕೂಡ ಈ ರೀತಿ ಸಂಚು ಎಲ್ಲೂ ನಡೆದಿಲ್ಲ. ಪಾಪ ಅಶೋಕ್ ಅವರ ವಿರುದ್ಧ ಷಡ್ಯಂತ್ರ ಕೇಳಿ ದಿಗ್ಭ್ರಾಂತಿಗೆ ಒಳಗಾಗಿದ್ದೇನೆ ಎಂದರು. ಶಾಸಕ ಮುನಿರತ್ನ ಅವರ ಬಗ್ಗೆ ಪ್ರಾರಂಭದಲ್ಲಿ ಅಶೋಕ್ ಏನು ಮಾತನಾಡಿದ್ದಾರೋ ಅದನ್ನು ಗಮನಿಸಿದ್ದೇನೆ. ಈಗ ಅವರು ಮಾತನಾಡಿದ್ದಾರೋ ಅದನ್ನು ಗಮನಿಸಿಲ್ಲ. ಮೊದಲು ಅಶೋಕಣ್ಣ, ವಿಜಯೇಂದ್ರಣ್ಣ, ಕುಮಾರಣ್ಣ, ಡಾ. ಮಂಜುನಾಥ್, ಸಿ.ಟಿ ರವಿ ಅಣ್ಣ ಎಲ್ಲರೂ ಅವರ ಅಭಿಪ್ರಾಯಗಳನ್ನು ಹೇಳಬೇಕು. ಸತ್ಯಾಸತ್ಯತೆಯನ್ನು ತಿಳಿಸಬೇಕು. ಅವರು ಇದಕ್ಕೆ ಉತ್ತರ ಕೊಡಬೇಕು ಎಂದು ಹೇಳಿದರು. ಈ ವಿಚಾರದಲ್ಲಿ ಏನು ಉತ್ತರಿಸುವುದು, ಸತ್ಯ ಏನಿದೆಯೋ ನಮಗೆ ಗೊತ್ತಿಲ್ಲ. ಯಾರ್ಯಾರದು ಏನಾಗಿದೆಯೋ ಮಾಹಿತಿ ಇಲ್ಲ, ನಾವು ಎಲ್ಲವನ್ನು ಪರಿಶೀಲಿಸಬೇಕಿದೆ ಎಂದು ವ್ಯಂಗ್ಯವಾಗಿ ಹೇಳಿದರು. ಶಾಸಕ ಮುನಿರತ್ನ ವಿರುದ್ಧ ಡಿಕೆ ಸಹೋದರರು ಷಡ್ಯಂತ್ರ ನಡೆಸಿದ್ದಾರೆ ಎಂಬ ಬಿಜೆಪಿ ನಾಯಕರ ಆರೋಪಗಳಬಗ್ಗೆ ಕೇಳಿದ ಪ್ರಶ್ನೆಗೆ ಅವರು ನನ್ನನ್ನು ನೆನೆಸಿಕೊಳ್ಳುತ್ತಲೇ ಇರಬೇಕು. ಹಾಗಾಗಿ ಮಾತನಾಡುತ್ತಿದ್ದಾರೆ. ಮುನಿರತ್ನ ಸಮರ್ಥನೆಗೆ ನಿಂತಿರುವ ಬಿಜೆಪಿ ನಾಯಕರ ನಡೆಯನ್ನು ರಾಜ್ಯದ ಜನ ಅರ್ಥ ಮಾಡಿಕೊಳ್ಳುತ್ತಾರೆ ಎಂದು ಮಾರ್ಮಿಕವಾಗಿ ಹೇಳಿದರು.

ಕೇಂದ್ರ ಸಚಿವ ಎಚ್.ಡಿ ಕುಮಾರಸ್ವಾಮಿ ವಿರುದ್ಧ ಕಾಂಗ್ರೆಸ್ ನಾಯಕರು ಮಾಡಿರುವ ಡಿ ನೋಟಿಫಿಕೇಷನ್ ಆರೋಪದ ಬಗ್ಗೆ ನನಗೆ ಮಾಹಿತಿ ಇಲ್ಲ. ಎಲ್ಲವನ್ನೂ ನೋಡಿ ಪ್ರತಿಕ್ರಿಯಿಸುತ್ತೇನೆ ಎಂದರು.

### ರಸ್ತೆಗಳ ಪರಿಶೀಲನೆ :

ಕಳೆದವಾರ ಬಿಬಿಎಂಪಿ ಅಧಿಕಾರಿಗಳಿಗೆ ರಸ್ತೆ ಗುಂಡಿಗಳನ್ನು ಮುಚ್ಚುವಂತೆ ಸೂಚನೆ ಕೊಟ್ಟಿದೆ. ಹಲವೆಡೆ ರಸ್ತೆ ಗುಂಡಿಗಳನ್ನು ಮುಚ್ಚಲಾಗಿದೆ. ಇನ್ನೂ ಕೆಲವು ಕಡೆ ಕೆಲಸ ನಡೆದಿದೆ. ಇವೆಲ್ಲವನ್ನೂ ಸ್ಥಳಕ್ಕೆ ತೆರಳಿ ಗುಣಮಟ್ಟ ಪರಿಶೀಲನೆ ಮಾಡುತ್ತೇನೆ ಎಂದು ಅವರು ಹೇಳಿದರು. ಬೇರೆ ರಾಜ್ಯಗಳಿಗೂ ಭೇಟಿ ನೀಡಿದ್ದೇನೆ. ಡೆಲ್ಲಿಯ ರಸ್ತೆಗಳನ್ನು ನೋಡಿದ್ದೇನೆ. ಅಲ್ಲಿನ ರಸ್ತೆಗಳ ದುರಾವಸ್ಥೆಯ ವೀಡಿಯೊ ಇದೆ. ಹಾಕಿದರೆ ಆ ರಾಜ್ಯಗಳಿಗೆ ಅವಮಾನ ಆಗುತ್ತೆ.. ಅದು ನಮಗೆ ಬೇಡ. ನಾವು ಇವರಿಗಿಂತ ಚೆನ್ನಾಗಿಯೇ ರಸ್ತೆಗಳ ಸುಧಾರಣೆ ಮಾಡುವ ಒಳ್ಳೆಯ ಕೆಲಸವನ್ನು ಮಾಡಿದ್ದೇವೆ. ಪರಿವರ್ತನೆ ತರುವ ಪ್ರಯತ್ನ ನಡೆಸಿದ್ದೇವೆ. ನಮ್ಮ ನಾಗರಿಕರಿಗೆ ಸೌಕರ್ಯ ಸವಲತ್ತು ಕೊಡುವುದು ನಮ್ಮ ಬದ್ಧತೆ ಎಂದರು.

## ಮುಜರಾಯಿ ಇಲಾಖೆ ವ್ಯಾಪ್ತಿಯ ಎಲ್ಲ ದೇವಾಲಯಗಳ ಪ್ರಸಾದ ತಪಾಸಣೆಗೆ ಸೂಚನೆ

**ಬೆಂಗಳೂರು, ಸೆ.21–** ಆಂಧ್ರಪ್ರದೇಶದ ಹಿಂದಿನ ಸರ್ಕಾರದ ಅವಧಿಯಲ್ಲಿ ತಿರುಪತಿಯ ಲಡ್ಡುವಿನಲ್ಲಿ ಪ್ರಾಣಿ ಕೊಬ್ಬು ಹಾಗೂ ಮೀನಿನ ಎಣ್ಣೆ ಬಳಕೆ ಮಾಡಿದ ಆರೋಪ ದೇಶಾದ್ಯಂತ ಸಂಚಲನ ಸೃಷ್ಟಿಸಿದ ಹಿನ್ನಲೆಯಲ್ಲಿ ಮುಜರಾಯಿ ಇಲಾಖೆ ವ್ಯಾಪ್ತಿಗೆ ಬರುವ ರಾಜ್ಯದ ಎಲ್ಲಾ ದೇವಾಲಯಗಳ ಪ್ರಸಾದವನ್ನು ಪ್ರಯೋಗಾಲಯಕ್ಕೆ ಒಳ ಪಡಿಸಲು ರಾಜ್ಯಸ ರ್ಕಾರ ಸೂಚನೆ ನೀಡಿದೆ.ವಿಶೇಷವೆಂದರೆ ಶುಕ್ರವಾರವಷ್ಟೇ ಮುಜರಾಯಿ ಇಲಾಖೆಯು ದೇವಾಲಯಗಳಲ್ಲಿ ಪ್ರಸಾದ ತಯಾರಿಕೆಗೆ ನಂದಿನಿ ತುಪ್ಪವನ್ನು ಕಡ್ಡಾಯವಾಗಿ ಬಳಸಬೇಕೆಂದು ಕಟ್ಟುನಿಟ್ಟಿನ ಸೂಚನೆ ಹೊರಡಿಸಿದ ಬೆನ್ನಲ್ಲೇ ಇದೀಗ ಪ್ರಸಾದವನ್ನು ಪ್ರಯೋಗಾಲಯಕ್ಕೆ ಒಳಪಡಿಸಲು ಸೂಚಿಸಲಾಗಿದೆ. ರಾಜ್ಯದ ಮುಜರಾಯಿ ವ್ಯಾಪ್ತಿಯ ದೇವಾಲಯಗಳಲ್ಲಿ ಭಕ್ತರ ಸುರಕ್ಷತೆ ಮತ್ತು ಆರೋಗ್ಯದ ದೃಷ್ಟಿಯಿಂದ ಪ್ರಸಾದವನ್ನು ಪ್ರಯೋಗಾಲಯಕ್ಕೆ ಒಳಪಡಿಸಲಾಗುತ್ತದೆ. ತಿರುಪತಿ ದೇವಸ್ಥಾನದಲ್ಲಿ ಲಡ್ಡು ವಿವಾದ ಮುನ್ನಲೆಗೆ ಬಂದಿರುವ ಹಿನ್ನಲೆಯಲ್ಲಿ ಭಕ್ತರಲ್ಲಿ ಸಾಕಷ್ಟು ಗೊಂದಲ ಉಂಟಾಗಿದೆ. ಹೀಗಾಗಿ ಈ ಗೊಂದಲವನ್ನು ನಿವಾರಿಸಲು ಪ್ರಸಾದವನ್ನು ಪ್ರಯೋಗಾಲಯಕ್ಕೆ ಒಳಪಡಿಸುವುದಾಗಿ ಮುಜರಾಯಿ ಸಚಿವರಾಗಿರುವ ರಾಮಲಿಂಗಾರೆಡ್ಡಿ ಹೇಳಿದ್ದಾರೆ. ತಿರುಪತಿ ಲಡ್ಡು ವಿವಾದದಿಂದಾಗಿ ಭಕ್ತರ ಭಾವನೆಗಳಿಗೆ ಧಕ್ಕೆ ಉಂಟಾಗಿದೆ ಎಂಬ ಅನುಮಾನ ಎಲ್ಲೆಡೆ ಕೇಳಿಬರುತ್ತಿದೆ. ದೇವಸ್ಥಾನದಲ್ಲಿ ಪ್ರಸಾದವನ್ನು ಸ್ವೀಕರಿಸಲು ಭಕ್ತರು ಹಿಂದೆಮುಂದೆ ನೋಡಬೇಕಾದ ಪರಿಸ್ಥಿತಿ ಇದೆ. ಇದು ನಿವಾರಣೆಯಾಗಬೇಕಾದರೆ ಸರ್ಕಾರ ಕೆಲವು ಬಿಗಿಯಾದ ಕ್ರಮಗಳನ್ನು ತೆಗೆದುಕೊಳ್ಳುವುದು ಅನಿವಾರ್ಯವಾಗುತ್ತದೆ ಎಂದು ಸಮರ್ಥಿಸಿಕೊಂಡಿದ್ದಾರೆ.

### ಟಿಟಿಡಿಗೆ ಸರಬರಾಜಾಗುವ ನಂದಿನಿ ತುಪ್ಪದ ವಾಹನಕ್ಕೆ ಬೆಂಗಾವಲು

ಆಂಧ್ರ ಪ್ರದೇಶದ ತಿರುಪತಿ ದೇವಾಲಯದಲ್ಲಿ ಪ್ರಸಾದವಾಗಿ ನೀಡುವ ಲಡ್ಡುವಿನಲ್ಲಿ ಪ್ರಾಣಿಗಳ ಕೊಬ್ಬು ಬಳಸಿರುವ ವಿಚಾರ ಬಹಿರಂಗವಾದ ಬಳಿಕ ಕರ್ನಾಟಕ ಹಾಲು ಒಕ್ಕೂಟ ನಂದಿನಿ ತುಪ್ಪವನ್ನು ದೇವಾಲಯಕ್ಕೆ ಸಾಗಿಸುವಲ್ಲಿ ಭಾರೀ ಭದ್ರತಾ ಕ್ರಮಗಳನ್ನು ಕೈಗೊಂಡಿದೆ. ಆಂಧ್ರಪ್ರದೇಶದ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಅವರ ನಿರ್ದೇಶನದ ಮೇರೆಗೆ ತಿರುಮಲ ತಿರುಪತಿ ದೇವಸ್ಥಾನಕ್ಕೆ ಮಂಡಳಿಯು ಇತ್ತೀಚೆಗೆ ಕರ್ನಾಟಕ ಹಾಲು ಒಕ್ಕೂಟದ ನಂದಿನಿ ತುಪ್ಪವನ್ನು ಲಡ್ಡೂಗಳಿಗೆ ಬಳಸಲು ಪುನರಾರಂಭಿಸಿದೆ.




ಇದೀಗ ತಿರುಪತಿ ಲಡ್ಡುವಿನ ವಿವಾದ ಉಂಟಾದ ಬಳಿಕ ದೇವಾಲಯಕ್ಕೆ ಕಳುಹಿಸಲಾಗುವ ತುಪ್ಪದ ಟ್ಯಾಂಕರ್ಗಳಿಗೆ ಜಿಪಿಎಸ್ ಹಾಗೂ ಎಲೆಕ್ಟ್ರಿಕ್ ಲಾಕಿಂಗ್ ವ್ಯವಸ್ಥೆಯನ್ನು ಅಳವಡಿಸಲಾಗುತ್ತಿದೆ. ಹಾಗೂ ತುಪ್ಪವನ್ನು ಎಲ್ಲೂ ಹಾಳು ಮಾಡದಂತೆ ನೋಡಿಕೊಳ್ಳಲಾಗುತ್ತಿದೆ. ತುಪ್ಪದ ಟ್ಯಾಂಕರ್ಗೆ ಅಳವಡಿಸಲಾಗುವ ಎಲೆಕ್ಟ್ರಿಕ್ ಲಾಕ್ ಅನ್ನು ಕೇವಲ ದೇವಾಲಯದ ಮಂಡಳಿಯ ಅಧಿಕಾರಿಯೊಬ್ಬರು ಮಾತ್ರ ತೆಗೆಯಬಹುದು ಎಂದು ಕರ್ನಾಟಕ ಹಾಲು ಒಕ್ಕೂಟದ ಮೂಲಗಳು ತಿಳಿಸಿವೆ.ಕರ್ನಾಟಕದಲ್ಲಿ ಮನೆಮಾತಾಗಿರುವ ನಂದಿನಿ, ಕಳೆದ ವರ್ಷದವರೆಗೂ ಟಿಟಿಡಿಗೆ ತುಪ್ಪವನ್ನು ಸರಬರಾಜು ಮಾಡುತ್ತಿತ್ತು. ಆದರೆ ಆಂಧ್ರಪ್ರದೇಶದ ಮಾಜಿ ಮುಖ್ಯಮಂತ್ರಿ ಜಗನ್ ಮೋಹನ್ ರೆಡ್ಡಿ ನೇತೃತ್ವದ ಸರ್ಕಾರವು ಸುಮಾರು 15 ವರ್ಷಗಳ ನಂತರ ಬೆಲೆ ಸಮಸ್ಯೆಗಳಿಂದ ನಂದಿನಿ ತುಪ್ಪವನ್ನು ಬಳಸುವುದನ್ನು ನಿಲ್ಲಿಸಿತು.

## ಟಿಎಸ್‌ಆರ್ ಹಾಗೂ ಮೊಹರೆ ಹಣಮಂತರಾಯ ಪ್ರಶಸ್ತಿ ಪುರಸ್ಕೃತರಿಗೆ ಕೆಯುಡಬ್ಲ್ಯೂಜೆ ಅಭಿನಂದನೆ

**ಬೆಂಗಳೂರು, ಸೆ.21:** ಟಿ.ಎಸ್.ರಾಮಚಂದ್ರರಾವ್ (ಟಿಎಸ್‌ಆರ್)ಹಾಗೂ ಮೊಹರೆ ಹಣಮಂತರಾಯ ಪತ್ರಿಕೋದ್ಯಮ ಪ್ರಶಸ್ತಿಗೆ ಭಾಜನರಾಗಿರುವ ಹಿರಿಯ ಪತ್ರಕರ್ತರುಗಳಿಗೆ ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯೂಜೆ) ಅಭಿನಂದಿಸಿದೆ. ಟಿಎಸ್‌ಆರ್ ಪತ್ರಿಕೋದ್ಯಮ ಪ್ರಶಸ್ತಿಗೆ ಆಯ್ಕೆಯಾಗಿರುವ ಹಿರಿಯ ಪತ್ರಕರ್ತರುಗಳಾದ ಶಿವಾಜಿ ಎಸ್. ಗಣೇಶನ್, ಶ್ರೀಕಾಂತಾಚಾರ್ಯ.ಆರ್.ಮಣೂರ, ಡಾ.ಆರ್.ಪೂರ್ಣಿಮಾ, ಪದ್ಮರಾಜ ದಂಡಾವತಿ ಹಾಗೂ ಡಾ.ಸರಜೂ ಕಾಟ್ಕರ್, ಮೊಹರೆ ಹಣಮಂತರಾಯ ಪತ್ರಿಕೋದ್ಯಮ ಪ್ರಶಸ್ತಿಗೆ ಭಾಜನರಾಗಿರುವ ರಾಜೀವ್ ಕಿದಿಯೂರ, ಇಂದೂಧರ ಹೊನ್ನಾಪುರ, ಎನ್.ಮಂಜುನಾಥ, ಚಂದ್ರಶೇಖರ್ ಪಾಲೆತ್ತಾಡಿ ಹಾಗೂ ಶಿವಲಿಂಗಪ್ಪ ದೊಡ್ಡಮನಿ ಅವರುಗಳಿಗೆ ಕೆಯುಡಬ್ಲ್ಯೂಜೆ ಅಧ್ಯಕ್ಷ ಶಿವಾನಂದ ತಗಡೂರು ಅಭಿನಂದನೆ ಸಲ್ಲಿಸಿದ್ದಾರೆ.

# ದ.ಭಾರತದ ಸಕ್ಕರೆ ಕಾರ್ಖಾನೆ ಸಮಸ್ಯೆ: ಕೇಂದ್ರ ಸಚಿವರ ಭೇಟಿಯಾದ ಕಾರ್ಖಾನೆಗಳ ಗಣ್ಯರ ತಂಡ

**ಬೆಂಗಳೂರು, ಸೆ.20–** ದಕ್ಷಿಣ ಭಾರತದಲ್ಲಿ ಸಕ್ಕರೆ ಕಾರ್ಖಾನೆಗಳು ಹಲವಾರು ಸಮಸ್ಯೆಗಳನ್ನು ಎದುರಿಸುತ್ತಿದ್ದು ಇಂತಹ ಸನ್ನಿವೇಶದಲ್ಲಿ ಉದ್ದಿಮೆ ಮತ್ತು ರೈತರು ಸಂಕಷ್ಟಗಳಿಗೆ ಗುರಿಯಾಗಿ ಅಭಿವೃದ್ಧಿ ಕುಂಠಿತವಾಗುತ್ತದೆ, ಇದನ್ನ ಮನಗೊಂಡು ಧಕ್ಷಿಣ ಭಾರತದ ಸಕ್ಕರೆ ಕಾರ್ಖಾನೆಗಳ ಅಸೋಷಿಯೇಷನ್ ಅಧ್ಯಕ್ಷ ವಿಜಯೇಂದ್ರಸಿಂಗ್ ನೇತೃತ್ವದಲ್ಲಿ ದಕ್ಷಿಣ ಭಾರತದ ಸಕ್ಕರೆ ಉದ್ಯಮಿಗಳ ಗಣ್ಯರುಗಳು ಇಂದು ದೆಹಲಿಯಲ್ಲಿ ಕೇಂದ್ರ ಸರಕಾರದ ಗೃಹ ಮತ್ತು ಸಹಕಾರಿ ಸಚಿವರಾದ ಅಮಿತ್ ಶಾಹ ಹಾಗೂ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರನ್ನು ಭೇಟಿಯಾಗಿ ಎದುರಿಸುತ್ತಿರುವ ಎಲ್ಲಾ ಸಮಸ್ಯಗಳನ್ನ ವಿವರಿಸಿ ಮನವಿ ಸಲ್ಲಿಸಿದರು.



ಧಕ್ಷಿಣ ಭಾರತದ ಸಕ್ಕರೆ ಕಾರ್ಖಾನೆಗಳ ಸಂಘದ ಅಧ್ಯಕ್ಷ ವಿಜಯೇಂದ್ರಸಿಂಗ್, ಕೇಂದ್ರ ಹಣಕಾಸು ಸಚಿವೆ ನಿರ್ಮಲ ಸೀತಾರಾಮನ್ ಅವರನ್ನು ಭೇಟಿಯಾದರು.



ಧಕ್ಷಿಣ ಭಾರತದ ಸಕ್ಕರೆ ಕಾರ್ಖಾನೆಗಳ ಅಸೋಷಿಯೇಷನ್ ಅಧ್ಯಕ್ಷ ವಿಜಯೇಂದ್ರಸಿಂಗ್, ಕೇಂದ್ರ ಸಚಿವ ಅಮಿತ್ ಶಾ ಅವರನ್ನು ಭೇಟಿಯಾದರು, ಪ್ರಭಾಕರ ಕೋರೆ, ಮಾಜಿ ಸಚಿವ ಮುರುಗೇಶ ನಿರಾಣಿ, ಎಸ್.ಆರ್. ಪಾಟೀಲ್, ಮಾಜಿ ಸಂಸದ ಅಣ್ಣಾಸಾಹೇಬ ಜೊಲ್ಲೆ, ಜಗದೀಶ್ ಗುಡಗುಂಟಿ, ಚಂದನ ಶ್ರೀಗಾವಂಕರ್, ಪ್ರಕಾಶ್ ನಾಯಕವಾಡೆ, ಉದಯಕುಮಾರ ಪುರಾಣಿಕಮಠ ಜೊತೆಯಲ್ಲಿದ್ದರು.

ಸಕಾರಾತ್ಮಕವಾಗಿ ಸ್ಪಂದಿಸಿದ ಸಚಿವರು ದಕ್ಷಿಣ ಭಾರತದ ಸಕ್ಕರೆ ಕಾರ್ಖಾನೆಗಳ ಸಮಸ್ಯೆಗಳನ್ನು ಸಂಪೂರ್ಣವಾಗಿ ಪರಿಹರಿಸುವುದಾಗಿ ಆಶ್ವಾಸನೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಧಕ್ಷಿಣ ಭಾರತದ ಸಕ್ಕರೆ ಕಾರ್ಖಾನೆಗಳ ಅಸೋಷಿಯೇಷನ್ ಅಧ್ಯಕ್ಷ ವಿಜಯೇಂದ್ರಸಿಂಗ್ ಸಚಿವರೊಡನೆ ನಡೆದ ಚರ್ಚೆ ಆಶಾದಾಯಕವಾಗಿದ್ದು ಸಮಸ್ಯೆಗಳಿಗೆ ಶಿಘ್ರ ಪರಿಹಾರ ದೊರೆಯಲಿದೆ ಎಂದರು.

# ಕೇಂದ್ರ ಸರ್ಕಾರದ ಫ್ಯಾಕ್ಟ್ ಚೆಕ್ ಘಟಕಕ್ಕೆ ಬಾಂಬೆ ಕೋರ್ಟ್ ತಡೆ; ಕಾಂಗ್ರೆಸ್ ಸ್ವಾಗತ

**ನವದೆಹಲಿ, ಸೆ. 21:** ಫ್ಯಾಕ್ಟ್ ಚೆಕ್ ಯುನಿಟ್ (ಎಫ್ಸಿಯು) ಮೂಲಕ ಸಾಮಾಜಿಕ ಮಾಧ್ಯಮ ವೇದಿಕೆಗಳಲ್ಲಿ ನಕಲಿ ಸುದ್ದಿ ಗುರುತಿಸಲು ಸರ್ಕಾರಕ್ಕೆ ಅಧಿಕಾರ ನೀಡುವ ತಿದ್ದುಪಡಿ ಮಾಡಿದ ಐಟಿ ನಿಯಮಗಳಿಗೆ ಬಾಂಬೆ ಹೈಕೋರ್ಟ್ ಅಸಂವಿಧಾನಿಕ ಎಂದು ತಳ್ಳಿಹಾಕಿದ್ದು, ಕಾಂಗ್ರೆಸ್ ಪಕ್ಷವು ಶನಿವಾರದ ನಿರ್ಧಾರವನ್ನು ಸ್ವಾಗತಿಸಿದೆ. ಬಿಜೆಪಿ ನೇತೃತ್ವದ ಸರ್ಕಾರವು ಫ್ಯಾಕ್ಟ್ ಚೆಕ್ ಘಟಕ ಎಂದು ಕರೆಯುವುದು ವಿಲಕ್ಷಣ ಹಾಸ್ಯ ಎಂದು ಲೇವಡಿ ಮಾಡಿದೆ. ಜೈವಿಕವಲ್ಲದ ಪ್ರಧಾನಮಂತ್ರಿ ಸುಳ್ಳಿನ ಪಿತಾಮಹ. ಅವರು ನಡೆಸುತ್ತಿರುವ ಸರ್ಕಾರವು ಈ ತಥಾಕಥಿತ ಫ್ಯಾಕ್ಟ್‌ಚೆಕ್ ಯೂನಿಟ್ ಅನ್ನು ಹುಟ್ಟುಹಾಕಿದೆ ಎಂಬುದು ಒಂದು ವಿಲಕ್ಷಣವಾದ ತಮಾಷೆಯಾಗಿದೆ. ಬಾಂಬೆ ಹೈಕೋರ್ಟ್ ಇದನ್ನು ಅಸಾಂವಿಧಾನಿಕ ಎಂದು ಸರಿಯಾಗಿ ಪರಿಗಣಿಸಿದೆ. ಆದರೆ, ಇದು ತನ್ನ ವಿಶಿಷ್ಟವಾದ ಸುಳ್ಳಿನ ಬ್ರಾಂಡ್ ಅನ್ನು ಹರಡುವುದನ್ನು ತಡೆಯಲು ಹೋಗುವುದಿಲ್ಲ ಎಂದು ಕಾಂಗ್ರೆಸ್ ಪಕ್ಷದ ಸಂವಹನ ವಿಭಾಗದ ಮುಖ್ಯಸ್ಥ ಜೈರಾಮ್ ರಮೇಶ್ ಜಾಲತಾಣದಲ್ಲಿ ಹೇಳಿಕೆ ಹಾಕಿದ್ದಾರೆ.



ಬಾಂಬೆ ಉಚ್ಚ ನ್ಯಾಯಾಲಯವು ತಿದ್ದುಪಡಿ ಮಾಡಲಾದ ನಿಯಮಗಳು ಸಮಾನತೆ ಮತ್ತು ವಾಕ್ ಸ್ವಾತಂತ್ರ್ಯದ ಹಕ್ಕನ್ನು ಉಲ್ಲಂಘಿಸುತ್ತದೆ ಎಂದು ತೀರ್ಪು ನೀಡಿತು. ಅವರ ಅಸ್ಪಷ್ಟ ಮತ್ತು ವಿಶಾಲವಾದ ಸ್ವಭಾವವು ವ್ಯಕ್ತಿಗಳು ಮತ್ತು ಸಾಮಾಜಿಕ ಮಾಧ್ಯಮ ಮಧ್ಯವರ್ತಿಗಳ ಮೇಲೆ ಪರಿಣಾಮ ಉಂಟುಮಾಡಬಹುದು ಎಂಬ ಚರ್ಚೆ ಶುರುವಾಗಿದೆ. ಜನವರಿ 2024ರಲ್ಲಿ ವಿಭಾಗೀಯ ಪೀಠವು ಈ ಬಗ್ಗೆ ತೀರ್ಪು ನೀಡಿದ ನಂತರ, ಟೈ ಬ್ರೇಕರ್ ಜಡ್ಜ್ ಆಗಿ ಸೇವೆ ಸಲ್ಲಿಸಿದ ನ್ಯಾಯಮೂರ್ತಿ ಎ ಎಸ್ ಚಂದೂರ್ಕರ್ ಅವರು ಶುಕ್ರವಾರ ತೀರ್ಪು ನೀಡಿದರು. ಸ ‘ರ್ಕಾರಕ್ಕೆ ಸಂಬಂಧಿಸಿದ ತಪ್ಪುದಾರಿಗೆಳೆಯುವ ಅಥವಾ ತಪ್ಪು ಆನ್‌ಲೈನ್ ವಿಷಯವನ್ನು ಎತ್ತಿ ತೋರಿಸುವ ಅಧಿಕಾರದೊಂದಿಗೆ ಎಫ್ಸಿಯು ಸ್ಥಾಪನೆಗೆ ತಿದ್ದುಪಡಿ ಮಾಡಲಾದ ನಿಯಮಗಳನ್ನು ಒದಗಿಸಲಾಗಿದೆ ಎಂದು ರಾಷ್ಟ್ರೀಯ ಮಾಧ್ಯಮಗಳು ವರದಿ ಮಾಡಿದೆ.

**ನಿಯಮಗಳು**: ಸಂವಿಧಾನದ ಆರ್ಟಿಕಲ್ 14 (ಸಮಾನತೆಯ ಹಕ್ಕು), ಆರ್ಟಿಕಲ್ 19 (ವಾಕ್ ಮತ್ತು ಅಭಿವ್ಯಕ್ತಿ ಸ್ವಾತಂತ್ರ್ಯ) ಮತ್ತು ಆರ್ಟಿಕಲ್ 19(1)(ಜಿ) (ಯಾವುದೇ ವೃತ್ತಿಯನ್ನು ಅಭ್ಯಾಸ ಮಾಡುವ ಸ್ವಾತಂತ್ರ್ಯ) ಅನ್ನು ಉಲ್ಲಂಘಿಸಿದೆ ಎಂದು ಪೀಠದ ಮೂರನೇ ನ್ಯಾಯಾಧೀಶರು ಅಭಿಪ್ರಾಯಪಟ್ಟಿದ್ದಾರೆ. ಸ್ಟ್ಯಾಂಡ್-ಅಪ್ ಕಾಮಿಡಿಯನ್ ಕುನಾಲ್ ಕಮ್ರಾ, ಎಡಿಟರ್ಸ್ ಗಿಲ್ಡ್ ಆಫ್ ಇಂಡಿಯಾ, ನ್ಯೂಸ್ ಬ್ರಾಡ್‌ಕಾಸ್ಟ್ ಮತ್ತು ಡಿಜಿಟಲ್ ಅಸೋಸಿಯೇಷನ್ ಮತ್ತು ಅಸೋಸಿಯೇಷನ್ ಆಫ್ ಇಂಡಿಯನ್ ಮ್ಯಾಗಜೀನ್‌ಗಳು ಹೊಸ ನಿಯಮಾವಳಿ ಪ್ರಶ್ನಿಸಿ ಬಾಂಬೆ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದವು.

ಸರ್ಕಾರಕ್ಕೆ ಸಂಬಂಧಿಸಿದ ತಪ್ಪುದಾರಿಗೆಳೆಯುವ ಅಥವಾ ತಪ್ಪು ಆನ್‌ಲೈನ್ ವಿಷಯವನ್ನು ಫ್ಲ್ಯಾಗ್ ಮಾಡುವ ಅಧಿಕಾರವನ್ನು ಹೊಂದಿರುವ ಎಫ್‌ಸಿಯು ಸ್ಥಾಪನೆಯು ವಿವಾದದ ಕೇಂದ್ರವಾಗಿದೆ. ನಿಯಮಗಳು ಮೂಲಭೂತ ಹಕ್ಕುಗಳ ಮೇಲೆ ತಣ್ಣನೆಯ ಪರಿಣಾಮವನ್ನು ಬೀರುತ್ತವೆ ಎಂಬ ಅರ್ಜಿದಾರರ ವಾದವನ್ನು ನ್ಯಾಯಾಲಯವು ಒಪ್ಪಿಕೊಂಡಿತು.

ಏಕ ನ್ಯಾಯಾಧೀಶರು ತಮ್ಮ ತೀರ್ಪಿನಲ್ಲಿ, ನಿಯಮ 3(1)(ಬಿ)(5) ವಿಧಿ 19(1)(ಎ) ಅಡಿಯಲ್ಲಿ ಖಾತರಿಪಡಿಸಿದ ಮೂಲಭೂತ ಹಕ್ಕನ್ನು ನಿರ್ಬಂಧಿಸಲು ಪ್ರಯತ್ನಿಸಿದರು. ಸಂವಿಧಾನದ ಆರ್ಟಿಕಲ್ 19(2) ಗೆ ಹೊಂದಿಕೆಯಾಗದ ನಿರ್ಬಂಧಗಳನ್ನು ಹಾಕಲು ಪ್ರಯತ್ನಿಸಿದರು.

ಆರ್ಟಿಕಲ್ 19(1)(ಎ) ವಾಕ್ ಮತ್ತು ಅಭಿವ್ಯಕ್ತಿ ಸ್ವಾತಂತ್ರ್ಯವನ್ನು ನೀಡಿದರೆ, ಆರ್ಟಿಕಲ್ 19(2) ಸರ್ಕಾರ ಅಥವಾ ಶಾಸಕಾಂಗವು ಈ ಸ್ವಾತಂತ್ರ್ಯದ ಮೇಲೆ ವಿವಿಧ ಆಧಾರದ ಮೇಲೆ ಸಮಂಜಸವಾದ ನಿರ್ಬಂಧಗಳನ್ನು ವಿಧಿಸಲು ಅನುಮತಿಸುತ್ತದೆ.



ಫಿಲಡೆಲ್ಫಿಯಾ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಶನಿವಾರ ಆಗಮಿಸಿದ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭಾರತೀಯ ವಲಸಿಗರು ಆತ್ಮೀಯವಾಗಿ ಬರಮಾಡಿಕೊಂಡರು.

# ಭಿನ್ನಾಭಿಪ್ರಾಯ ಸಹಿಸಿಕೊಳ್ಳುವುದೇ ಪ್ರಜಾಪ್ರಭುತ್ವದ ನಿಜವಾದ ಪರೀಕ್ಷೆ

**ನವದೆಹಲಿ,ಸೆ.21:** ಆಡಳಿತಗಾರ ತನ್ನ ವಿರುದ್ಧದ ಬಲವಾದ ಅಭಿಪ್ರಾಯವನ್ನು ಸಹಿಸಿಕೊಳ್ಳುತ್ತಾನೆ, ಅದು ಆತ್ಮಾವಲೋಕನಕ್ಕೆ ಕಾರಣವಾಗುತ್ತದೆ. ಭೀನ್ನಾಭಿಪ್ರಾಯ ಸಹಿಸಿಕೊಳ್ಳುವುದೇ ಪ್ರಜಾಪ್ರಭುತ್ವದ ಅತಿದೊಡ್ಡ ಪರೀಕ್ಷೆ ಎಂದು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಹೇಳಿದ್ದಾರೆ.

ಲೇಖಕರು ಮತ್ತು ಬುದ್ಧಿಜೀವಿಗಳು ನಿರ್ಭೀತಿಯಿಂದ ತಮ್ಮ ಅಭಿಪ್ರಾಯ ವ್ಯಕ್ತಪಡಿಸಬೇಕು ಎಂದು ಬಿಜೆಪಿಯ ಹಿರಿಯ ಮುಖಂಡ ಎಂಐಟಿ ವರ್ಲ್ಡ್ ಪೀಸ್ ವಿಶ್ವವಿದ್ಯಾಲಯದಲ್ಲಿ ಶುಕ್ರವಾರ ನಡೆದ ಪುಸ್ತಕ ಬಿಡುಗಡೆ ಸಮಾರಂಭದಲ್ಲಿ ಹೇಳಿದರು.

ರಾಜನು ತನ್ನ ವಿರುದ್ಧದ ಬಲವಾದ ಅಭಿಪ್ರಾಯವನ್ನು ಸಹಿಸಿಕೊಳ್ಳುತ್ತಾನೆ ಮತ್ತು ಅದರ ಬಗ್ಗೆ ಆತ್ಮಾವಲೋಕನ ಮಾಡಿಕೊಳ್ಳುವುದು ಪ್ರಜಾಪ್ರಭುತ್ವದ ದೊಡ್ಡ ಪರೀಕ್ಷೆ. ಭಾರತದಲ್ಲಿ, ಭಿನ್ನಾಭಿಪ್ರಾಯದ ಸಮಸ್ಯೆ ಇಲ್ಲ. ಆದರೆ, ಅಭಿಪ್ರಾಯದ ಕೊರತೆಯ ಸಮಸ್ಯೆ ಇದೆ ಎಂದು ಸಚಿವರು ಹೇಳಿದರು. ನಾವು



ಬಲಪಂಥೀಯರೂ ಅಲ್ಲ, ಎಡಪಂಥೀಯರೂ ಅಲ್ಲ. ನಾವು ಅವಕಾಶವಾದಿಗಳು. ಬರಹಗಾರರು ಮತ್ತು ಬುದ್ಧಿಜೀವಿಗಳು ಯಾವುದೇ ಭಯವಿಲ್ಲದೆ ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸುತ್ತಾರೆ ಎಂದು ನಿರೀಕ್ಷಿಸಲಾಗಿದೆ ಎಂದು ಅವರು ಸೇರಿಸಿದರು. ಅಸ್ಪೃಶ್ಯತೆ, ಸಾಮಾಜಿಕ ಕೀಳರಿಮೆ ಮತ್ತು ಶ್ರೇಷ್ಠತೆಯ ಕಲ್ಪನೆಗಳು ಎಲ್ಲಿಯವರೆಗೆ ಇರುತ್ತವೆಯೋ ಅಲ್ಲಿಯವರೆಗೆ ರಾಷ್ಟ್ರನಿರ್ಮಾಣದ ಕೆಲಸ ಪೂರ್ಣ ಎಂದು ಹೇಳಲಾಗುವುದಿಲ್ಲ ಎಂದು ಗಡ್ಕರಿ ಹೇಳಿದರು.

# ಲೆಬನಾನ್ ಪೇಜರ್ ಸ್ಫೋಟ ಮಲಯಾಳಿ ಯುವಕನ ವಿಚಾರಣೆ

**ನವದೆಹಲಿ, ಸೆ. 21:** ಕೇರಳದ ಜನರು ಲೆಬನಾನ್ನಲ್ಲಿ ನಡೆದ ವಿಧ್ವಂಸಕ ಪೇಜರ್ ಸ್ಫೋಟಕ್ಕೆ ಸಂಬಂಧಿಸಿದಂತೆ ವಯನಾಡ್ನ ಮನಂತವಾಡಿಯ ಮಲಯಾಳಿ ಒಬ್ಬರನ್ನು ಸಂಪರ್ಕಿಸುವ ಅಧಿಕಾರಿಗಳು ಎಚ್ಚೆತ್ತುಕೊಂಡಿದ್ದು, ಘಟನೆಯಲ್ಲಿ 39 ವರ್ಷದ ಉದ್ಯಮಿ ಮತ್ತು ನಾರ್ವೆಯ ಪ್ರಜೆ ರಿನ್ಸನ್ ಜೋಸ್ ಭಾಗಿಯಾಗಿರುವ ಬಗ್ಗೆ ತನಿಖೆ ನಡೆಸುತ್ತಿದ್ದಾರೆ.

ಮೂಲತಃ ಮನಂತವಾಡಿಯವರಾದ ಜೋಸ್, ಪ್ರಸ್ತುತ ಓಸ್ಲೋದಲ್ಲಿ ವಾಸಿಸುತ್ತಿದ್ದಾರೆ. ಅವರು ಬಲ್ಗೇರಿಯನ್ ಬೇನಾಮಿ ಕಂಪನಿ ನಾರ್ಟಾ ಗ್ಲೋಬಲ್ ನ ಮಾಲೀಕರಾಗಿದ್ದಾರೆ, ಹಿಜ್ಬುಲ್ಲಾಗೆ ಪೇಜರ್‌ಗಳನ್ನು ಸರಬರಾಜು ಮಾಡುವಲ್ಲಿ ತೊಡಗಿಸಿಕೊಂಡಿದ್ದಾರೆ ಎನ್ನಲಾಗಿದೆ.

ಲೆಬನಾನ್‌ನಲ್ಲಿ ಮಂಗಳವಾರ ಸ್ಫೋಟಗಳು ಹಿಜ್ಬುಲ್ಲಾವನ್ನು ಗುರಿಯಾಗಿಸಿಕೊಂಡು ಸಂಭವಿಸಿದ್ದು, ಪ್ರಾಥಮಿಕ ತನಿಖೆಗಳು ಜೋಸ್‌ಗೆ ಸಂಪರ್ಕ ಹೊಂದಿದ ಸೋಫಿಯಾ ಮೂಲದ ಕಂಪನಿಯಾದ ನಾರ್ಟಾ ಗ್ಲೋಬಲ್ ಸಂಸ್ಥೆ ಪೇಜರ್‌ಗಳನ್ನು ಒದಗಿಸಿದೆ ಎಂದು ತಿಳಿದುಬಂದಿದೆ.



ಜೋಸ್ ಅವರ ಕಂಪನಿಯು ತೈವಾನ್‌ನಿಂದ ಘಟಕಗಳನ್ನು ಸ್ವೀಕರಿಸಿದೆ ಎಂದು ಅಂತರರಾಷ್ಟ್ರೀಯ ಮಾಧ್ಯಮ ವರದಿ ಮಾಡಿದೆ.

ನಂತರ ಅದನ್ನು ಸಾಧನಗಳನ್ನು ತಯಾರಿಸಲು ಬಳಸಲಾಗಿದೆ. ಸ್ಫೋಟದ ದಿನದಿಂದ ಅವರು ಮತ್ತು ಅವರ ಪತ್ನಿ ನಾಪತ್ತೆಯಾದ ಕಾರಣ ಅವರು ತಮ್ಮ ಕಿರಿಯ ಸಹೋದರ ವಾಸಿಸುವ ಅಮೆರಿಕ ಅಥವಾ ಬ್ರಿಟನ್‌ಗೆ ಓಡಿಹೋಗಿರಬಹುದು ಎಂದು ವರದಿಯಾಗಿದೆ.

ಮಾನಂತವಾಡಿಯಲ್ಲಿರುವ ಜೋಸ್ ಅವರ ಕುಟುಂಬ ಆರೋಪಕ್ಕೆ ಆಘಾತ ವ್ಯಕ್ತಪಡಿಸಿದೆ. ಅವರ ಚಿಕ್ಕಪ್ಪ, ತಂಕಚನ್, ಕಾನೂನುಬಾಹಿರ ಚಟುವಟಿಕೆಯ ಯಾವುದೇ ಅನುಮಾನವನ್ನು ನಿರಾಕರಿಸಿದರು, ರಿನ್ಸನ್ ಕೇವಲ ಒಂದು ವಾರದ ಹಿಂದೆ ಕುಟುಂಬದೊಂದಿಗೆ ಸಂಪರ್ಕದಲ್ಲಿದ್ದರು ಮತ್ತು ಯಾವಾಗಲೂ ಉತ್ತಮ ನಡವಳಿಕೆಯ ವ್ಯಕ್ತಿಯಾಗಿದ್ದರು ಎಂದು ಹೇಳಿದ್ದಾರೆ.

ಥಂಕಚನ್ ಪ್ರಕಾರ, ರಿನ್ಸನ್ ಕೊನೆಯ ಬಾರಿಗೆ 2022 ರಲ್ಲಿ ತನ್ನ ತವರು ಮನೆಗೆ ಭೇಟಿ ನೀಡಿದ್ದರು. ರಿನ್ಸನ್ 2012 ರಲ್ಲಿ ನಾರ್ವೆಗೆ ತೆರಳಿ, ನಾರ್ವೆ ಪೌರತ್ವವನ್ನು ಹೊಂದಿದ್ದಾರೆ. ಅವರು ನಾರ್ಟಾಲಿಂಕ್ ಎಂಬ ಐಟಿ ಸಲಹಾ ಸಂಸ್ಥೆಯನ್ನು ಒಳಗೊಂಡಂತೆ ಹಲವಾರು ಉದ್ಯಮಗಳಲ್ಲಿ ತೊಡಗಿಸಿಕೊಂಡಿದ್ದಾರೆ. ಅವರು ಇಂಡಿಯನ್ ಸ್ಪೋರ್ಟ್ ಮತ್ತು ಕಲ್ಚರಲ್ ಅಸೋಸಿಯೇಷನ್ ಆಫ್ ನಾರ್ವೆ ಎಂಬ ಸಾಂಸ್ಕೃತಿಕ ಸಂಸ್ಥೆಯನ್ನು ಸಹ ನಡೆಸುತ್ತಿದ್ದಾರೆ? ಎಂದು ಮಾಹಿತಿ ನೀಡಿದ್ದಾರೆ.

ಪೇಜರ್ ಸ್ಫೋಟಗೊಳ್ಳುವ ಸಂವಹನ ಸಾಧನಗಳ ವಿತರಣೆಯೊಂದಿಗೆ ನಾರ್ಟಾ ಗ್ಲೋಬಲ್ಗೆ ಯಾವುದೇ ಸಂಬಂಧವಿಲ್ಲ ಎಂದು ಬಲ್ಗೇರಿಯನ್ ಅಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ ಎಂದು ಅಂತರರಾಷ್ಟ್ರೀಯ ಮಾಧ್ಯಮಗಳು ವರದಿ ಮಾಡಿವೆ.

# ಸಿಖ್ಖರ ವಿರುದ್ಧ ಹೇಳಿಕೆಗೆ ಆಕ್ಷೇಪ ರಾಹುಲ್ ವಿರುದ್ಧ 3 ಎಫ್ಐಆರ್

ರಾಯ್ಪುರ: ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ ಇತ್ತೀಚೆಗೆ ಅಮೆರಿಕಕ್ಕೆ ಭೇಟಿ ನೀಡಿದ್ದ ವೇಳೆ ಸಿಖ್ಖರ ಕುರಿತು ನೀಡಿದ ಹೇಳಿಕೆ ಖಂಡಿಸಿ ಛತ್ತೀಸ್ಗಢದ ಬಿಜೆಪಿ ನಾಯಕರು ಮೂರು ಪ್ರತ್ಯೇಕ ಎಫ್ಐಆರ್ ದಾಖಲಿಸಿದ್ದಾರೆ. ರಾಯ್ಪುರ ಸಿವಿಲ್ ಲೈನ್ಸ್ ಪೊಲೀಸ್ ಠಾಣೆಯಲ್ಲಿ ಒಂದು, ಬಿಲಾಸ್ ಪುರ ಜಿಲ್ಲಾ ಸಿವಿಲ್ ಲೈನ್ಸ್ ಠಾಣೆಯಲ್ಲಿ ಹಾಗೂ ದುರ್ಗ್ ಜಿಲ್ಲೆಯ ಕೋಟ್ವಾಲಿ ಪೊಲೀಸ್ ಠಾಣೆಯಲ್ಲಿ ಒಂದು ಎಫ್ಐಆರ್ ದಾಖಲಿಸಲಾಗಿದೆ. ಬಿಜೆಪಿ ನಾಯಕರು ನೀಡಿದ ದೂರಿನ ಮೇರೆಗೆ ರಾಹುಲ್ ಗಾಂಧಿ ವಿರುದ್ಧ ಬಿಎನ್ಎಸ್ ಸೆಕ್ಷನ್ 299 ಮತ್ತು 302ರ ಅಡಿಯಲ್ಲಿ ಪ್ರಕರಣ ದಾಖಲಿಸಿಕೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಛತ್ತೀಸ್‌ಗಢದ ಬಿಜೆಪಿ ವಕ್ತಾರ ಅಮರ್‌ಜೀತ್ ಸಿಂಗ್ ಛಾಬ್ರಾ, ರಾಹುಲ್ ಹೇಳಿಕೆಯೂ ಸಿಖ್ ಸಮುದಾಯದ ಧಾರ್ಮಿಕ ಭಾವನೆಗೆ ಧಕ್ಕೆಯಾಗಿದೆ ಎಂದು ಆರೋಪಿಸಿ ರಾಯ್ಪುರದಲ್ಲಿ ದೂರು ದಾಖಲಿಸಿದ್ದಾರೆ.

ಭಾರತದಲ್ಲಿ ಸಿಖ್ಖರಿಗೆ ಪಗಡಿ ಅಥವಾ ಕಡಾ ಧರಿಸಲು ಹಾಗೂ ಗುರುದ್ವಾರಕ್ಕೆ ಹೋಗಲು ಅನುಮತಿ ನೀಡುತ್ತಾರೆಯೇ ಎಂದು ರಾಹುಲ್ ಗಾಂಧಿ ಅಮೆರಿಕದಲ್ಲಿ ಹೇಳಿಕೆ ನೀಡಿರುವುದಾಗಿ ವಿವರಿಸಿದ್ದಾರೆ.



ಭಾರತ ಸೇರಿದಂತೆ ಇಡೀ ಪ್ರಪಂಚದಲ್ಲೇ ಸಿಖ್ ಸಮುದಾಯದವರು ಪಗಡಿ ಮತ್ತು ಕಡಾ ಧರಿಸಿ ಗುರುದ್ವಾರ ಪ್ರವೇಶಿಸುತ್ತಾರೆ. ಪ್ರಧಾನಿ ಕೂಡ ಪಗಡಿ ಮತ್ತು ಕಡಾ ಧರಿಸಿಯೇ ಗುರುದ್ವಾರಕ್ಕೆ ಭೇಟಿ ನೀಡುತ್ತಾರೆ ಎಂದು ಛಾಬ್ರಾ ಹೇಳಿದ್ದಾರೆ. ರಾಹುಲ್ ಹೇಳಿಕೆಯು ಶಾಂತಿಪ್ರಿಯ ಸಿಖ್ ಸಮುದಾಯದ ಭಾವನೆಗಳಿಗೆ ನೋವುಂಟು ಮಾಡಿದೆ. ಇದು ಸಮಾಜದ ಇತರ ಧರ್ಮಗಳೊಂದಿಗೆ ತಾರತಮ್ಯ ಮತ್ತು ದ್ವೇಷವನ್ನು ಉಂಟುಮಾಡುತ್ತದೆ ಎಂದು ಆರೋಪಿಸಿದ್ದಾರೆ.

# ಮಥುರಾದಲ್ಲಿ ದಲಿತ ಬಾಲಕಿ ಮೇಲೆ ಸಾಮೂಹಿಕ ಅತ್ಯಾಚಾರ

**ಮಥುರಾ, ಸೆ.21:** ಮಥುರಾದಲ್ಲಿ ಚಲಿಸುತ್ತಿದ್ದ ವ್ಯಾನ್‌ನಲ್ಲಿ 13 ವರ್ಷದ ದಲಿತ ಬಾಲಕಿಯ ಮೇಲೆ ಸಾಮೂಹಿಕ ಅತ್ಯಾಚಾರ ನಡೆದಿದೆ ಎಂದು ವರದಿಯೊಂದು ತಿಳಿಸಿದೆ.



ಮೂವರು ಯುವಕರು ಬಾಲಕಿಗೆ ಅಮಲೇರಿದ ನೀರನ್ನು ನೀಡಿದ ನಂತರ ಆಕೆಯನ್ನು ಅಪಹರಿಸಿದ್ದಾರೆ. ಚಲಿಸುವ ವ್ಯಾನ್‌ನಲ್ಲಿ ಆಕೆಯ ಮೇಲೆ ಅತ್ಯಾಚಾರ ಎಸಗಿದ್ದಾರೆ ಎಂದು ರಾಷ್ಟ್ರೀಯ ಮಾಧ್ಯಮಗಳು ವರದಿ ಮಾಡಿದೆ.

ಅತ್ಯಾಚಾರದ ಬಳಿಕ ತಂಡವು ಬಾಲಕಿಯನ್ನು ಫ್ಲೈ ಓವರ್ ಕೆಳಗೆ ಎಸೆದು ಪರಾರಿಯಾಗಿದೆ. ಹುಡುಗಿಗೆ ಪ್ರಜ್ಞೆ ಬಂದಾಗ ಆಕೆ ಮನೆಗೆ ಹಿಂದಿರುಗುವ ದಾರಿಯನ್ನು ಕಂಡುಕೊಂಡು, ತನ್ನ ಹೆತ್ತವರಿಗೆ ನಡೆದ ಘಟನೆ ಬಗ್ಗೆ ವಿವರಿಸಿದ್ದಾಳೆ ಎಂದು ವರದಿಯಿಂದ ತಿಳಿದುಬಂದಿದೆ.

ಬಾಲಕಿ ಕಿರಾಣಿ ಅಂಗಡಿಗೆ ಹೋಗಿದ್ದ ವೇಳೆ ಯುವಕನೊಬ್ಬ ನೀರಿನ ಬಾಟಲಿ ನೀಡಿದ್ದಾನೆ.

ಅದನ್ನು ಸೇವಿಸಿದ ಬಳಿಕ ಒಮ್ಮೆಲೇ ತಲೆಸುತ್ತು ಬಂದಂತಾಯಿತು. ಇದಾದ ನಂತರ ಮತ್ತಿಬ್ಬರು ಯುವಕರು ಸೇರಿಕೊಂಡು ಆಕೆಯನ್ನು ಬಲವಂತವಾಗಿ ವ್ಯಾನ್‌ಗೆ ಹತ್ತಿಸಿಕೊಂಡಿದ್ದಾರೆ.

ಸಂತ್ರಸ್ತೆಯ ತಂದೆ ನೀಡಿದ ದೂರಿನ ಆಧಾರದ ಮೇಲೆ ಛಾಟಾ ಪೊಲೀಸರು ಪರಾರಿಯಾಗಿರುವ ಮೂವರು ಆರೋಪಿಗಳ ವಿರುದ್ಧ ಪ್ರಕರಣ ದಾಖಲಿಸಿಕೊಂಡಿದ್ದಾರೆ.

# ಯುಪಿಐ ವ್ಯವಹಾರದಲ್ಲಿ ಗಣನೀಯ ಏರಿಕೆ: ಕೇಂದ್ರದಿಂದ ಅಂಕಿ-ಅಂಶ ಬಿಡುಗಡೆ

**ನವದೆಹಲಿ, ಸೆ.21:** ಭಾರತದಲ್ಲಿ ಡಿಜಿಟಲ್ ಪಾವತಿಯಲ್ಲಿ ಗಣನೀಯ ಏರಿಕೆಯಾಗಿದೆ ಎಂದು ಹಣಕಾಸು ಸಚಿವಾಲಯ ಶುಕ್ರವಾರ ಹೇಳಿಕೆಯಲ್ಲಿ ತಿಳಿಸಿದೆ. 2017-18ರ ಹಣಕಾಸು ವರ್ಷದಲ್ಲಿ 2,071 ಕೋಟಿ ಇದ್ದ ಡಿಜಿಟಲ್ ಪಾವತಿ ವ್ಯವಹಾರಗಳ ಸಂಖ್ಯೆ 2023-24ರ ಹಣಕಾಸು ವರ್ಷದಲ್ಲಿ 18,737 ಕೋಟಿಗೆ ಏರಿಕೆಯಾಗಿದೆ.

ಪ್ರಸಕ್ತ ಹಣಕಾಸು ವರ್ಷದ 2024-25ರ ಕಳೆದ 5 ತಿಂಗಳ ಅವಧಿಯಲ್ಲಿ (ಏಪ್ರಿಲ್-ಆಗಸ್ಟ್) ವಹಿವಾಟುಗಳ ಸಂಖ್ಯೆ 8,659 ಕೋಟಿಗೆ ತಲುಪಿದೆ ಎಂದು ಸಚಿವಾಲಯ ತಿಳಿಸಿದೆ. ವ್ಯವಹಾರದ ಮೌಲ್ಯವು 1,962 ಲಕ್ಷ ಕೋಟಿ ರೂಪಾಯಿಗಳಿಂದ 11 ಶೇಕಡಾ ಸಿಎಜಿಆರ್‌ನೊಂದಿಗೆ ಹೆಚ್ಚಾಗಿದೆ. ಹೆಚ್ಚುವರಿಯಾಗಿ 3,659 ಲಕ್ಷ ಕೋಟಿ ರೂ.ಗೆ ಹೆಚ್ಚಿಸಲಾಗಿದ್ದು, ಪ್ರಸಕ್ತ ಹಣಕಾಸು ವರ್ಷದ 2024-25ರ ಕೊನೆಯ 5 ತಿಂಗಳುಗಳಲ್ಲಿ (ಏಪ್ರಿಲ್-ಆಗಸ್ಟ್) ಒಟ್ಟು ವ್ಯವಹಾರದ ಮೌಲ್ಯವು 1,669 ಲಕ್ಷ ಕೋಟಿಗೆ ಏರಿಕೆಯಾಗಿದೆ. ಯುಪಿಐ ಭಾರತದ ಡಿಜಿಟಲ್ ಪಾವತಿ ಪರಿಸರ ವ್ಯವಸ್ಥೆಯ ಮೂಲಾಧಾರವಾಗಿ ಉಳಿದಿದೆ ಎಂದು ಸಚಿವಾಲಯವು ಗಮನ ಸೆಳೆದಿದೆ. ಸಚಿವಾಲಯದ ಪ್ರಕಾರ, ಯುಪಿಐ ದೇಶದಲ್ಲಿ ಡಿಜಿಟಲ್ ಪಾವತಿಗಳನ್ನು ಕ್ರಾಂತಿಗೊಳಿಸಿದೆ, ಯುಪಿಐ ವ್ಯವಹಾರಗಳು FY 2017-18ರಲ್ಲಿ 92 ಕೋಟಿಯಿಂದ FY 2023-24 ರಲ್ಲಿ 13,116 ಕೋಟಿಗಳಿಗೆ ಅಂದರೆ 129 ರಷ್ಟು CAGR ನೊಂದಿಗೆ ಹೆಚ್ಚಾಗಿದೆ.

ಯುಪಿಐ ಯಂತಹ ವೇಗದ ಪಾವತಿ ವ್ಯವಸ್ಥೆಗಳ ಅಳವಡಿಕೆಗೆ ಚಾಲನೆ ನೀಡುವ ಪ್ರಯತ್ನಗಳು ಹಣಕಾಸಿನ ವ್ಯವಹಾರಗಳನ್ನು ನಡೆಸುವ ರೀತಿಯಲ್ಲಿ ಕ್ರಾಂತಿಯನ್ನುಂಟುಮಾಡಿದೆ, ಲಕ್ಷಾಂತರ ಜನರಿಗೆ




ನೈಜ-ಸಮಯ, ಸುರಕ್ಷಿತ ಮತ್ತು ತಡೆರಹಿತ ಪಾವತಿಗಳನ್ನು ಸಕ್ರಿಯಗೊಳಿಸುತ್ತದೆ ಎಂದು ಹಣಕಾಸು ಸಚಿವಾಲಯ ಹೇಳಿದೆ.

ಇತರ ದೇಶಗಳಲ್ಲಿ ಭಾರತದ ಡಿಜಿಟಲ್ ಪಾವತಿ ವಿಸ್ತರಣೆಯನ್ನು ಹೈಲೈಟ್ ಮಾಡಿದ ಸಚಿವಾಲಯ, ಯುಪಿಐ ಮತ್ತು ರುಪೇ ಎರಡೂ ಜಾಗತಿಕವಾಗಿ ವೇಗವಾಗಿ ವಿಸ್ತರಿಸುತ್ತಿವೆ ಎಂದು ಹೇಳಿದೆ. ಇದು ವಿದೇಶದಲ್ಲಿ ವಾಸಿಸುವ ಮತ್ತು ಪ್ರಯಾಣಿಸುವ ಭಾರತೀಯರಿಗೆ ತಡೆರಹಿತ ಗಡಿಯಾಚೆಗಿನ ವ್ಯವಹಾರಗಳನ್ನು ಸಕ್ರಿಯಗೊಳಿಸುತ್ತದೆ.

ಪ್ರಸ್ತುತ, ಯುಪಿಐ ಏಳು ದೇಶಗಳಲ್ಲಿ ಕಾರ್ಯನಿರ್ವಹಿಸುತ್ತಿದೆ. ಇದರಲ್ಲಿ ಯುಎಇ, ಸಿಂಗಾಪುರ, ಭೂತಾನ್, ನೇಪಾಳ, ಶ್ರೀಲಂಕಾ, ಫ್ರಾನ್ಸ್ ಮತ್ತು ಮಾರಿಷಸ್ ಸೇರಿವೆ. ಇದರ ಮೂಲಕ, ಭಾರತೀಯ ಗ್ರಾಹಕರು ಮತ್ತು ವ್ಯವಹಾರಗಳು ಅಂತರರಾಷ್ಟ್ರೀಯ ಮಟ್ಟದಲ್ಲಿ ಪಾವತಿಗಳನ್ನು ಮಾಡಬಹುದು ಮತ್ತು ಸ್ವೀಕರಿಸಬಹುದು. ಸಚಿವಾಲಯದ ಪ್ರಕಾರ, ಇತ್ತೀಚಿನ ವಿಸ್ತರಣೆಯು ಹೊಸ ತಂತ್ರಜ್ಞಾನದ (ಯುಪಿಐ) ಬಳಕೆಯನ್ನು ಇನ್ನಷ್ಟು ಹೆಚ್ಚಿಸಲಿದೆ.

# ಮೋದಿ ಜನ್ಮದಿನ ರಕ್ತದಾನ ಮಾಡಿದಂತೆ ನಟಿಸಿದ ಬಿಜೆಪಿ ಮೇಯರ್

**ಲಖನೌ, ಸೆ. 21:** ರಾಜಕಾರಣಿಗಳಿಗೆ ಕ್ಯಾಮರಾ ಅಂದ್ರೆ ಬಲು ಪ್ರೀತಿ ಎಂದು ಎಲ್ಲರಿಗೂ ಗೊತ್ತಿರುವ ವಿಚಾರ, ಆದ್ರೆ ಉತ್ತರ ಪ್ರದೇಶದ ನಗರವೊಂದರ ಮೇಯರ್ ಈ ವಿಚಾರದಲ್ಲಿ ಒಂದು ಹೆಜ್ಜೆ ಮುಂದೆ ಹೋಗಿದ್ದಾರೆ.

ಉತ್ತರ ಪ್ರದೇಶದ ಪ್ರಮುಖ ನಗರಗಳಲ್ಲಿ ಒಂದಾದ ಮೊರಾದಾಬಾದ್ನ ಮೇಯರ್ ಹಾಗೂ ಬಿಜೆಪಿ ನಾಯಕ ವಿನೋದ್ ಅಗರ್ವಾಲ್ ಅವರು ಸೆಪ್ಟೆಂಬರ್ 17ರಂದು ಪ್ರಧಾನಿ ನರೇಂದ್ರ ಮೋದಿಯ ಜನ್ಮ ದಿನಾಚರಣೆಯಂದು ರಕ್ತದಾನ ಮಾಡಿದಂತೆ ಕ್ಯಾಮರಾ ಮುಂದೆ ನಟಿಸಿದ್ದಾರೆ ಎಂದು ವರದಿಯಾಗಿದೆ. ಈ ಕುರಿತ ವಿಡಿಯೋವೊಂದು ವೈರಲ್ ಆಗಿದ್ದು, ಅದರಲ್ಲಿ ಮೇಯರ್ ವಿನೋದ್ ಅವರು ಬೆಡ್ ಮೇಲೆ ಮಲಗಿ ರಕ್ತದಾನ ಮಾಡಿದಂತೆ ಫೋಸ್ ಕೊಟ್ಟಿರುವುದು ಇದೆ. ಬಿಜೆಪಿ ಪಕ್ಷದ ಕಚೇರಿಯಲ್ಲಿ ಆಯೋಜಿಸಿದ್ದ ರಕ್ತದಾನ ಶಿಬಿರದಲ್ಲಿ ಮೇಯರ್ ಈ ರೀತಿಯ



ನಟನೆ ಮಾಡಿದ್ದಾರೆ ಎಂದು ತಿಳಿದು ಬಂದಿದೆ.

ಬೆಡ್ ಮೇಲೆ ಮಲಗಿದ್ದ ಮೇಯರ್‌ಗೆ ರಕ್ತದೊತ್ತದ ಪರಿಶೀಲಿಸಿದ ವೈದ್ಯಕೀಯ ಸಿಬ್ಬಂದಿ, ರಕ್ತ ತೆಗೆಯಲು ಸೂಜಿ ಚುಚ್ಚಲು ಮುಂದಾಗಿದ್ದಾರೆ. ಈ ವೇಳೆ ಬೇಡ ಎಂದ ಮೇಯರ್ ತಕ್ಷಣ ಅಲ್ಲಿಂದ ಎದ್ದು ನಡೆಯುವುದನ್ನು ವಿಡಿಯೋದಲ್ಲಿ ನೋಡಬಹುದು.

ರಕ್ತದಾನದ ನಟನೆಯ ಬಳಿಕ ವಿಡಿಯೋ ಪೋಸ್ಟ್ ಮಾಡಿದ್ದ ಅಗರ್ವಾಲ್ ಅವರು ಪ್ರಧಾನಿ ನರೇಂದ್ರ ಮೋದಿಯವರ ಜನ್ಮದಿನದ ಅಂಗವಾಗಿ ರಕ್ತದಾನ ಮಾಡುವ ಮೂಲಕ ಸಾಮಾಜಿಕ ಜವಬ್ದಾರಿಯನ್ನು ನಿರ್ವಹಿಸಿದ್ದೇನೆ ಎಂದು ಬರೆದುಕೊಂಡಿದ್ದರು ಎಂದು ವರದಿಗಳು ಹೇಳಿವೆ.

ವಿಡಿಯೋ ವೈರಲ್ ಆದ ನಂತರ ಈ ಕುರಿತು ಅಗರ್ವಾಲ್ ಅವರನ್ನು ಪ್ರಶ್ನಿಸಿದಾಗ, ಅದು ವಿರೋಧಿಗಳು ನನ್ನ ಮಾನಹಾನಿ ಮಾಡಲು ನಡೆಸಿದ ಪಿತೂರಿ ಎಂದಿದ್ದಾರೆ.



ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಅವರು ಕೊರಿಯಾ ಗಣರಾಜ್ಯದ ವ್ಯಾಪಾರ, ಕೈಗಾರಿಕೆ ಮತ್ತು ಇಂಧನ ಸಚಿವ ಇಂಕ್ಯೊ ಚಿಯೊಂಗ್ ಅವರೊಂದಿಗೆ ಲಾವೋಸ್‌ನ ವಿಯೆಂಟಿಯಾನ್‌ನಲ್ಲಿ ಶನಿವಾರ ಮಾತುಕತೆ ನಡೆಸಿದರು.

# ಸಚಿವರ ಆಪ್ತ ಸಹಾಯಕ ಅಪಹರಣ: ದುಷ್ಕರ್ಮಿಗಳಿಗಾಗಿ ತೀವ್ರ ಶೋಧ

**ಇಂಫಾಲ್, ಸೆ.21:** ಮಣಿಪುರದ ಗ್ರಾಹಕ ವ್ಯವಹಾರಗಳ ಸಚಿವ ಎಲ್. ಸುಸಿಂದ್ರೋ ಅವರ ಆಪ್ತ ಸಹಾಯಕರನ್ನು ಇಂಫಾಲ್ ಪೂರ್ವ ಜಿಲ್ಲೆಯ ಅವರ ನಿವಾಸದ ಬಳಿಯೇ ದುಷ್ಕರ್ಮಿಗಳ ಗುಂಪೊಂದು ಅಪಹರಿಸಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಎಸ್. ಸೊಮೊರೆಂಡ್ರೊ (43) ಅಪಹರಣವಾಗಿರುವ ವ್ಯಕ್ತಿ, ಘಟನೆ ಹಿಂದಿನ ಉದ್ದೇಶವು ಅಸ್ಪಷ್ಟವಾಗಿದೆ. ಘಟನೆಯ ಹೊಣೆಯನ್ನು ಯಾವುದೇ ಗುಂಪು ಹೊತ್ತುಕೊಂಡಿಲ್ಲ. ದುಷ್ಕರ್ಮಿಗಳ ಗುಂಪಿಗಾಗಿ ಪೊಲೀಸರು ತೀವ್ರ ಶೋಧ ನಡೆಸಿದ್ದಾರೆ ಎಂದು ವರದಿಗಳು ತಿಳಿಸಿವೆ.

ಇದಕ್ಕೂ ಮುನ್ನ ಗುರುವಾರ ರಾತ್ರಿ ಬಿಷ್ಣುಪುರ ಜಿಲ್ಲೆಯ ಮಾಜಿ ಮುಖ್ಯ ಕಾರ್ಯದರ್ಶಿ ಓಯಿನಮ್ ನಬಕಿಶೋರ್ ಅವರ ನಿವಾಸದ ಮೇಲೂ ಶಸ್ತ್ರಸಜ್ಜಿತ ದಾಳಿಕೋರರು ಕನಿಷ್ಠ 5 ಸುತ್ತು ಗುಂಡು ಹಾರಿಸಿದ್ದ ಘಟನೆ ನಡೆದಿತ್ತು. ಅದೃಷ್ಟವಶಾತ್ ಯಾರಿಗೂ ಪ್ರಾಣಾಪಾಯ ಸಂಭವಿಸಿರಲಿಲ್ಲ. ಇದಾದ ಮರುದಿನವೇ ಸಚಿವರ ಆಪ್ತರನ್ನು ಕಿಡ್ನ್ಯಾಪ್ ಮಾಡಿರುವ ಘಟನೆ ನಡೆದಿದೆ. ಘಟನಾ ಸ್ಥಳದಿಂದ ಖಾಲಿ ಕಾಟ್ರಿಡ್ಜ್‌ಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ, ಬಿಷ್ಣುಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

**ಎನ್ಐಎ ಹೆಗಲಿಗೆ ಕೇಸ್:** ಇನ್ನೂ ಇಲ್ಲಿನ ಥಾಡೌ ಬುಡಕಟ್ಟು ಜನಾಂಗದ ಪ್ರಮುಖ ನಾಯಕ ಹಾಗೂ ಬಿಜೆಪಿ ವಕ್ತಾರನ ಪೂರ್ವಿಕರ ಮನೆ ಮೇಲಿನ ದಾಳಿ ಪ್ರಕರಣವನ್ನು ರಾಷ್ಟ್ರೀಯ ತನಿಖಾ ಸಂಸ್ಥೆಗೆ ಹಸ್ತಾಂತರಿಸುವಂತೆ ಮಣಿಪುರ ಸರ್ಕಾರ ಪೊಲೀಸರಿಗೆ ಸೂಚಿಸಿದೆ. ಚುರಾಚಂದ್ಪುರ ಜಿಲ್ಲೆಯ ಟಿ ಮೈಕೆಲ್ ಲಮ್ಜತಾಂಗ್ ಹಾಕಿಪ್ ಅವರ ಪೋಷಕರು ಹಾಗೂ ಇತರರು ವಾಸಿಸುವ ಅವರ ಮನೆಯ ಮೇಲೆ ನಡೆದ ದಾಳಿಯ ಕುರಿತು ದಾಖಲಿಸಲಾದ ಪ್ರಕರಣವನ್ನು ಆದಷ್ಟು ಬೇಗ ಎನ್‌ಐಎಗೆ ರವಾನಿಸಬೇಕು ಎಂದು ರಾಜ್ಯ ಸರ್ಕಾರ ಪೊಲೀಸ್ ಮುಖ್ಯಸ್ಥರಿಗೆ ಪತ್ರ ಬರೆದಿದೆ.

ವಿಷಯದ ಗಂಭೀರ ಸ್ವರೂಪವನ್ನು ಗಮನದಲ್ಲಿಟ್ಟುಕೊಂಡು ತನಿಖೆಯನ್ನು ಎನ್‌ಐಎ ಹೆಗಲಿಗೆ ವಹಿಸುವಂತೆ ಪತ್ರದಲ್ಲಿ ತಿಳಿಸಿದೆ. 2023ರ ಮೇ ತಿಂಗಳಲ್ಲಿ ಮೈತೆ-ಕುಕಿ ಜನಾಂಗೀಯ ಹಿಂಸಾಚಾರ ಪ್ರಾರಂಭವಾದಾಗಿನಿಂದ ಅವರ ಮನೆ ಮೇಲೆ ನಡೆದಿರುವ 3ನೇ ದಾಳಿ ಇದಾಗಿದೆ. ಕಳೆದ ಆಗಸ್ಟ್ 31ರಂದು ಕುಕಿ ಸಮುದಾಯದ ಪ್ರಾಬಲ್ಯವಿರುವ ಚುರಾಚಂದ್ಪುರದಲ್ಲಿರುವ ಹಾಕಿಪ್ ಅವರ ಮನೆಯನ್ನು ಧ್ವಂಸಗೊಳಿಸಿ, ಬೆಂಕಿ ಹಚ್ಚಲಾಗಿತ್ತು. ಇದಕ್ಕೂ ಮುನ್ನ ಆಗಸ್ಟ್ 25ರಂದು ಸಹ ಶಸ್ತ್ರಸಜ್ಜಿತ ಗುಂಪೊಂದು ಹಾಕಿಪ್ ಅವರ ನಿವಾಸದ ಮೇಲೆ ಗುಂಡಿನ ದಾಳಿ ನಡೆಸಿತ್ತು.

# ಮೈಮರೆಯದಿರಿ ಹಿಂದೂಗಳೇ ಬಸನಗೌಡ ಪಾಟೀಲ ಯತ್ನಾಳ ಕರೆ

**ವಿಜಯಪುರ, ಸೆ.21–** ತಿರುಪತಿ ತಿರುಮಲದಲ್ಲಿ ನೀಡುವ ಲಡ್ಡು ಪ್ರಸಾದದಲ್ಲಿ ಪ್ರಾಣಿ ಕೊಬ್ಬು ಬಳಸಲಾಗಿದೆ ಎನ್ನುವ ಆರೋಪ ಈಗ ಸಾಕಷ್ಟು ಆತಂಕ ಹಾಗೂ ವಿವಾದಕ್ಕೆ ಕಾರಣವಾಗಿದೆ. ಈ ಕುರಿತು ಬಿಜೆಪಿ ಮುಖಂಡ ಬಸನಗೌಡ ಪಾಟೀಲ ಯತ್ನಾಳ, ಹಿಂದೂಗಳು ಎಚ್ಚರವಾಗುವ ಕಾಲ ಬಂದಿದೆ ಎಂದು ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಿರುಪತಿ ಪ್ರಸಾದವಾದ ಲಡ್ಡಿನಲ್ಲಿ ಪ್ರಾಣಿ ಕೊಬ್ಬು ಬಳಸಿರುವದು ಗಂಭೀರ ವಿಷಯ. ಹಿಂದೂಗಳ ಮೇಲೆ ಅನ್ಯಕೋಮಿನವರು ದಬ್ಬಾಳಿ ನಡೆಸುವ ಕೃತ್ಯ ಇದಾಗಿದೆ. ಹಲವು ವರ್ಷಗಳಿಂದ ಹಿಂದೂಗಳ ಮೇಲೆ ಒಂದಿಲ್ಲೊಂದು ರೀತಿಯಲ್ಲಿ ದಬ್ಬಾಳಿ ಮುಂದುವರಿದಿದೆ. ಹಿಂದೂಗಳಲ್ಲಿ ಅರಿವು ಕಡಿಮೆಯಾಗಿರುವುದೇ ಇದಕ್ಕೆ ಕಾರಣ. ಭಾರತದಲ್ಲಿ ಶತಮಾನಗಳ ಹಿಂದೆ ನಡೆದಿರುವ ವಿಷಯಗಳನ್ನು ಈ ಸಂದರ್ಭದಲ್ಲಿ ಅವರು ಉಲ್ಲೇಖಿಸಿದರು.

1712ರಲ್ಲಿ ಆಹಾರದಲ್ಲಿ ಗೋಮಾಂಸ ಮಿಶ್ರಣ ಮಾಡಿದ್ದಕ್ಕಾಗಿ ಹಿಂದೂಗಳು ಮೊಘಲ್ ಸರ್ಕಾರದ ಮೇಲೆ ಬಂಡಾಯ ಸಾರುತ್ತಾರೆ. ಮೊಘಲ್ ಪ್ರಾಂತಾಧಿಪತಿ ಹಿಂದೂಗಳಿಗೆ ಬೇಷರತ್ ಕ್ಷಮೆ ಕೋರಿದ್ದನ್ನು ಸ್ಮರಿಸಬಹುದು. ಅದೇ ರೀತಿ 1857ರಲ್ಲಿ ಗುಂಡುಗಳಲ್ಲಿ ಗೋಮಾಂಸದ ಕೊಬ್ಬನ್ನು ಮಿಶ್ರಣ ಮಾಡುತ್ತಿದ್ದ ಬ್ರಿಟಿಷರ ವಿರುದ್ಧ ಹಿಂದೂಗಳು ತಿರುಗಿ ಬಿದ್ದಿದ್ದರು. ಇದೀಗ 2024ರಲ್ಲಿ ಹಿಂದೂಗಳ ಪರಮಪವಿತ್ರ ಸ್ಥಳ, ತಿರುಪತಿಯ ಪ್ರಸಾದದಲ್ಲಿ ಪ್ರಾಣಿಗಳ ಕೊಬ್ಬನ್ನು ಮಿಶ್ರಣವಾಗುತ್ತಿದೆ ಎಂದು ಪ್ರಯೋಗಾಲಯದ ಪರೀಕ್ಷೆಗಳು ಸಾಬೀತುಪಡಿಸಿದೆ. ಹಿಂದೂಗಳು ಕಿಂಚಿತ್ತೂ ಬಂಡಾಯವೆದ್ದಿಲ್ಲ. ಹಿಂದೂಗಳ ಕ್ಷಾತ್ರ ತೇಜಸ್ಸು, ಅರಿವು ಕಡಿಮೆಯಾಗಿರುವುದಕ್ಕೆ ಅನ್ಯಕೋಮಿನವರು ನಮ್ಮ ಮೇಲೆ ದಬ್ಬಾಳಿಕೆ ಮಾಡುತ್ತಿದ್ದಾರೆ ಎಂದು ಯತ್ನಾಳ ಆರೋಪಿಸಿದರು.



ಕೇರಳದಲ್ಲಾದ ಭೀಕರ ಪ್ರವಾಹದಲ್ಲಿ ಸಂತ್ರಸ್ತ ಹಿಂದೂಯೇತರ ಕುಟುಂಬಗಳಿಗೆ ಹಿಂದೂ ದೇವಸ್ಥಾನಗಳು ನೀಡಿದ ಪರಿಹಾರ ಮೊತ್ತ ಕೋಟಿಗಳಲ್ಲಿ ಇದೆ. ಕೇರಳದಲ್ಲಿ ಪ್ರವಾಹ ಸಂಭವಿಸಿದ ಸಂದರ್ಭದಲ್ಲಿ ಶಬರಿಮಲೆ 10 ಕೋಟಿ ರೂಪಾಯಿ, ತಿರುಪತಿ 5 ಕೋಟಿ ರೂಪಾಯಿ, ಶಿರಡಿ ಸಾಯಿ 5 ಕೋಟಿ ರೂಪಾಯಿ, ಗುರುವಾಯೂರು 5.3 ಕೋಟಿ ರೂಪಾಯಿ, ವೈಷ್ಣೋದೇವಿ 1 ಕೋಟಿ ರೂಪಾಯಿ ಹಾಗೂ ಕೊಲ್ಲೂರು ಮೂಕಾಂಬಿಕಾ ದೇವಸ್ಥಾನದಿಂದ 1.25 ಕೋಟಿ ರೂಪಾಯಿ ನೀಡಲಾಗಿದೆ. ಆದರೆ, ಇದರ ಪ್ರತಿಯಾಗಿ ಸರ್ಕಾರ ಮಾಡಿದ್ದೇನು? ಪ್ರಸಾದದಲ್ಲಿ ಪ್ರಾಣಿಜನ್ಯ ಕೊಬ್ಬು ಮಿಶ್ರಣ ಮಾಡುವುದು, ಕಲ್ಲಡ್ಕದ ಶಾಲಾ ಮಕ್ಕಳಿಗೆ ಊಟ ನಿಲ್ಲಿಸಿದ್ದು, ಗಣಪತಿ ವಿಸರ್ಜನೆಯ ಮೆರವಣಿಗೆಗೆ ಕಲ್ಲು, ಚಪ್ಪಲಿ, ಪೆಟ್ರೋಲ್ ಬಾಂಬ್ ಎಸೆದದ್ದು, ಹಿಂದೂಗಳ ಹಬ್ಬಗಳಿಗೆ ಪಾಲಿಸಲಾಗದಂತ ನಿಯಮಾವಳಿಗಳು ಎಂದಿದ್ದಾರೆ. ಅಲ್ಲದೇ ಮತದಾನದ ದಿನದಂದು ಮೈಮರೆಯದಿರಿ ಹಿಂದೂಗಳೇ ಎಂದು ಎಚ್ಚರಿಸಿದರು.

ನೀವೇ ಹೋರಾಟ ರೂಪಿಸಬಾರದೇಕೆ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ಅದಕ್ಕೂ ಕಾಲ ಬರುತ್ತದೆ. ಸದ್ಯ ನನ್ನ ಹೋರಾಟಕ್ಕೆ ನಮ್ಮವರೇ ಹಿಂದೂ ಪಕ್ಷದವರೆನಿಸಿಕೊಂಡವರೇ ವಿರೋಧಿಸುತ್ತಿದ್ದಾರೆ. ಇಂಥ ಮನಃಸ್ಥಿತಿಯವರನ್ನು ಮೊದಲು ಜನರು ಮಟ್ಟಹಾಕಿ ಮೂಲೆಗುಂಪು ಮಾಡಿದಾಗ ನಮ್ಮ ಹೋರಾಟಕ್ಕೆ ಬಲ ಬರುತ್ತದೆ ಎಂದರು.



ಮೈಸೂರಿನಲ್ಲಿ ಶನಿವಾರ ನಡೆದ ಜಂಬೂ ಸವಾರಿಯ ತಾಲೀಮಿನಲ್ಲಿ ದಸರಾ ಆನೆ ಮಹೇಂದ್ರ ಮತ್ತು ತಂಡದವರು ಪಾಲ್ಗೊಂಡಿದ್ದರು.

# ಪಹಣಿಗೆ ಆಧಾರ್ ಜೋಡಣೆ–ಉತ್ತಮ ಸಾಧನೆ ಗ್ರಾಮ ಅಡಳಿತಾಧಿಕಾರಿಗೆ ಜಿಲ್ಲಾಧಿಕಾರಿ ಪ್ರಶಂಸನಾ ಪತ್ರ




ಕಲಬುರಗಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕಂದಾಯ ಇಲಾಖೆ ಪ್ರಗತಿ ಪರಿಶೀಲನಾ ಸಭೆಯಲ್ಲಿ ಉತ್ತಮ ಕಾರ್ಯನಿರ್ವಹಿಸಿದ ಮಹಾಗಾಂವ–ಕುರಿಕೋಟಾ, ಚಿಮ್ಮಾಇದ್ಲಾಯಿ ಗ್ರಾಮ ಆಡಳಿತಾಧಿಕಾರಿಗಳಿಗೆ ಜಿಲ್ಲಾದಿಕಾರಿ ಬಿ.ಫೌಜಿಯಾ ತರನ್ನುಮ್ ಅವರು ಅಭಿನಂದನಾ ಪತ್ರ ನೀಡಿದರು.

**ಕಲಬುರಗಿ, ಸೆ.21–** ಸರ್ಕಾರದ ಮಹತ್ವಕಾಂಕ್ಷಿ ಯೋಜನೆಗಳಾದ ಪಹಣಿಗೆ ಆಧಾರ್ ಜೋಡಣೆ ಮತ್ತು ಸರ್ಕಾರಿ ಜಮೀನುಗಳ ಸಂರಕ್ಷಣೆಯ ಲ್ಯಾಂಡ್ ಬೀಟ್ ಅಪ್ಲಿಕೇಶನ್‌ನಲ್ಲಿ ಉತ್ತಮ ಕಾರ್ಯನಿರ್ವಹಿಸಿದ ಜಿಲ್ಲೆಯ ಕಮಲಾಪುರ ತಾಲೂಕಿನ ಮಹಾಗಾಂವ ಮತ್ತು ಕುರಿಕೋಟಾ ಗ್ರಾಮದ ಗ್ರಾಮ ಆಡಳಿತಾಧಿಕಾರಿ ಜೈಪ್ರಕಾಶ್ ಮತ್ತು ಚಿಂಚೋಳಿ ತಾಲೂಕಿನ ಚಿಮ್ಮಾಇದ್ಲಾಯಿ ಗ್ರಾಮದ ಗ್ರಾಮ ಆಡಳಿತಾಧಿಕಾರಿ ಸುಮಾ ಅವರಿಗೆ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರು ಅಭಿನಂದನಾ ಪತ್ರ ನೀಡಿ ಪ್ರಶಂಸೆ ವ್ಯಕ್ತಪಡಿಸಿದರು.

ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕಂದಾಯ ಇಲಾಖೆ ಪ್ರಗತಿ ಪರಿಶೀಲನಾ ಸಭೆಯಲ್ಲಿ ಉತ್ತಮ ಕಾರ್ಯನಿರ್ವಹಿಸಿದ ಇಬ್ಬರಿಗೂ ಅಭಿನಂದನಾ ಪತ್ರ ನೀಡಿ ಮುಂದೆಯೂ ಇಲಾಖೆಯ ಯೋಜನೆಗಳನ್ನು ಸಾರ್ವಜನಿಕರಿಗೆ ತಲುಪುವ ರೀತಿಯ ಕಾರ್ಯ ನಿರ್ವಹಿಸು ವಂತೆ ಹೇಳಿದರು.

## ಈಗಿನ ಸಿಎಂಗೆ ನಮ್ಮ ಸಮಾಜದ ಬಗ್ಗೆ ಗೌರವವಿಲ್ಲ

# ಮುಂದೆ ದೇವರು ಒಳ್ಳೆಯ ಸಿಎಂ ಕೊಟ್ಟೆ ಕೊಡ್ತಾನೆ: ಬಸವ ಜಯ ಮೃತ್ಯುಂಜಯ ಸ್ವಾಮೀಜಿ

**ಬಾಗಲಕೋಟೆ, ಸೆ.21–** ಹಿಂದಿನ ಸಿಎಂ ಬೊಮ್ಮಾಯಿ ಅವರಿಗೆ ಪಂಚಮಸಾಲಿ ಸಮಾಜದ ಬಗ್ಗೆ ಗೌರವ ಮತ್ತು ಭಯ ಇತ್ತು. ಆದರೆ ಈಗಿನ ಸಿಎಂ ಸಿದ್ದರಾಮಯ್ಯ ಅವರಿಗೆ ನಮ್ಮ ಸಮಾಜದ ಬಗ್ಗೆ ಗೌರವವಿಲ್ಲ. ಬದಲಿಗೆ ಇವರನ್ನು ಕಂಡರೆ ನಾವೇ ಭಯ ಪಡುವಂತಂತಾಗಿದೆ ಎಂದು ಕೂಡಲಸಂಗಮದ ಲಿಂಗಾಯತ ಪಂಚಮಸಾಲಿ ಪೀಠದ ಜಗದ್ಗುರು ಬಸವಜಯ ಮೃತ್ಯುಂಜಯ ಸ್ವಾಮೀಜಿ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಶ್ರೀಗಳು, ಲಿಂಗಾಯತ ಪಂಚಮಸಾಲಿ ಸಮಾಜಕ್ಕೆ 2ಎ ಮೀಸಲಾತಿ ವಿಚಾರವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸ್ಪಂದಿಸುತ್ತಿಲ್ಲ ಎಂದು ತಮ್ಮ ಅಸಮಾಧಾನ ಹೊರಹಾಕಿದರು. ಈಗಲ್ಲದಿದ್ದರೂ ಇನ್ನೂ ಐದು, ಹತ್ತು ವರ್ಷಕ್ಕಾದರೂ ರಾಜ್ಯಕ್ಕೆ ಒಬ್ಬ ಒಳ್ಳೆಯ ಮುಖ್ಯಮಂತ್ರಿಗಳನ್ನು ದೇವರು ಕೊಟ್ಟೆ ಕೊಡುತ್ತಾನೆ. ಆಗ ನಮ್ಮ ಮೀಸಲಾತಿಗೆ ಸ್ಪಂದಿಸುವ ಸಿಎಂ ಬರುತ್ತಾರೆ. ಹಾಗೆಂದು ಈಗ ನಿರಾಸೆಯಾಗಿ ಕುಳಿತರೆ ಹೋರಾಟ ನಿಂತು ಬಿಡುತ್ತದೆ. ನಮ್ಮ ಹೋರಾಟ ನಿಲ್ಲುವುದಿಲ್ಲ. ಹಿಂದೆ ಬಸವರಾಜ್ ಬೊಮ್ಮಾಯಿ ಸಿಎಂ ಇದ್ದಾಗ ಆವತ್ತಿನ ಪರಿಸ್ಥಿತಿ ಬೇರೆ ಇತ್ತು. ಹೀಗಾಗಿ ನಾವು ಬೊಮ್ಮಾಯಿ ಅವರನ್ನು ಎಲ್ಲಿಗೆ ಕರೆದರು ಬಂದು ಮಾತನಾಡುತ್ತಿದ್ದರು. ಈಗ ನಾನು ಸಿಎಂ ಮನೆ ಬಾಗಿಲಿಗೆ ಹೋಗುವ ಪರಿಸ್ಥಿತಿ ಬಂದಿದೆ. ಅದು ಅನಿವಾರ್ಯ, ಏನೂ ಮಾಡೋಕೆ ಬರುವುದಿಲ್ಲ. ನಾವು ಹೋರಾಟದಲ್ಲಿ ಇರುವುದರಿಂದ ಎಷ್ಟೇ ಕಷ್ಟ ಆದರೂ ಹೋರಾಟ ಬಿಡುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಯಾರೂ ಕೂಡ ಖಾಯಂ ಸಿಎಂ ಆಗಿ ಇರುವುದಿಲ್ಲ. ಈಗಲ್ಲದಿದ್ದರೂ ಇನ್ನೂ ಐದು, ಹತ್ತು ವರ್ಷಕ್ಕಾದರೂ ರಾಜ್ಯಕ್ಕೆ ಒಬ್ಬ ಒಳ್ಳೆಯ ಮುಖ್ಯಮಂತ್ರಿಗಳನ್ನು ದೇವರು ಕೊಟ್ಟೆ ಕೊಡುತ್ತಾನೆ. ಆಗ ನಮ್ಮ ಮೀಸಲಾತಿಗೆ



ಕೂಡಲಸಂಗಮ ಪಂಚಮಸಾಲಿ ಜಗದ್ಗುರುಗಳು.

ಸ್ಪಂದಿಸುವ ಸಿಎಂ ಬರುತ್ತಾರೆ. ಹಾಗೆಂದು ಈಗ ನಿರಾಸೆಯಾಗಿ ಕುಳಿತರೆ ಹೋರಾಟ ನಿಂತು ಬಿಡುತ್ತದೆ. ಅವರು ಸ್ಪಂದನೆ ಮಾಡಲಿ, ಬಿಡಲಿ ನಮ್ಮ ಹಕ್ಕೋತ್ತಾಯವನ್ನು ಮಾಡುತ್ತೇವೆ. ನಮ್ಮ ಸಮಾಜದ ಶಾಸಕರ ಮೂಲಕವೂ ಒತ್ತಡ ಹಾಕುತ್ತೇನೆ. ವಕೀಲರ ಮೂಲಕವೂ ಒತ್ತಡ ಹಾಕುತ್ತೇನೆ. ಸ್ವತಃ ವಕೀಲರು ಆಗಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ವಕೀಲರನ್ನು ನೋಡಿಯಾದರೂ ಮನಸ್ಸು ಕರಗಿ ನಮಗೆ ಮೀಸಲಾತಿ ಘೋಷಣೆ ಮಾಡಬಹುದು ಎಂದು ಸ್ವಾಮೀಜಿ ಹೇಳಿದರು.

ಪಂಚಮಸಾಲಿಗಳಿಗೆ 2ಎ ಮೀಸಲಾತಿ ಹೋರಾಟ ಆರಂಬಿಸಿದ ಬಳಿಕ ಇದೀಗ ಇಬ್ಬರು ಸಿಎಂಗಳು ಹೋಗಿ ಮೂರನೇಯವರು ಬಂದಿದ್ದಾರೆ. ಮುಖ್ಯಮಂತ್ರಿಗಳು ಯಾರೇ ಆಗಿರಲಿ ಮೀಸಲಾತಿ ಸಿಗುವವರೆಗೂ ಹೋರಾಟ ಮುಂದುವರೆಯಲಿದೆ. ಕಾನೂನಿನ ತೊಡಕಿನ ಕಾರಣಕ್ಕೆ ಪಂಚಮಸಾಲಿಗಳಿಗೆ 2ಎ ಮೀಸಲಾತಿ ನೀಡುವುದು ವಿಳಂಬವಾದರೆ ಎಲ್ಲ ಲಿಂಗಾಯತರನ್ನು ಕೇಂದ್ರದ ಒಬಿಸಿ ಪಟ್ಟಿಗೆ ಸೇರಿಸಲು ರಾಜ್ಯ ಸರ್ಕಾರ ಕೂಡಲೇ ಕೇಂದ್ರಕ್ಕೆ ಶಿಪಾರಸು ಮಾಡಬೇಕು ಎಂದು ಸಿದ್ದರಾಮಯ್ಯ ಸರ್ಕಾರಕ್ಕೆ ಒತ್ತಾಯಿಸಿದರು.

# ಲೋಕಾಯುಕ್ತರಿಂದ ಕುಂದುಕೊರತೆ ಆಲಿಕೆ: 'ಭ್ರಷ್ಟಾಚಾರ ಮುಕ್ತ ಸಮಾಜಕ್ಕೆ ಎಲ್ಲರ ಸಹಕಾರ ಅಗತ್ಯ'

**ಬಸವಕಲ್ಯಾಣ, ಸೆ. 21–** ಇಲ್ಲಿಯ ತಹಶೀಲ್ ಕಚೇರಿಯ ಸಭಾಂಗಣದಲ್ಲಿ ಲೋಕಾಯುಕ್ತ ಪೊಲೀಸರು ಸಾರ್ವಜನಿಕರ ಕುಂದು ಕೊರತೆಗಳು ಹಾಗೂ ಅಹವಾಲು ಸ್ವೀಕರಿಸಿದರು. ವಿವಿಧೆಡೆಯಿಂದ ಆಗಮಿಸಿದ ಸಾರ್ವಜನಿಕರು ತಮ್ಮ ದೂರುಗಳನ್ನು ಲೋಕಾ ಅಧಿಕಾರಿಗಳಿಗೆ ಸಲ್ಲಿಸಿದರು.

ಸ್ಥಳದಲ್ಲಿಯೇ ಅಧಿಕಾರಿಗಳ ಸಮ್ಮುಖದಲ್ಲಿ ಕೆಲ ಅರ್ಜಿಗಳ ಇತ್ಯರ್ಥ ಪಡಿಸಿದರು. ಅಹವಾಲು ಸ್ವೀಕಾರ ಹಿನ್ನಲೆಯಲ್ಲಿ ವಿವಿಧ ಇಲಾಖೆಯ ತಾಲ್ಲೂಕು ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು. ಅಧಿಕಾರಿಗಳು ಕಚೇರಿಗೆ ಬಂದ ನಂತರ ಕಚೇರಿಯ ಸಮಯದಲ್ಲಿ ಯಾವುದೇ ಕಾರಣಕ್ಕೂ ದ್ವಾರಗಳು ಬಂದ್ ಮಾಡಿ ಕೂಡಬೇಡಿ. ಇಂತಹ ವರದಿಗಳು ನಮ್ಮ ಗಮನಕ್ಕೆ ಬಂದಿವೆ. ಸಾರ್ವಜನಿಕರು ಕುಂದು ಕೊರತೆಗಳ ಅರ್ಜಿಗಳನ್ನು ಹಿಡಿದು ಕೊಂಡು ನಿತ್ಯ ಕಚೇರಿಗೆ ಬರುತ್ತಾರೆ.



ಬಸವಕಲ್ಯಾಣದ ತಹಶೀಲ್ ಕಚೇರಿಯ ಸಭಾಂಗಣದಲ್ಲಿ ಲೋಕಾಯುಕ್ತ ಪೊಲೀಸರಿಂದ ಸಾರ್ವಜನಿಕರ ಕುಂದು ಕೊರತೆಗಳು ಹಾಗೂ ಅಹವಾಲು ಸ್ವೀಕಾರ ನಡೆಯಿತು.

ನೀವು ಕಚೇರಿಯ ದ್ವಾರಗಳು ಬಂದ್ ಮಾಡಿ ಕುಳಿತರೆ ಅವರು ಗಂಟೆಗಟ್ಟಲೇ ಕಾಯ ಬೇಕಾಗುತ್ತದೆ. ಹೀಗಾಗಿ ನಿಗದಿತ ಸಮಯದಲ್ಲಿ ಆಗಮಿಸುವ ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸಬೇಕು ಅಧಿಕಾರಿಗಳಿಗೆ ಲೋಕಾಯುಕ್ತ ಅಧಿಕಾರಿಗಳು ಸಲಹೆ ನೀಡಿದರು.

ಈ ವೇಳೆ ಬೀದರ್ ಲೋಕಾಯುಕ್ತ ಡಿವೈಎಸ್‌ಪಿ ಹನುಮಂತರಾಯ ಮಾತನಾಡಿ ಜನರಿಗಾಗಿ ಜನರ ಸೇವೆಗಾಗಿ ಅಧಿಕಾರಿಗಳು ಕೆಲಸ ಮಾಡಬೇಕು. ಭ್ರಷ್ಟಾಚಾರ ಮುಕ್ತ ಸಮಾಜ ನಿರ್ಮಿಸಲು ಎಲ್ಲರ ಸಹಾಯ–ಸಹಕಾರ ಅವಶ್ಯಕವಾಗಿದೆ. ಲಂಚದ ಬೇಡಿಕೆ ಇಡುವದು ಕಾನೂನು ರೀತಿಯಲ್ಲಿ ಅಪರಾಧ ವಾಗಿದೆ. ಇಂತಹ ಪ್ರಕರಣದಲ್ಲಿ ದೂರು ಬಂದರೆ ಲೋಕಾ ಅಧಿಕಾರಿಗಳು ದಾಳಿ ನಡೆಸಿ ಪ್ರಕರಣ ದಾಖಲಿಸುತ್ತಾರೆ. ಹೀಗಾಗಿ ಇದಕ್ಕೆ ಅಧಿಕಾರಿಗಳು ಆಸ್ಪದ ನೀಡಬೇಡಿ. ತಮ್ಮ ಜವಬ್ದಾರಿ ಅರಿತು ಕರ್ತವ್ಯ ನಿರ್ವಹಿಸಿ ಜನರ ಸಮಸ್ಯೆಗಳಿಗೆ ಸ್ಪಂದಿಸಬೇಕು ಎಂದು ತಿಳಿಸಿದರು.

ಇತ್ತೀಚಿಗೆ ಹುಲಸೂರ ತಾಲ್ಲೂಕಿನ ಬೇಲೂರ ಹಾಗೂ ಗೋರ್ಟಾ ಗ್ರಾಪಂ ವ್ಯಾಪ್ತಿಯಲ್ಲಿ ನರೇಗಾ ಯೋಜನೆಯಡಿ ಎರಡು ಪ್ರಕರಣಗಳು ದಾಖಲಾಗಿದ್ದವು. ಈಗಾಗಲೇ ಬೇಲೂರ ಗ್ರಾಪಂ ವ್ಯಾಪ್ತಿಯಲ್ಲಿ ನಡೆದ ಅವ್ಯವಹಾರ ತನಿಖೆ ಪೂರ್ಣಗೊಂಡಿದ್ದು, ಗೋರ್ಟಾ ವ್ಯಾಪ್ತಿಯಲ್ಲಿನ ಪ್ರಕರಣ ವಿಚಾರಣೆಯ ಹಂತದಲ್ಲಿದ್ದು ಕೂಡಲೇ ತನಿಖೆ ಮುಗಿಸಿ ವರದಿ ಸಲ್ಲಿಸಲಾಗುವುದು ಎಂದು ತಿಳಿಸಿದರು.

# ಪ್ರಧಾನಿ ನರೇಂದ್ರ ಮೋದಿಯವರ 74ನೇ ಹುಟ್ಟುಹಬ್ಬದ ಪ್ರಯುಕ್ತ ರಕ್ತದಾನ ಶಿಬಿರ–ಎಂ.ಎಸ್.ಸಿದ್ದಪ್ಪ

**ಬಳ್ಳಾರಿ, ಸೆ.21–**ಬಳ್ಳಾರಿ ಜಿಲ್ಲೆಯ ಸಿರುಗುಪ್ಪ ನಗರದ ಬಿಜೆಪಿ ಕಚೇರಿಯಲ್ಲಿ ವಿಶ್ವ ನಾಯಕ ಹೆಮ್ಮೆಯ ಪ್ರಧಾನ ಮಂತ್ರಿಗಳಾದ ನರೇಂದ್ರ ಮೋದಿಯವರ 74ನೇ ಹುಟ್ಟುಹಬ್ಬದ ಪ್ರಯುಕ್ತ ಸಿರುಗುಪ್ಪ ನಗರದ ಭಾರತೀಯ ಜನತಾ ಪಾರ್ಟಿ ಯುವ ಮೋರ್ಚಾದ ವತಿಯಿಂದ ರಕ್ತದಾನ ಶಿಬಿರವನ್ನು ಹಮ್ಮಿಕೊಳ್ಳಲಾಯಿತು,

ಈ ಸಂದರ್ಭದಲ್ಲಿ ಜಿಲ್ಲಾ ಯುವ ಮೋರ್ಚಾ ಅಧ್ಯಕ್ಷರಾದ ಎಂ ಎಸ್ ಸಿದ್ದಪ್ಪ ,ಸಿರುಗುಪ್ಪ




ಮಂಡಲ ಯುವ ಮೋರ್ಚಾ ಅಧ್ಯಕ್ಷರಾದ ಶೇಖರಗೌಡ, ಪ್ರಧಾನ ಕಾರ್ಯದರ್ಶಿಗಳಾದ ಶ್ರೀನಿವಾಸ್, ಮತ್ತು ಶಂಕರ್, ಜಿಲ್ಲಾ ಯುವ ಮೋರ್ಚಾ ಕಾರ್ಯದರ್ಶಿಗಳಾದ ಅಂಬಣ್ಣ, ಗಾದಿಲಿಂಗ, ಕಾಸಿಮು, ಬಂದೇನವಾಜ್, ಹನುಮೇಶ ಯಾದವ್ ಮುಂತಾದವರು ಯುವ ಕಾರ್ಯಕರ್ತರುಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು ಎಂದು ಎಂ.ಎಸ್.ಸಿದ್ದಪ್ಪನವರು ತಿಳಿಸಿದ್ದಾರೆ.

# ಕಲಿಕೆಗೆ ತಾಳ್ಮೆ ಬಹುಮುಖ್ಯ–ಡಾ. ಎಚ್.ಡಿ .ಪ್ರಶಾಂತ್

**ಬಳ್ಳಾರಿ, ಸೆ.21–** ಕನ್ನಡ ವಿಶ್ವವಿದ್ಯಾಲಯ ಹಂಪಿ ವಿದ್ಯಾರಣ್ಯ ಸಮಾಜಶಾಸ್ತ್ರ ಅಧ್ಯಯನ ಮತ್ತು ಸಂಶೋಧನಾ ವಿಭಾಗದಲ್ಲಿ ಸಮಾಜಮುಖಿ ತಿಂಗಳ ಮಾತು–2ರ ಸಂಶೋಧನಾ ಬರವಣಿಗೆಯಲ್ಲಿ ಎಕ್ಸೆಲ್ ಮತ್ತು ವರ್ಡ್ ಬಳಕೆ ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿಕೊಂಡು ಮಾತನಾಡಿದ ಡಾ.ಎಚ್.ಡಿ. ಪ್ರಶಾಂತ್ ಹಿರಿಯ ಪ್ರಾಧ್ಯಾಪಕರು ಅಭಿವೃದ್ಧಿ ಅಧ್ಯಯನ ವಿಭಾಗ ಇವರು ಕಲಿಯುವುದು ತುಂಬಾ ಇದೆ. ಅದಕ್ಕೆ ನಮ್ಮಿಂದ ತಾಳ್ಮೆ ಬೇಕು. ವಿಶೇಷವಾಗಿ ಈ ಎಕ್ಸೆಲ್ ಮತ್ತು ವರ್ಡ್ ಕಲಿಯುವುದಕ್ಕೆ ಇದು ಕಲಿಕಾ ದೃಷ್ಟಿಯಿಂದ ಒಳ್ಳೆಯ ಕಾರ್ಯಕ್ರಮವಾಗಿದೆ. ಈ ರೀತಿಯ ಕಾರ್ಯಕ್ರಮಗಳು ವಿಶ್ವವಿದ್ಯಾಲಯದಲ್ಲಿ ಸದಾಕಾಲ ನಡೆಯಬೇಕು. ತಂತ್ರಜ್ಞಾನ ಯುಗದಲ್ಲಿ ಇವುಗಳ ಜೊತೆ ಹೊಂದಿಕೊಂಡು ಬದುಕಬೇಕು. ಇದರಿಂದ ಕೌಶಲ್ಯ, ಜ್ಞಾನ ವೃದ್ಧಿಸುವುದರ ಜೊತೆಗೆ ನಿಮ್ಮ ಹಣವನ್ನು ಉಳಿಸಬಹುದು. ಯಾರ ಅವಲಂಬನೆ




ಇಲ್ಲದೇನೆ ನಿಮ್ಮ ಸಂಶೋಧನೆಯನ್ನು ಪೂರ್ಣಗೊಳಿಸಬಹುದು. ಕಲಿಕೆ ಮುಕ್ತವಾದ ವೇದಿಕೆ ಇದೆ. ಕಲಿಯಲು ಸಮಯ ಕೊಡಬೇಕು ಅಷ್ಟೇ. ಅನೇಕ ಯುವಕರು ಇದರಿಂದ ತಮ್ಮ ಜೀವನವನ್ನು ಕಟ್ಟಿಕೊಂಡಿದ್ದಾರೆ ಎಂದು ತಮ್ಮ ಅನುಭವಗಳ ಜೊತೆ ವ್ಯಕ್ತಪಡಿಸಿದರು.

ಕಂಪ್ಯೂಟರ್ ಇಲ್ಲದ ಕಾಲದಲ್ಲಿ ಕೈಯಲ್ಲಿ ಬರೆದ ಅಂಕಿ ಅಂಶಗಳು ಪ್ರಸ್ತುತ ದತ್ತಾಂಶಗಳಿಗೆ ಹೋಲಿಕೆ ಆಗುತ್ತಿರಲಿಲ್ಲ, ಇದರಿಂದ ಸಂಶೋಧನೆಯಲ್ಲಿ ಅಂಕಿ–ಅಂಶಗಳ ವಿಚಾರದಲ್ಲಿ ತುಂಬಾ ಸಮಸ್ಯೆ ಎದುರಾಗುತ್ತಿತ್ತು ಇದರಿಂದ ಹೊರಬರಲು ಎಕ್ಸೆಲ್ ಮತ್ತು ವರ್ಡ್ ನಮಗೆ ತುಂಬಾ ಸಹಾಯಕವಾಗಿದೆ. ಪ್ರಚಲಿತವಾದ ವಿಷಯವನ್ನು ಯಾವಾಗ ಬೇಕಾದರೂ ಇಲ್ಲಿ ದಾಖಲಿಸಬಹುದು. ಇದರಿಂದ ಸಂದರ್ಶನದ ಅನುಸೂಚಿಯಲ್ಲಿ ನೇರವಾಗಿ ಸಂಶೋಧನಾರ್ಥಿಗಳು ತಮ್ಮ ದತ್ತಾಂಶದ ಮಾಹಿತಿಯನ್ನು ಪಡೆಯುತ್ತಾರೆ. ಎಕ್ಸೆಲ್‌ನಲ್ಲಿ ಮುಖ್ಯ ಅಂಶಗಳನ್ನು ಸ್ತಂಭ, ನಕ್ಷೆ, ಪೈ ಚಾರ್ಟ್, ಮೂಲಕ ಅರ್ಥವಾಗುವ ರೀತಿಯಲ್ಲಿ ತೋರಿಸಬಹುದು ಎಂದು ವಿರೂಪಾಕ್ಷ ಕೆ. ಸಮಾಜಶಾಸ್ತ್ರ ಅಧ್ಯಯನ ವಿಭಾಗದ ಸಂಶೋಧನಾರ್ಥಿ ಇವರು ತಮ್ಮ ಸಂಶೋಧನಾ ವಿಷಯವನ್ನು ಆಧಾರವಾಗಿಟ್ಟುಕೊಂಡು ಉದಾಹರಣೆಯನ್ನು ತೋರಿಸುವುದರ ಮೂಲಕ ಎಕ್ಸೆಲ್ ಹಾಗೂ ವರ್ಲ್ಡ್ ಬಗ್ಗೆ ವಿವರವಾದ ಮಾಹಿತಿಯನ್ನು ಹಂಚಿಕೊಂಡರು.

# ಓದುವ ಸಂಸ್ಕೃತಿ ವಿದ್ಯಾರ್ಥಿಗಳ ಭವಿಷ್ಯರೂಪಿಸುತ್ತದೆ: ಡಾ.ವಿಠ್ಠಲ್ ರೆಡ್ಡಿ




ಬಸವಕಲ್ಯಾಣದ ತಹಶೀಲ್ ಕಚೇರಿಯ ಸಭಾಂಗಣದಲ್ಲಿ ಲೋಕಾಯುಕ್ತ ಪೊಲೀಸರಿಂದ ಸಾರ್ವಜನಿಕರ ಕುಂದು ಕೊರತೆಗಳು ಹಾಗೂ ಅಹವಾಲು ಸ್ವೀಕಾರ ನಡೆಯಿತು.

**ಬೀದರ್, ಸೆ. 21–** ಇಂದಿನ ವಿದ್ಯಾರ್ಥಿಗಳು ಮೊಬೈಲ್ ದಾಸರಾಗದೆ ಪುಸ್ತಕ ಓದುವ ಹವ್ಯಾಸ ಬೆಳೆಸಿಕೊಂಡಾಗ ಮಾತ್ರ ಯಶಸ್ವಿಯಾಗಲು ಸಾಧ್ಯ ಎಂದು ಪ್ರಾಂಶುಪಾಲ ಡಾ. ಪಿ. ವಿಠ್ಠಲ ರೆಡ್ಡಿ ಮಾರ್ಮಿಕವಾಗಿ ನುಡಿದರು.

ಹೈದ್ರಾಬಾದ ಕರ್ನಾಟಕ ಶಿಕ್ಷಣ ಸಂಸ್ಥೆಯ ಬಿ.ವಿ. ಭೂಮರಡ್ಡಿ ಪದವಿ ಮಹಾವಿದ್ಯಾಲಯದಲ್ಲಿ ಹಮ್ಮಿಕೊಂಡ ಪ್ರ–ಶಿಕ್ಷಣ ಕಾರ್ಯಗಾರದಲ್ಲಿ ಮಾತನಾಡಿ ಮಹಾವಿದ್ಯಾಲಯದಲ್ಲಿ ಅಧ್ಯಯನ ಮಾಡಿದ ವಿದ್ಯಾರ್ಥಿ, ವಿದ್ಯಾರ್ಥಿನಿಯರು ರಾಜ್ಯದ ಉನ್ನತ ಹುದ್ದೆಗಳು ಹಾಗೂ ದೇಶದ ಉನ್ನತ ಹುದ್ದೆಗಳು ಪಡೆದುಕೊಂಡಿದ್ದಾರೆ. ಇದು ನಮಗೆ ಹೆಮ್ಮೆಯ ವಿಷಯ. ಹಿಂದೆ ಹಲವಾರು ವಿದ್ಯಾರ್ಥಿಗಳು ಮೊಬೈಲ್ ಗೀಳಿಲ್ಲದೆ ಗ್ರಂಥಾಲಯಕ್ಕೆ ಹೋಗಿ ಗ್ರಂಥಗಳು, ಪುಸ್ತಕಗಳು ಅಧ್ಯಯನ ಮಾಡಿ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಿ ಉನ್ನತ ಹುದ್ದೆಗಳು ಪಡೆದು ತಮ್ಮ ತಂದೆ ತಾಯಿ, ಗ್ರಾಮದ ಹಾಗೂ ಮಹಾ ವಿದ್ಯಾಲಯಕ್ಕೆ ಕೀರ್ತಿ ತಂದಿದ್ದಾರೆ ಎಂದು ಹೇಳಿದರು.

ಉಪ ಪ್ರಾಂಶುಪಾಲ ಅನೀಲ ಕುಮರ ಅಣದೂರೆ ಮಾತನಾಡಿ ನಮ್ಮ ಮಹಾವಿದ್ಯಾಲಯದಲ್ಲಿ ವಿವಿಧ ವಿಭಾಗಗಳು ಅತ್ಯಂತ ಕ್ರೀಯಾಶೀಲ ಉಪನ್ಯಾಸಕರನ್ನು ಹೊಂದಿದ್ದು ತಾವೆಲ್ಲ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಜ್ಞಾನದ ದಾಸರಾಗಿ ಹಾಗೂ ಗ್ರಂಥಾಲಯಕ್ಕೆ ಹೋಗಿ ಸ್ಪರ್ಧಾತ್ಮಕ ಪರೀಕ್ಷೆಗಳ ಪುಸ್ತಕಗಳನ್ನು ಓದಿ ಹಾಗೂ ಈ ಗ್ರಂಥಾಲಯ, ಎನ್‌ಲಿಸ್ಟ್, ಉಪ ಯೋಗ ಪಡೆದು ನಿಮ್ಮ ಸಾಮಾನ್ಯ ಜ್ಞಾನ ಹೆಚ್ಚಿಸಿಕೊಂಡು ನಿಮ್ಮ ಅತಿ ಹೆಚ್ಚು ಸಮಯ ಓದುವ ಹವ್ಯಾಸ ಬೆಳೆಸಿಕೊಂಡು ದುಶ್ಚಟಕ್ಕೆ ಬಲಿಯಾಗದೆ ಒಬ್ಬ ಒಳ್ಳೆಯ ಸತ್ಪ್ರಜೆಯಾಗಿ ಬಾಳಿ ಬದುಕಬೇಕು. ನಮ್ಮ ಆದರ್ಶ ಇನ್ನೊಬ್ಬರಿಗೆ ದಾರಿ ದೀಪ ವಾಗಬೇಕೆಂದು ನುಡಿದರು.

# 1 ಕೋಟಿ ರೂ ಮೌಲ್ಯದ ಗುಟ್ಕಾ, ಪಾನ್ ಮಸಲಾ ಜಪ್ತಿ

**ಬೀದರ್, ಸೆ.21–** ತಮಿಳು, ಮಹಾರಾಷ್ಟ್ರ, ತೆಲುಗು, ಹಿಂದಿ,ಕನ್ನಡ, ಉರ್ದು, ಇಂಗ್ಲಿಷ್ ಸೇರಿದಂತೆ ವಿವಿಧ ಭಾಷೆಯಲ್ಲಿ ಮುದ್ರಿಸಿ ಸುಮಾರು 40 ನಮೂನೆಯ ಕಳಪೆ ಗುಟ್ಕಾ, ಪಾನಮಸಲಾ ತಂಬಾಕು ತಯಾರಿಸಿ ವಿವಿಧ ರಾಜ್ಯಕ್ಕೆ ಸಾಗಿಸು ತ್ತಿರುವ ಅಡ್ಡೆ ಮೇಲೆ ಇಲ್ಲಿನ ವಾಣಿಜ್ಯ ತೆರಿಗೆ ಇಲಾಖೆ ಅಧಿಕಾರಿಗಳು ಭರ್ಜರಿ ಕಾರ್ಯಾಚರಣೆ ನಡೆಸಿ ದಾಳಿ ಮಾಡಿದ್ದಾರೆ. ವಾಣಿಜ್ಯ ತೆರಿಗೆ ಇಲಾಖೆ ಸಹಾಯಕ ಆಯುಕ್ತ ಮಹೇಶ ಪಾಟೀಲ್ ನೇತೃತ್ವದಲ್ಲಿ ದಾಳಿ ಮಾಡಿ ಒಂದು ಕೋಟಿ ಗೂ ಅಧಿಕ ಮೌಲ್ಯದ ಪಾನಪಸಾಲ ತಯಾರಿಕೆ ಕಚ್ಚಾವಸ್ತುಗಳು ಹಾಗೂ ಗುಟ್ಕಾ ಹಾಗೂ ಪಾನ ಮಸಾಲಾವನ್ನು ವಶಕ್ಕೆ ಪಡೆದಿದ್ದಾರೆ. ಸುಮಾರು 40ಕ್ಕೂ ಅಧಿಕ ನಮೂನೆಯ ಗುಟ್ಕಾ ಪಾನಮಸಲಾ ಸರಬರಾಜು ಮಾಡೋ ಮಾಹಿತಿ ಮೇರೆಗೆ ಮಧ್ಯ ರಾತ್ರಿ ಕಾರ್ಯಾಚರಣೆ ನಡೆಸಿದ ವಾಣಿಜ್ಯ ತೆರಿಗೆ ಅಧಿಕಾರಿಗಳು ಲಾರಿ ಚಾಲಕ ಹಾಗೂ ಕೆಲ ಸಿಬ್ಬಂದಿ ಗಳನ್ನ ಪೊಲೀಸರಿಗೆ ಒಪ್ಪಿಸಿದ್ದಾರೆ.

## ಲೋಕಾಯುಕ್ತರಿಂದ ಕುಂದುಕೊರತೆ ಆಲಿಕೆ

# 'ಭ್ರಷ್ಟಾಚಾರ ಮುಕ್ತ ಸಮಾಜಕ್ಕೆ ಎಲ್ಲರ ಸಹಕಾರ ಅಗತ್ಯ'

**ಬಸವಕಲ್ಯಾಣ, ಸೆ.21–** ಇಲ್ಲಿಯ ತಹಶೀಲ್ ಕಚೇರಿಯ ಸಭಾಂಗಣದಲ್ಲಿ ಲೋಕಾಯುಕ್ತ ಪೊಲೀಸರು ಸಾರ್ವಜನಿಕರ ಕುಂದು ಕೊರತೆಗಳು ಹಾಗೂ ಅಹವಾಲು ಸ್ವೀಕರಿಸಿದರು. ವಿವಿಧೆಡೆಯಿಂದ ಆಗಮಿಸಿದ ಸಾರ್ವಜನಿಕರು ತಮ್ಮ ದೂರುಗಳನ್ನು ಲೋಕಾ ಅಧಿಕಾರಿಗಳಿಗೆ ಸಲ್ಲಿಸಿದರು.

ಸ್ಥಳದಲ್ಲಿಯೇ ಅಧಿಕಾರಿಗಳ ಸಮ್ಮುಖದಲ್ಲಿ ಕೆಲ ಅರ್ಜಿಗಳ ಇತ್ಯರ್ಥ ಪಡಿಸಿದರು. ಅಹವಾಲು ಸ್ವೀಕಾರ ಹಿನ್ನಲೆಯಲ್ಲಿ ವಿವಿಧ ಇಲಾಖೆಯ ತಾಲ್ಲೂಕು ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು. ಅಧಿಕಾರಿಗಳು ಕಚೇರಿಗೆ ಬಂದ ನಂತರ ಕಚೇರಿಯ ಸಮಯದಲ್ಲಿ ಯಾವುದೇ ಕಾರಣಕ್ಕೂ ದ್ವಾರಗಳು ಬಂದ್ ಮಾಡಿ ಕೂಡಬೇಡಿ. ಇಂತಹ ವರದಿಗಳು ನಮ್ಮ ಗಮನಕ್ಕೆ ಬಂದಿವೆ. ಸಾರ್ವಜನಿಕರು ಕುಂದು ಕೊರತೆಗಳ ಅರ್ಜಿಗಳನ್ನು ಹಿಡಿದುಕೊಂಡು ನಿತ್ಯ ಕಚೇರಿಗೆ ಬರುತ್ತಾರೆ. ನೀವು



ಬಸವಕಲ್ಯಾಣದ ತಹಶೀಲ್ ಕಚೇರಿಯ ಸಭಾಂಗಣದಲ್ಲಿ ಲೋಕಾಯುಕ್ತ ಪೊಲೀಸರಿಂದ ಸಾರ್ವಜನಿಕರ ಕುಂದು ಕೊರತೆಗಳು ಹಾಗೂ ಅಹವಾಲು ಸ್ವೀಕಾರ ನಡೆಯಿತು.

ಕಚೇರಿಯ ದ್ವಾರಗಳು ಬಂದ್ ಮಾಡಿ ಕುಳಿತರೆ ಅವರು ಗಂಟೆಗಟ್ಟಲೇ ಕಾಯಬೇಕಾಗುತ್ತದೆ. ಹೀಗಾಗಿ

ನಿಗದಿತ ಸಮಯದಲ್ಲಿ ಆಗಮಿಸುವ ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸಬೇಕು ಎಂದು ಅಧಿಕಾರಿಗಳಿಗೆ ಲೋಕಾಯುಕ್ತ ಅಧಿಕಾರಿಗಳು ಸಲಹೆ ನೀಡಿದರು. ಈ ವೇಳೆ ಬೀದರ್ ಲೋಕಾಯುಕ್ತ ಡಿವೈಎಸ್‌ಪಿ ಹನುಮಂತರಾಯ ಮಾತನಾಡಿ ಜನರಿಗಾಗಿ ಜನರ ಸೇವೆಗಾಗಿ ಅಧಿಕಾರಿಗಳು ಕೆಲಸ ಮಾಡಬೇಕು. ಭ್ರಷ್ಟಾಚಾರ ಮುಕ್ತ ಸಮಾಜ ನಿರ್ಮಿಸಲು ಎಲ್ಲರ ಸಹಾಯ–ಸಹಕಾರ ಅವಶ್ಯಕವಾಗಿದೆ. ಲಂಚದ ಬೇಡಿಕೆ ಇಡುವದು ಕಾನೂನು ರೀತಿಯಲ್ಲಿ ಅಪರಾಧವಾಗಿದೆ. ಇಂತಹ ಪ್ರಕರಣದಲ್ಲಿ ದೂರು ಬಂದರೆ ಲೋಕಾ ಅಧಿಕಾರಿಗಳು ದಾಳಿ ನಡೆಸಿ ಪ್ರಕರಣ ದಾಖಲಿಸುತ್ತಾರೆ. ಹೀಗಾಗಿ ಇದಕ್ಕೆ ಅಧಿಕಾರಿಗಳು ಆಸ್ಪದ ನೀಡಬೇಡಿ. ತಮ್ಮ ಜವಬ್ದಾರಿ ಅರಿತು ಕರ್ತವ್ಯ ನಿರ್ವಹಿಸಿ ಜನರ ಸಮಸ್ಯೆಗಳಿಗೆ ಸ್ಪಂದಿಸಬೇಕು.

ಇತ್ತೀಚಿಗೆ ಹುಲಸೂರ ತಾಲ್ಲೂಕಿನ ಬೇಲೂರ ಹಾಗೂ ಗೋರ್ಟಾ (ಬಿ) ಗ್ರಾಪಂ ವ್ಯಾಪ್ತಿಯಲ್ಲಿ ನರೇಗಾ ಯೋಜನೆಯಡಿ ಎರಡು ಪ್ರಕರಣಗಳು ದಾಖಲಾಗಿದ್ದವು. ಈಗಾಗಲೇ ಬೇಲೂರ ಗ್ರಾಪಂ ವ್ಯಾಪ್ತಿಯಲ್ಲಿ ನಡೆದ ಅವ್ಯವಹಾರ ತನಿಖೆ ಪೂರ್ಣಗೊಂಡಿದ್ದು, ಗೋರ್ಟಾ ವ್ಯಾಪ್ತಿಯಲ್ಲಿನ ಪ್ರಕರಣ ವಿಚಾರಣೆಯ ಹಂತದಲ್ಲಿದ್ದು ಕೂಡಲೇ ತನಿಖೆ ಮುಗಿಸಿ ವರದಿ ಸಲ್ಲಿಸಲಾಗುವದು ಎಂದರು.


ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಮತ್ತು
ದಾವಣಗೆರೆ ಜಿಲ್ಲಾ ಉಸ್ತುವಾರಿ ಸಚಿವರಾದ
ಎಸ್.ಎಸ್. ಮಲ್ಲಿಕಾರ್ಜುನ
ಅವರಿಗೆ
ಜನ್ಮದಿನದ ಹಾರ್ದಿಕ ಶುಭಾಶಯಗಳು
22 ಸೆಪ್ಟೆಂಬರ್ 2024
ಶುಭಕೋರುವವರು,
ಅಭಿಮಾನಿಗಳು ಹಾಗೂ ಹಿತೈಷಿಗಳು, ದಾವಣಗೆರೆ ವಿಧಾನಸಭಾ ಕ್ಷೇತ್ರ, ಕರ್ನಾಟಕ